23 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 23 | ಸಂಚಿಕೆ 348 | ನವದೆಹಲಿ | ಬೆಲೆ ₹10 | ಜೂನ್ 23 2026, ಮಂಗಳವಾರ

## ಸಾಲಿಸಿಟರ್ ಜನರಲ್ ಮೆಹ್ತಾ ಅವಧಿ ಮೂರು ವರ್ಷ ವಿಸ್ತರಣೆ



**ನವದೆಹಲಿ, ಜೂ. 22:** ಹಿರಿಯ ವಕೀಲ ಮತ್ತು ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ಅವಧಿಯನ್ನು ಮತ್ತೆ ಮೂರು ವರ್ಷಗಳಿಗೆ ವಿಸ್ತರಿಸಿ ಕೇಂದ್ರ ಸರ್ಕಾರ ಆದೇಶ ಹೊರಡಿಸಿದೆ. ತುಷಾರ್ ಮೆಹ್ತಾ ಅವರು ಸಾಲಿಸಿಟರ್ ಜನರಲ್ ಆಗಿ ಮೂರು ವರ್ಷಗಳ ಅವಧಿಗೆ ಮರು ನೇಮಕ ಮಾಡಲು ಸಂಪುಟದ ನೇಮಕಾತಿ ಸಮಿತಿ (ಎಸಿಸಿ) ಅನುಮೋದನೆ ನೀಡಿದೆ. ಈ ಹಿನ್ನೆಲೆ ಸಿಬ್ಬಂದಿ, ಸಾರ್ವಜನಿಕ ಕುಂದುಕೊರತೆ ಮತ್ತು ಪಿಂಚಣಿ ಸಚಿವಾಲಯವು ಜೂ.20ರಂದು ಹೊಸ ಅಧಿಸೂಚನೆ ಹೊರಡಿಸಿದ್ದು, ಜುಲೈ 1ರಿಂದ ಅವರ ಮರು ನೇಮಕ ಜಾರಿಗೆ ಬರಲಿದೆ. ಮೆಹ್ತಾ ಅವರು ಕೇಂದ್ರ ಸರ್ಕಾರದ 2ನೇ ಅತ್ಯುನ್ನತ ಕಾನೂನು ಅಧಿಕಾರಿ ಆಗಿ ಹೊಸ ಅಧಿಕಾರಾವಧಿಯ ಅಂತ್ಯದ ವೇಳೆಗೆ 11 ವರ್ಷ ಪೂರ್ಣಗೊಳಿಸಲಿದ್ದಾರೆ. ಭಾರತದ ನ್ಯಾಯಾಂಗ ಇತಿಹಾಸದಲ್ಲಿ ಹೆಚ್ಚುಕಾಲ ಸೇವೆ ಸಲ್ಲಿಸಿದವರಲ್ಲಿ ಒಬ್ಬರಾಗುತ್ತಾರೆ. ಇನ್ನೂ ಜು.30ರಿಂದ ಜಾರಿಗೆ ಬರುವಂತೆ ಮೂರು ವರ್ಷಗಳ ಅವಧಿಗೆ ಹೆಚ್ಚುವರಿ ಸಾಲಿಸಿಟರ್ ಜನರಲ್‌ಗಳಾದ ಸೂರ್ಯಪ್ರಕಾಶ್ ವಿ. ರಾಜು, ಎನ್. ವೆಂಕಟರಾಮನ್, ಐಶ್ವರ್ಯ ಭಾಟಿ ಅವರನ್ನು ಮರು ನೇಮಕ ಮಾಡಲಾಗಿದೆ ಎಂದು ಎಸಿಸಿ ತನ್ನ ಅಧಿಸೂಚನೆಯಲ್ಲಿ ತಿಳಿಸಿದೆ. ಸುಪ್ರೀಂಕೋರ್ಟ್‌ಗೆ ಇಬ್ಬರು ಎಎಸ್‌ಜಿಗಳಾದ ವಿಕ್ರಮ್‌ಜಿ ಬ್ಯಾನರ್ಜಿ ಮತ್ತು ಕೆ.ಎಂ. ನಟರಾಜ್ ಅವರನ್ನೂ ಜು.30 ರಿಂದ ಜಾರಿಗೆ ಬರುವಂತೆ ಮೂರು ವರ್ಷಗಳ ಹೆಚ್ಚುವರಿ ಅವಧಿಗೆ ನೇಮಕ ಮಾಡಲಾಗಿದೆ.

# ಉದ್ಯೋಗಿಗಳಾಗುವುದಕ್ಕಿಂತ ಉದ್ಯೋಗದಾತರಾಗುವ ಗುರಿ ಇರಲಿ: ಸಿಎಂ

### ವಿದ್ಯಾರ್ಥಿಗಳಿಗೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕರೆ

**ಬೆಂಗಳೂರು, ಜೂ.22: ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಅವಕಾಶ ಕಲ್ಪಿಸುವ ಸ್ಕೌಟ್ ಕಾರ್ಯಕ್ರಮವನ್ನು 3 ವರ್ಷಗಳಿಗೆ ಸೀಮಿತಗೊಳಿಸದೇ, ಇದನ್ನು ಹೆಚ್ಚಿನ ಅವಧಿಗೆ ವಿಸ್ತರಿಸಿ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸಲಹೆ ನೀಡಿದ್ದಾರೆ.**

ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ರಾಜ್ಯ ಸರ್ಕಾರದ ಉನ್ನತ ಶಿಕ್ಷಣ ಇಲಾಖೆ ಮತ್ತು ಬ್ರಿಟಿಷ್ ಕೌನ್ಸಿಲ್ ಸಹಯೋಗದೊಂದಿಗೆ ಅತ್ಯುತ್ತಮ ಪ್ರತಿಭಾವಂತ ಪದವಿಪೂರ್ವ ವಿದ್ಯಾರ್ಥಿಗಳಿಗೆ ಹಮ್ಮಿಕೊಳ್ಳಲಾದ SCOUT-2.0 ಕಾರ್ಯಕ್ರಮಕ್ಕೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಸೋಮವಾರ ಚಾಲನೆ ನೀಡಿ ಮಾತನಾಡಿದರು.

ಇದು ಕೇವಲ ಪದವಿ ಪಡೆಯುವ ಕಾರ್ಯಕ್ರಮವಲ್ಲ. ಯುವ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ನೀಡಿ ಅವರ ಕ್ಷೇತ್ರಗಳಲ್ಲಿ ಅವರನ್ನು ನಾಯಕರನ್ನಾಗಿ ಬೆಳೆಸುವುದಾಗಿದೆ. ಈ ಅವಕಾಶ ಕೆಲವರಿಗೆ ಮಾತ್ರ ಸಿಗುತ್ತದೆ. ನೀವು ಕನಸು ಕಾಣಬೇಕು, ಆ ಕನಸು ನನಸಾಗಿಸಿಕೊಳ್ಳಲು ಹಂಬಲಿಸಬೇಕು. ಅದಕ್ಕಾಗಿ ಬದ್ಧರಾಗಿರಬೇಕು, ಶಿಸ್ತಿನ ಪರಿಶ್ರಮ ಹಾಕಬೇಕು. ನೀವು ನಿಮ್ಮ ಜೀವನದಲ್ಲಿ ಯಾವುದೇ ಹಂತಕ್ಕೆ ಹೋದರೂ ನಿಮ್ಮ ಮೂಲವನ್ನು ಮಾತ್ರ ಮರೆಯಬಾರದು. ನೀವು ನಿಮ್ಮ ಮೂಲವನ್ನು ಮರೆತರೆ ಯಶಸ್ಸು ಸಾಧಿಸಲು ಸಾಧ್ಯವಿಲ್ಲ. ಉದ್ಯೋಗಿಗಳಾಗುವುದಕ್ಕಿಂತ ಉದ್ಯೋಗದಾತರಾಗುವುದು ನಿಮ್ಮ ಗುರಿಯಾಗಲಿ? ಎಂದು ಸಲಹೆ ನೀಡಿದರು.



### ಕರ್ನಾಟಕ ಹಾಗೂ ಬೆಂಗಳೂರು ಪ್ರತಿಭಾನ್ವಿತರ ಕೇಂದ್ರ

ಕರ್ನಾಟಕ ಹಾಗೂ ಬೆಂಗಳೂರು ಪ್ರತಿಭಾನ್ವಿತರ ಕೇಂದ್ರ. ಇಡೀ ವಿಶ್ವ ನಮ್ಮ ಕಡೆ ನೋಡುತ್ತಿದೆ. ಕರ್ನಾಟಕದ ಮೂಲಕ ಭಾರತವನ್ನು ನೋಡಲಾಗುತ್ತಿದೆ. ನೀವು ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಎಂದು ಆತ್ಮವಿಶ್ವಾಸ ಕಳೆದುಕೊಳ್ಳಬಾರದು. ನಮ್ಮ ಕಾಲದಲ್ಲಿ ನಾವು ಕಷ್ಟಪಟ್ಟು ಓದಬೇಕಿತ್ತು. ಈಗ ಎಲ್ಲಾ ಮಾಹಿತಿ ನಿಮ್ಮ ಬೆರಳತುದಿಯಲ್ಲಿವೆ. ಈಗ ಶಿಕ್ಷಕರು ವಿದ್ಯಾರ್ಥಿಗಳಿಂದಲೇ ಪಾಠ ಮಾಡಿಸುವ ಮಟ್ಟಿಗೆ ಕಾಲ ಬದಲಾವಣೆಯಾಗಿದೆ. ಪ್ರತಿಯೊಬ್ಬರು ಸಮರ್ಥರು, ನೀವೆಲ್ಲರೂ ಜಾಗತಿಕ ಮಟ್ಟದಲ್ಲಿ ಸ್ಪರ್ಧೆ ಮಾಡುತ್ತಿದ್ದೀರಿ. ಈ ಸ್ಕೌಟ್ ಕಾರ್ಯಕ್ರಮದಲ್ಲಿ ನಿಮ್ಮ ಆಲೋಚನೆ ದೂರದೃಷ್ಟಿಯಾಗಿರಬೇಕು. ನಿಮ್ಮ ಮೇಲೆ ಸಾಕಷ್ಟು ನಿರೀಕ್ಷೆಗಳಿವೆ ಎಂದು ಡಿ.ಕೆ. ಶಿವಕುಮಾರ್ ತಿಳಿಸಿದರು. ನಮ್ಮ ಸರ್ಕಾರ ಹಾಗೂ ವಿವಿಗಳು ಈ ಕಾರ್ಯಕ್ರಮ ವಿಸ್ತರಣೆ ಮಾಡಲು ಸಿದ್ಧವಿದೆ. ನಮ್ಮ ವಿದ್ಯಾರ್ಥಿಗಳಿಗೆ ಅವಕಾಶ ಸಿಗಬೇಕು. ಇಲ್ಲಿಂದ ಬ್ರಿಟನ್‌ಗೆ ಹೋಗಿ ಅಲ್ಲೇ ನೆಲೆಸಬೇಡಿ, ಅಲ್ಲಿ ವ್ಯಾಸಂಗ ಮಾಡಿ ಭಾರತಕ್ಕೆ ಮರಳಿ, ಇಲ್ಲಿ ಕೆಲಸ ಮಾಡಿ. ಇಲ್ಲಿಗೆ ಬಂದು ನೀವು ನಿಮ್ಮ ಕ್ಷೇತ್ರದಲ್ಲಿ ಬೆಳೆಯಿರಿ. ವಿ.ವಿ.ಗಳ ಉಪಕುಲಪತಿಗಳು ಇನ್ನಷ್ಟು ಪ್ರತಿಭಾವಂತ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಬೇಕು. ವಿದ್ಯಾರ್ಥಿಗಳ ಪ್ರತಿಭೆಗೆ ಅನುಗುಣವಾಗಿ ಅವರನ್ನು ಗುರುತಿಸಿ, ಅವರಿಗೆ ಅವಕಾಶ ಕಲ್ಪಿಸಬೇಕು. ಕಳೆದ ವರ್ಷ ಗ್ರಾಮೀಣ ಭಾಗದ ಮಕ್ಕಳು ಉತ್ತಮ ಸಾಧನೆ ಮಾಡಿದ್ದನ್ನು ನೋಡಿದ್ದೇವೆ ಎಂದು ಸಿಎಂ ಹೇಳಿದರು.

ರಾಜ್ಯದ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಭೇಟಿ ಮಾಡಿರುವುದಕ್ಕೆ ಸಂತೋಷವಾಗಿದೆ. ಕರ್ನಾಟಕ ಎಂದರೆ ಬೆಂಗಳೂರು ಮಾತ್ರವಲ್ಲ. ಚಾಮರಾಜನಗರದಿಂದ ಬೀದರ್‌ವರೆಗೆ ಎಲ್ಲಾ ಗ್ರಾಮೀಣ ಪ್ರದೇಶದವರೆಗೆ ಎಲ್ಲಾ ಭಾಗದ ವಿದ್ಯಾರ್ಥಿಗಳು ಇದ್ದಾರೆ. ಎಲ್ಲಾ ವಿವಿಗಳು ಈ ಜವಾಬ್ದಾರಿ ವಹಿಸಿಕೊಂಡಿರುವುದು ಸಂತೋಷದ ವಿಚಾರ. ಬ್ರಿಟಿಷರು ಇಲ್ಲಿ ಆಳ್ವಿಕೆ ಮಾಡಿದ್ದರೂ ಅವರೊಂದಿಗೆ ಈ ಸಹಯೋಗ ಹಳೆಯದಾಗಿದೆ ಎಂದರು.

ಜ್ಞಾನ, ಆಲೋಚನೆಗಳ ವಿನಿಮಯ ಮುಂದುವರಿಸುತ್ತಿದ್ದೇವೆ. ಈ ಕಾರ್ಯಕ್ರಮದ ಮೂಲಕ ಕರ್ನಾಟಕ ಸರ್ಕಾರದ ಜೊತೆಗೆ ಕೈಜೋಡಿಸಿರುವ ಬ್ರಿಟಿಷ್ ಕೌನ್ಸಿಲ್‌ಗೆ ಧನ್ಯವಾದ ತಿಳಿಸುತ್ತೇನೆ. ನಾನು ಆಯ್ಕೆಯಲ್ಲಿ ಶಿಕ್ಷಣತಜ್ಞ, ಶಿಕ್ಷಣ ಎಲ್ಲರಿಗೂ ಅತಿ ಮುಖ್ಯವಾದುದು. ಈ ವಿದ್ಯಾರ್ಥಿಗಳು ನಮ್ಮ ರಾಯಭಾರಿಗಳು. ನಾಯಕರನ್ನು ತಯಾರು ಮಾಡುವವನೇ ನಿಜವಾದ ನಾಯಕ. ಇಲ್ಲಿರುವ ವಿದ್ಯಾರ್ಥಿಗಳು ನಾಯಕರೇ. ನೀವೆಲ್ಲರೂ ಸರಿಯಾದ ಹಾದಿಯಲ್ಲಿದ್ದೀರಿ. ನೀವು ಕರ್ನಾಟಕದ ಪ್ರತಿನಿಧಿಯಾಗಿದ್ದು, ನಿಮ್ಮ ಭವಿಷ್ಯ ಬದಲಿಸಿಕೊಳ್ಳಲು ಇದು ಉತ್ತಮ ಅವಕಾಶವಾಗಿದೆ ಎಂದರು.

## ಸಚಿವ ಸಂಪುಟ ವಿಸ್ತರಣೆ: ಅಂತಿಮ ನಿರ್ಧಾರ ವರಿಷ್ಠರದ್ದು

### ಹೈಕಮಾಂಡ್ ನೀಡುವ ಪಟ್ಟಿಯನ್ನು ಅನುಷ್ಠಾನವಷ್ಟೇ ನನ್ನ ಕೆಲಸ : ಸಿಎಂ ಡಿ.ಕೆ. ಶಿವಕುಮಾರ್

**ಬೆಂಗಳೂರು, ಜೂ. 22:** "ಸಚಿವ ಸಂಪುಟ ವಿಸ್ತರಣೆ ಮಾಡುವುದು ಹೈಕಮಾಂಡ್. ಅವರು ಕೊಟ್ಟ ಪಟ್ಟಿಯನ್ನು ಅನುಷ್ಠಾನಗೊಳಿಸುವುದು ನನ್ನ ಕೆಲಸ. ನೀವು ಸಲೀಂ ಅಹ್ಮದ್ ಅವರಿಗೆ ಒಳ್ಳೆಯದಾಗಲಿ ಎಂದು ಮನವಿ ಮಾಡಿದ್ದೀರಿ, ನಿಮ್ಮ ಮನವಿಯನ್ನು ಹೈಕಮಾಂಡ್ ನಾಯಕರಿಗೆ ತಲುಪಿಸುತ್ತೇನೆ" ಎಂದು ಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು.



ಉತ್ತರ ಕರ್ನಾಟಕ ಭಾಗದ 14 ಜಿಲ್ಲೆಗಳ ವಿವಿಧ ದರ್ಗಾಗಳ ಮುಖಸ್ಥರು ಸೋಮವಾರ ಶಿವಕುಮಾರ್ ಅವರನ್ನು ಭೇಟಿಮಾಡಿ ಎಂಎಲ್‌ಸಿ ಸಲೀಂ ಅಹ್ಮದ್ ಅವರನ್ನು ಸಚಿವ ಸಂಪುಟದಲ್ಲಿ ಸೇರ್ಪಡೆ ಮಾಡಿಕೊಳ್ಳಬೇಕು ಎಂದು ಸೋಮವಾರ ಮನವಿ ಮಾಡಿದರು. ಈ ವೇಳೆ ಮಾತನಾಡಿದ ಸಿಎಂ, ಎಲ್ಲ ಜಾತಿ, ಧರ್ಮಗಳನ್ನು ಒಟ್ಟಾಗಿ ತೆಗೆದುಕೊಂಡು ಹೋಗುವುದೇ ನಮ್ಮ ಸಿದ್ಧಾಂತ. ಅಲ್ಪಸಂಖ್ಯಾತ ಸಮುದಾಯ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಿದೆ. ನಿಮ್ಮೆಲ್ಲರ ಆಶೀರ್ವಾದದಿಂದ ಕಾಂಗ್ರೆಸ್ ಪಕ್ಷ 136 ಸ್ಥಾನಗಳನ್ನು ಗೆದ್ದಿದೆ ಎಂದರು. ಈಗ ಮನ್ಸೂರ್‌ಅಲಿಖಾನ್ ಅವರನ್ನು ರಾಜ್ಯಸಭೆಗೆ ಆಯ್ಕೆ ಮಾಡಿದೆವು. ಯು.ಟಿ ಖಾದರ್ ಕಳೆದ ಬಾರಿಯೇ ಮಂತ್ರಿ ಆಗಬೇಕಿತ್ತು. ಆದರೆ ಅವರು ತ್ಯಾಗ ಮಾಡಿ, ಸ್ಪೀಕರ್ ಆದರು. ಅವರಿಗೆ ನಾವು ನೀವು ಬಯಸಿದ ಖಾತೆ ನೀಡುವುದಾಗಿ ಮಾತು ಕೊಟ್ಟಿದ್ದವು. ಈಗ ಆರೋಗ್ಯ ಇಲಾಖೆ ನೀಡಿದ್ದೇವೆ" ಎಂದರು.

"ಈ ಮಧ್ಯೆ ಅನೇಕ ಗೊಂದಲವಾಗಿದ್ದು, ಕೆಲವು ಸ್ವಾಮೀಜಿಗಳು ಸೇರಿದಂತೆ ಮತ್ತೊಬ್ಬರನ್ನು ಮಂತ್ರಿ ಮಾಡಿ ಎಂದು ಹೇಳುತ್ತಿದ್ದಾರೆ. ನೀವುಗಳು ಸಲೀಂ ಅಹ್ಮದ್ ಅವರನ್ನು ಮಾಡಿ ಎಂದು ಹೇಳುತ್ತಿದ್ದೀರಿ. ಹೀಗೆ ಒಕ್ಕಲಿಗರು, ಲಿಂಗಾಯತರು, ಕ್ರೈಸ್ತ ಸಮುದಾಯದವರು ಒಬ್ಬೊಬ್ಬರ ಹೆಸರು ಹೇಳುತ್ತಿದ್ದಾರೆ. ಈ ಪರಿಸ್ಥಿತಿಯಲ್ಲಿ ರಾಜಕೀಯವಾಗಿ ತೀರ್ಮಾನ ಮಾಡಲು ಕಷ್ಟವಾಗುತ್ತದೆ. ನಾನು ನಮ್ಮ ಕಷ್ಟವನ್ನು ನಿಮ್ಮ ಜೊತೆ ಹಂಚಿಕೊಳ್ಳುತ್ತಿರುವೆ. ಪಕ್ಷದ ಎಲ್ಲಾ ಅಲ್ಪಸಂಖ್ಯಾತ ಮುಖಂಡರು ಚೆನ್ನಾಗಿ ಕೆಲಸ ಮಾಡಿದ್ದಾರೆ. ನಾನು ವರಿಷ್ಠರ ಜೊತೆ ಚರ್ಚೆ ಮಾಡಿ ತೀರ್ಮಾನ ಮಾಡುತ್ತೇವೆ" ಎಂದರು.

ನಿಮ್ಮಂತೆ ಲಂಬಾಣಿ ಸಮುದಾಯ, ಮರಾಠಿ ಸಮುದಾಯದವರು ಬಂದು ಮಂತ್ರಿ ಸ್ಥಾನ ಕೇಳಿದರು. ಹಿಂದುಳಿದವರು ಬಂದು ಸಂತೋಷ್ ಲಾಡ್, ಶ್ರೀನಿವಾಸ್ ಮಾನೆಗೆ ನೀಡಿ ಎನ್ನುತ್ತಿದ್ದಾರೆ. ಕುರುಬ ಸಮುದಾಯದವರು ಶಿವಣ್ಣ ಅವರಿಗೆ ನೀಡಿ ಎಂದು ಹೇಳುತ್ತಿದ್ದಾರೆ. ಲಕ್ಷ್ಮಣ ಸವದಿ ಡಿಸಿಎಂ ಆಗಿದ್ದವರು. ಕಷ್ಟಕಾಲದಲ್ಲಿ ಪಕ್ಷಕ್ಕೆ ಬಂದರು. ಅವರಿಗೆ ಮಾತು ಕೊಟ್ಟಿದ್ದೆವು. ಅವರು ಕೇಳುತ್ತಿದ್ದಾರೆ" ಎಂದು ವಿವರಿಸಿದರು.

"ಮಹೇಶ್ ಕೌಜಲಗಿ, ಅಪ್ಪಾಜಿ ನಾಡಗೌಡ, ಶಿವಾನಂದ ಪಾಟೀಲ್, ಯಶವಂತರಾಯಗೌಡ ಪಾಟೀಲ್, ಜಿ.ಎಸ್. ಪಾಟೀಲ್ ಎಲ್ಲರೂ ಕೇಳುತ್ತಿದ್ದಾರೆ. ನಮ್ಮ ಪರಿಸ್ಥಿತಿಯನ್ನು ನೀವು ಅರ್ಥ ಮಾಡಿಕೊಳ್ಳುತ್ತೀರಿ ಎಂದು ಭಾವಿಸಿರುವೆ. ಪಕ್ಷ ಹಾಗೂ ಸರ್ಕಾರದಲ್ಲಿ ಯಾರನ್ನು ಯಾವ ರೀತಿ ಬಳಸಿಕೊಳ್ಳಬೇಕು, ಕೆಲವೊಮ್ಮೆ ಕೆಲವರು ತ್ಯಾಗ ಮಾಡಬೇಕಾಗುತ್ತದೆ" ಎಂದು ಹೇಳಿದರು.

### ಹೊಸಬರಿಗೂ ಅವಕಾಶ

ಹೆಚ್ಚಿನ ಸಂಖ್ಯೆಯಲ್ಲಿ ಶಾಸಕರಿರುವ ಕಾರಣ, ಪರಿಷತ್‌ನಿಂದ ಎಷ್ಟು ಜನರಿಗೆ ಮಂತ್ರಿ ಸ್ಥಾನ ನೀಡಬೇಕು ಎಂಬ ಗೊಂದಲ ಇದೆ. ಐದಾರು ಬಾರಿ ಹಿರಿಯರಿಗೆ ಅಧಿಕಾರ ನೀಡಲು ಆಗಿಲ್ಲ. ಇಲ್ಲಿ ವೈಷಮ್ಯ ಆಗುವುದು ಬೇಡ. ನಾನು, ಜಾರ್ಜ್, ಅಪ್ಪಾಜಿ ನಾಡಗೌಡ, ನಜೀರ್ ಸೇರಿದಂತೆ ಅನೇಕ ನಾಯಕರು ಬಂಗಾರಪ್ಪ ಅವರ ಕಾಲದಲ್ಲಿ ಮೊದಲ ಬಾರಿ ಶಾಸಕರಾದಾಗಲೇ ಮಂತ್ರಿ ಆದೆವು. ಈಗ ಆ ಪರಿಸ್ಥಿತಿ ಇಲ್ಲ. ಹೊಸಬರಿಗೆ ಅವಕಾಶ ನೀಡಬೇಕು ಎಂದು ಹೇಳಿದ್ದೇನೆ. ದೆಹಲಿಯವರು ಆಲೋಚನೆ ಮಾಡುತ್ತಿದ್ದಾರೆ. ನನ್ನ ಜೊತೆ ಇನ್ನೂ ಚರ್ಚೆ ಮಾಡಿಲ್ಲ" ಎಂದು ಡಿ.ಕೆ. ಶಿವಕುಮಾರ್ ಹೇಳಿದರು. ನಾನು ಯಾರನ್ನೂ ನೋಯಿಸಲು, ಗುಂಪುಗಾರಿಕೆ ಮಾಡಲು ಬಯಸುವುದಿಲ್ಲ. ನಮ್ಮದು ಒಂದೇ ಗುಂಪು ಕಾಂಗ್ರೆಸ್ ಗುಂಪು. ನಮ್ಮದು ಒಂದೇ ಧರ್ಮ ಕಾಂಗ್ರೆಸ್. ನಮ್ಮ ರಾಜ್ಯದವರೇ ಆದ ಮಲ್ಲಿಕಾರ್ಜುನ ಖರ್ಗೆಯವರು ತಮ್ಮದೇ ಆದ ಆಲೋಚನೆ ಮಾಡುತ್ತಾರೆ. ಅವರಿಗೂ ಅನೇಕ ಇಕ್ಕಟ್ಟಿನ ಪರಿಸ್ಥಿತಿ ಇದೆ. ಕಳೆದ ಬಾರಿ ಅವರೇ ಒತ್ತಾಯ ಮಾಡಿ ರಹೀಮ್ ಖಾನ್ ಅವರಿಗೆ ಮಂತ್ರಿ ಸ್ಥಾನ ನೀಡಿದ್ದರು ಎಂದರು.

ಅಲ್ಪಸಂಖ್ಯಾತರ ಅಭಿವೃದ್ಧಿಗೆ ನನ್ನದೇ ಆದ ಹೊಸ ಚಿಂತನೆ ಇದೆ. ಹಿಂದುಳಿದವರು, ಪರಿಶಿಷ್ಟ ಜಾತಿ ಹಾಗೂ ಪಂಗಡ ಸಮುದಾಯಗಳಿಗೆ ಶಕ್ತಿ ತುಂಬಲು ತಿದ್ದುಪಡಿ ತರಲು ತೀರ್ಮಾನಿಸಿದ್ದೇವೆ. ಈ ಎಲ್ಲಾ ವಿಚಾರ ಮುಂದಕ್ಕೆ ತಿಳಿಸುತ್ತೇವೆ" ಎಂದು ಮುಖ್ಯಮಂತ್ರಿ ತಿಳಿಸಿದರು.


## ನೀಟ್ ಮರುಪರೀಕ್ಷೆ: 9 ನಕಲಿ ಅಭ್ಯರ್ಥಿಗಳು ಸೇರಿ 30 ಮಂದಿ ಬಂಧನ

ಪಟನಾ, ಜೂ.22: ನೀಟ್ ಮರು ಪರೀಕ್ಷೆಯಲ್ಲಿ ಮತ್ತೊಂದು ಅಕ್ರಮ ಬಹಿರಂಗವಾಗಿದೆ. ಇತರ ಅಭ್ಯರ್ಥಿಗಳ ಬದಲಿಗೆ ಪರೀಕ್ಷೆ ಬರೆಯಲು ಹಾಜರಾಗಿದ್ದ ಒಂಬತ್ತು ಆರೋಪಿಗಳು ಸೇರಿ ತಪಾಸಣೆಯ ಸಮಯದಲ್ಲಿ ಅಕ್ರಮ ಎಸಗಲು ಪ್ರಯತ್ನಿಸಿದ ಒಟ್ಟು 30 ಜನರನ್ನು ಬಂಧಿಸಲಾಗಿದೆ.

ಬಿಹಾರದ ಲಖಿಸರೈನ ವಿವಿಧ ಪರೀಕ್ಷಾ ಕೇಂದ್ರಗಳಲ್ಲಿ ಈ ಅಕ್ರಮ ಬಯಲಾಗಿದೆ. ಕೆಆರ್‌ಕೆ ಪ್ರೌಢಶಾಲಾ ಪರೀಕ್ಷಾ ಕೇಂದ್ರದಲ್ಲಿ ಒಬ್ಬ, ಕೇಂದ್ರೀಯ ವಿದ್ಯಾಲಯದಲ್ಲಿ ಏಳು ಮತ್ತು ಹಸನ್ಪುರ ಶಾಲಾ ಪರೀಕ್ಷಾ ಕೇಂದ್ರದಲ್ಲಿ ಒಬ್ಬ ನಕಲಿ ವ್ಯಕ್ತಿಯನ್ನು ಬಂಧಿಸಲಾಗಿದೆ. ಬಂಧಿತ ವ್ಯಕ್ತಿಗಳು ವಿವಿಧ ಜಿಲ್ಲೆಗಳವರು ಎಂದು ವರದಿಯಾಗಿದೆ. ಬಂಧಿತ ಆರೋಪಿಗಳನ್ನು ಎಸ್‌ಡಿಎಂ ಪ್ರಭಾಕರ್ ಕುಮಾರ್ ಮತ್ತು ಎಸ್‌ಡಿಪಿಒ ಶಿವಂ ಕುಮಾರ್ ಅವರ ಮೇಲ್ವಿಚಾರಣೆಯಲ್ಲಿ ವಿಚಾರಣೆ ನಡೆಸಲಾಗುತ್ತಿದೆ. ವಿಚಾರಣೆಯ ಸಮಯದಲ್ಲಿ ಪಡೆದ ಮಾಹಿತಿಯ ಆಧಾರದ ಮೇಲೆ, ವಿಶೇಷ ಪೊಲೀಸ್ ತಂಡವು ಪ್ರಕರಣಕ್ಕೆ ಸಂಬಂಧಿಸಿದ ಸಂಭಾವ್ಯ ಸ್ಥಳಗಳಲ್ಲಿ ದಾಳಿ ನಡೆಸುತ್ತಿದೆ. ಜಿಲ್ಲಾ ಮ್ಯಾಜಿಸ್ಟ್ರೇಟ್ ಶೈಲೇಂದ್ರ ಕುಮಾರ್ ಮತ್ತು ಪೊಲೀಸ್ ವರಿಷ್ಠಾಧಿಕಾರಿ ಪ್ರೇರಣಾ ಕುಮಾರ್ ಅವರು ತನಿಖೆಯನ್ನು ವೈಯಕ್ತಿಕವಾಗಿ ಮೇಲ್ವಿಚಾರಣೆ ಮಾಡುತ್ತಿದ್ದಾರೆ. ಆಪಾದಿತ ಜಾಲದಲ್ಲಿ ಇನ್ನಷ್ಟು ಜನರು ಭಾಗಿಯಾಗಿರಬಹುದು ಎಂದು ಅಧಿಕಾರಿಗಳು ಶಂಕಿಸಿದ್ದು, ತನಿಖೆಯ ನಂತರ ಮುಂದಿನ ಕ್ರಮ ಕೈಗೊಳ್ಳಬಹುದು.

ನೀಟ್ ಮರು ಪರೀಕ್ಷೆಯ ಸಂದರ್ಭದಲ್ಲಿ 30 ಜನರನ್ನು ಬಂಧಿಸಲಾಗಿದೆ ಎಂದು ಎಸ್‌ಡಿಪಿಒ ಶಿವಂ ಕುಮಾರ್ ತಿಳಿಸಿದ್ದಾರೆ. ಅವರಲ್ಲಿ ಒಂಬತ್ತು ಮಂದಿ ಇತರ ಅಭ್ಯರ್ಥಿಗಳ ಪರವಾಗಿ ಪರೀಕ್ಷೆ ಬರೆಯುತ್ತಿದ್ದರು ಎಂದು ಹೇಳಲಾಗಿದ್ದು, ಇತರ 21 ಮಂದಿ ವಂಚನೆಗೆ ಸಂಬಂಧಿಸಿರುವುದು ಕಂಡುಬಂದಿದೆ. ತನಿಖೆ ನಡೆಯುತ್ತಿರುವುದರಿಂದ ಜಿಲ್ಲಾಡಳಿತವು ಇನ್ನೂ ಹೆಚ್ಚಿನ ವಿವರಗಳನ್ನು ಹಂಚಿಕೊಂಡಿಲ್ಲ. ತನಿಖೆ ಪೂರ್ಣಗೊಂಡ ನಂತರ ಸಂಪೂರ್ಣ ಜಾಲವನ್ನು ಬಹಿರಂಗಪಡಿಸಲಾಗುವುದು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

## ಬ್ರಿಟನ್ ಪ್ರಧಾನಿ ಕೀರ್ ಸ್ಟಾರ್ಮರ್ ರಾಜೀನಾಮೆ



ಲಂಡನ್, ಜೂ. 22: ತೀವ್ರ ರಾಜಕೀಯ ಆರ್ಥಿಕ ಬಿಕ್ಕಟ್ಟು ಹಾಗೂ ಸ್ವಪಕ್ಷದೊಳಗಿನ ಭಾರಿ ಒತ್ತಡಕ್ಕೆ ಮಣಿದ ಬ್ರಿಟನ್ ಪ್ರಧಾನಿ ಕೀರ್ ಸ್ಟಾರ್ಮರ್ ತಮ್ಮ ಹುದ್ದೆಗೆ ಸೋಮವಾರ ಅಧಿಕೃತವಾಗಿ ರಾಜೀನಾಮೆ ಘೋಷಿಸಿದ್ದಾರೆ.

ಜುಲೈ 2024ರ ಸಾರ್ವತ್ರಿಕ ಚುನಾವಣೆಯಲ್ಲಿ ಲೇಬರ್ ಪಕ್ಷವನ್ನು ಭರ್ಜರಿ ಗೆಲುವಿನತ್ತ ಮುನ್ನಡೆಸಿದ್ದ ಸ್ಟಾರ್ಮರ್, ಕೇವಲ ಎರಡು ವರ್ಷಗಳಲ್ಲೇ ಅಧಿಕಾರದಿಂದ ಕೆಳಗಿಳಿಯುವಂತಾಗಿರುವುದು ಬ್ರಿಟನ್ ರಾಜಕೀಯದಲ್ಲಿ ನಾಟಕೀಯ ತಿರುವು ನೀಡಿದೆ. ಆಡಳಿತಾರೂಢ ಲೇಬರ್ ಪಕ್ಷದೊಳಗೆ ಸ್ಟಾರ್ಮರ್ ನಾಯಕತ್ವದ ವಿರುದ್ಧ ದೊಡ್ಡ ಮಟ್ಟದ ಅಸಮಾಧಾನ ಸ್ಫೋಟಗೊಂಡಿತ್ತು. ಹೀಗಾಗಿ ಪಕ್ಷದ ಒಳಗಿನ ತೀವ್ರ ರಾಜಕೀಯ ಒತ್ತಡದಿಂದಾಗಿ ಅವರು ರಾಜೀನಾಮೆ ನೀಡುವ ನಿರ್ಧಾರಕ್ಕೆ ಬಂದಿದ್ದಾರೆ.

ಕಳೆದ 10 ವರ್ಷಗಳಲ್ಲಿ ರಾಜೀನಾಮೆ ನೀಡಿದ ಆರನೇ ಪ್ರಧಾನಿ ಇವರಾಗಿದ್ದಾರೆ. ಲಂಡನ್‌ನ ಪ್ರಧಾನಿಯವರ ಅಧಿಕೃತ ನಿವಾಸ ನಂ.10 ಡೌನಿಂಗ್ ಸ್ಟ್ರೀಟ್‌ನ ಹೊರಗೆ ರಾಷ್ಟ್ರವನ್ನುದ್ದೇಶಿಸಿ ಮಾತನಾಡಿದ ಅವರು, ಮುಂದಿನ ಚುನಾವಣೆಗೆ ಪಕ್ಷವನ್ನು ಮುನ್ನಡೆಸಲು ನಾನು ಸರಿಯಾದ ವ್ಯಕ್ತಿಯೇ ಎಂದು ನನ್ನ ಪಕ್ಷ ಕೇಳುತ್ತಿದ್ದ ಪ್ರಶ್ನೆಗೆ ಉತ್ತರ ಸಿಕ್ಕಿದೆ. ಅದಕ್ಕಾಗಿಯೇ ರಾಜೀನಾಮೆ ನೀಡುತ್ತಿದ್ದೇನೆ ಎಂದು ಭಾವುಕರಾಗಿ ನುಡಿದರು. ಹೊಸ ಲೇಬರ್ ಪಕ್ಷದ ನಾಯಕನನ್ನು ಆಯ್ಕೆ ಮಾಡುವ ಪ್ರಕ್ರಿಯೆಯನ್ನು ಜುಲೈನಲ್ಲಿ ಪ್ರಾರಂಭಿಸಲಾಗುವುದು ಮತ್ತು ಸೆಪ್ಟೆಂಬರ್‌ನಲ್ಲಿ ಉತ್ತರಾಧಿಕಾರಿಯನ್ನು ಆಯ್ಕೆ ಮಾಡುವವರೆಗೆ ತಾವು ಪ್ರಧಾನಿಯಾಗಿ ಮುಂದುವರೆಯುವುದಾಗಿ ಸ್ಟಾರ್ಮರ್ ತಿಳಿಸಿದ್ದಾರೆ.

"ನಾನು ತೆಗೆದುಕೊಂಡ ಪ್ರತಿಯೊಂದು ನಿರ್ಧಾರವೂ ನಾನು ಪ್ರೀತಿಸುವ ನನ್ನ ದೇಶವನ್ನು ಮೊದಲ ಸ್ಥಾನದಲ್ಲಿಟ್ಟು ಕೈಗೊಂಡ ನಿರ್ಧಾರಗಳಾಗಿದ್ದವು. ಇಂದಿನ ಬ್ರಿಟನ್ ದೇಶವು ಎರಡು ವರ್ಷಗಳ ಹಿಂದಿಗಿಂತಲೂ ಹೆಚ್ಚು ಬಲಿಷ್ಠವಾಗಿದೆ ಮತ್ತು ನ್ಯಾಯಯುತವಾಗಿದೆ. ನನ್ನ ನಂತರ ಬರುವ ಹೊಸ ಪ್ರಧಾನಿಗೆ ನಾನು ಸಂಪೂರ್ಣ ಬೆಂಬಲ ನೀಡುತ್ತೇನೆ ಮತ್ತು ಅಧಿಕಾರ ಹಸ್ತಾಂತರವು ಸುಗಮವಾಗಿ ನಡೆಯುವಂತೆ ನೋಡಿಕೊಳ್ಳುತ್ತೇನೆ ಎಂದರು.


**ಮುಂದಿನ ಪ್ರಧಾನಿ ಯಾರು?:** ಕಳೆದ ವಾರ ನಡೆದ ಸಂಸತ್ ಉಪಚುನಾವಣೆಯಲ್ಲಿ ಗೆದ್ದ ಆಂಡಿ ಬರ್ನ್‌ಹ್ಯಾಮ್ ಅವರು ಮುಂದಿನ ಪ್ರಧಾನಿಯಾಗುವ ಸಾಧ್ಯತೆ ಇದ್ದು, ಆಡಳಿತರೂಢ ಲೇಬರ್ ಪಕ್ಷದ ನಾಯಕರಾಗಿ ಸ್ಟಾರ್ಮರ್ ನಂತರ ಮುಂಚೂಣಿಯಲ್ಲಿದ್ದಾರೆ. ಮಾಜಿ ಆರೋಗ್ಯ ಕಾರ್ಯದರ್ಶಿ ವೆಸ್ ಸ್ಟ್ರೀಟಿಂಗ್ ಕೂಡ ರೇಸ್‌ನಲ್ಲಿದ್ದಾರೆ.

### ಜೂ.27ರಂದು ದೆಹಲಿಗೆ ಸಿಎಂ: ಸಂಪುಟ ವಿಸ್ತರಣೆ ಕುರಿತು ವರಿಷ್ಠರ ಜತೆ ಚರ್ಚೆ

**ಬೆಂಗಳೂರು, ಜೂ.22: ರಾಜ್ಯ ರಾಜಕಾರಣದಲ್ಲಿ ಕುತೂಹಲ ಮೂಡಿಸಿರುವ ಸಚಿವ ಸಂಪುಟ ವಿಸ್ತರಣೆ ವಿಚಾರವಾಗಿ ಸಿಎಂ ಡಿ.ಕೆ. ಶಿವಕುಮಾರ್ ಅವರು ಜೂ.27ರಂದು ದೆಹಲಿಗೆ ತೆರಳಲಿದ್ದಾರೆ. ಅಂದು ಕೆಂಪೇಗೌಡ ಜಯಂತಿಯನ್ನು ಆಚರಿಸಿದ ಬೆನ್ನಲ್ಲೇ ದೆಹಲಿ ಪ್ರವಾಸ ಕೈಗೊಳ್ಳಲಿದ್ದಾರೆ. ಮೂಲಗಳ ಪ್ರಕಾರ, ಜುಲೈ ಮೊದಲ ವಾರದಲ್ಲಿ ರಾಜ್ಯ ಸಚಿವ ಸಂಪುಟ ಪುನಾರಚನೆ ಅಥವಾ ವಿಸ್ತರಣೆ ಪ್ರಕ್ರಿಯೆಗಳು ನಡೆಯುವ ಸಾಧ್ಯತೆಗಳು ದಟ್ಟವಾಗಿವೆ. ಈ ಹಿನ್ನೆಲೆಯಲ್ಲಿ ಸಿಎಂ ಡಿ.ಕೆ. ಶಿವಕುಮಾರ್ ಅವರ ದೆಹಲಿ ಭೇಟಿ ಅತ್ಯಂತ ಮಹತ್ವ ಪಡೆದುಕೊಂಡಿದೆ. ಹಾಲಿ ಸಚಿವರಲ್ಲಿ ಯಾರನ್ನು ಸಂಪುಟದಿಂದ ಕೈಬಿಡಬೇಕು ಮತ್ತು ಹೊಸ ಮುಖಗಳಿಗೆ ಹೇಗೆ ಅವಕಾಶ ಕಲ್ಪಿಸಬೇಕು ಎಂಬುದರ ಕುರಿತು ಹೈಕಮಾಂಡ್ ನಾಯಕರೊಂದಿಗೆ ಮುಖ್ಯಮಂತ್ರಿಗಳು ಸುದೀರ್ಘವಾಗಿ ಚರ್ಚಿಸಿ ಅಂತಿಮ ಒಪ್ಪಿಗೆ ಪಡೆದುಕೊಳ್ಳಲಿದ್ದಾರೆ ಎಂದು ಹೇಳಲಾಗುತ್ತಿದೆ.**



## ನಿತ್ಯ ಪಂಚಾಂಗ 23.06.2026 ಮಂಗಳವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ಉತ್ತರಾಯಣ–ವಸಂತ/ಗ್ರೀಷ್ಮ ಋತು, ಚಾಂದ್ರಮಾನ, ವೈಶಾಖ – ಜ್ಯೇಷ್ಠ ಮಾಸ

ನಿಜ ಜ್ಯೇಷ್ಠ ಶುದ್ಧ, ನವಮಿ,
ಹಸ್ತ ನಕ್ಷತ್ರ,
ಉಪೋಷ್ಯಾದೇವಿ ಪೂಜಾ,
ಶ್ರೀರಂಗಪಟ್ಟಣ ರಥ,
ಶ್ರೀಶೈಲ ಸಾರಂಗಮಠ ಪುಣ್ಯದಿನ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | ಸ.5.04–6.33 | 12.00–1.30 | 3.00–4.00 |
| ಸೋಮ | ಬೆ.7.20–9.04 | 10.30–12.00 | 1.30–12.00 |
| ಮಂಗಳ | ಮ.3.25–4.59 | 9.00–10.30 | 12.00–1.30 |
| ಬುಧ | ಮ.12.16–1.50 | 7.30–9.00 | 10.30–12.00 |
| ಗುರು | ಮ.1.50–3.29 | 6.00–7.30 | 9.00–10.30 |
| ಶುಕ್ರ | ಬೆ.10.42–12.16 | 3.00–4.30 | 7.30–9.00 |
| ಶನಿ | ಬೆ.9.07–10.41 | 1.30–3.00 | 6.00–7.30 |

# ಬಿಡದಿ ಟೌನ್‌ಶಿಪ್: ಭೂಮಿ ನೀಡಲು ರೈತರ ಅಭಿಪ್ರಾಯ ಕೇಳೋಣ ಬನ್ನಿ

### ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್‌ಗೆ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಆಹ್ವಾನ

### ದಾಖಲೆ ಪ್ರದರ್ಶಿಸಿ ಸರ್ಕಾರದ ವಿರುದ್ಧ ಆಕ್ರೋಶ



**ಬೆಂಗಳೂರು, ಜೂ.22:** ಇತ್ತೀಚೆಗೆ ರಾಜ್ಯ ರಾಜಕೀಯದಲ್ಲಿ ಭಾರೀ ಚರ್ಚೆಗೆ ಕಾರಣವಾಗಿರುವ ಬಿಡದಿ ಸ್ಮಾರ್ಟ್‌ಸಿಟಿ ಟೌನ್‌ಶಿಪ್ ಯೋಜನೆ ವಿಚಾರವಾಗಿ ಕಾಂಗ್ರೆಸ್ ಸರ್ಕಾರದ ವಿರುದ್ಧ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರು ದಾಖಲೆಗಳ ಸಮೇತ ಗುಡುಗಿದ್ದಾರೆ.

ನಗರದಲ್ಲಿ ಸೋಮವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಸಿಎಂ ಡಿ.ಕೆ. ಶಿವಕುಮಾರ್ ಅವರಿಗೆ ಬಹಿರಂಗ ಸವಾಲು ಹಾಕಿದ್ದಾರೆ. ನಿಮಗೆ ಧೈರ್ಯವಿದ್ದರೆ ನನ್ನ ಜೊತೆ ಬೈರಮಂಗಲಕ್ಕೆ ಬನ್ನಿ. ಅಲ್ಲಿನ ಸಣ್ಣ ಸಣ್ಣ ರೈತರ ಯೋಜನೆಗಾಗಿ ಭೂಮಿ ಕೊಡಲು ಒಪ್ಪಿದ್ದಾರಾ ಇಲ್ಲವಾ ಎಂದು ಸಾರ್ವಜನಿಕವಾಗಿಯೇ ಕೇಳೋಣ" ಎಂದು ಆಹ್ವಾನ ನೀಡಿದ್ದಾರೆ.

ತಮ್ಮ ಅವಧಿಯ ನಿರ್ಧಾರಗಳನ್ನು ಉಲ್ಲೇಖಿಸಿದ ಕುಮಾರಸ್ವಾಮಿ, 2006ರಲ್ಲಿ ತಾವು ಮುಖ್ಯಮಂತ್ರಿಯಾಗಿದ್ದಾಗ 5 ಕಡೆ ಟೌನ್‌ಶಿಪ್ ಯೋಜನೆ ಘೋಷಿಸಿದ್ದು ನಿಜ. ಆದರೆ 2007ರ ಜುಲೈನಲ್ಲಿ ನಡೆದ ವಿಧಾನಸಭಾ ಅಧಿವೇಶನದಲ್ಲಿ ಇದೇ ಸಿದ್ದರಾಮಯ್ಯ ಮತ್ತು ಡಿ.ಕೆ. ಶಿವಕುಮಾರ್ ಈ ಯೋಜನೆಯನ್ನು ವಿರೋಧಿಸಿದ್ದರು. ಇದನ್ನು ರಿಯಲ್ ಎಸ್ಟೇಟ್ ಮಾಫಿಯಾ, ಫಲವತ್ತಾದ ಭೂಮಿಯನ್ನು ರೈತರು ಕೊಡಬಾರದು ಎಂದು ಸದನದಲ್ಲಿ ಭಾಷಣ ಮಾಡಿದ್ದರು. ಆ ಅಧಿವೇಶನದ ನಡಾವಳಿಗಳ ಪ್ರತಿಗಳು ಇಂದಿಗೂ ನನ್ನ ಬಳಿ ಇವೆ. ರೈತರ ತೀವ್ರ ವಿರೋಧ ವ್ಯಕ್ತವಾದ ತಕ್ಷಣ ಆ.10ರಂದೇ ಬಿಡದಿ ಟೌನ್‌ಶಿಪ್ ಯೋಜನೆಯನ್ನು ಕೈಬಿಟ್ಟಿರುವುದಾಗಿ ಸದನದಲ್ಲೇ ಘೋಷಿಸಿದ್ದೆ. 2017ರ ಜುಲೈ ನಂತರ ಈ ಯೋಜನೆಯಲ್ಲಿ ತಮ್ಮ ಪಾತ್ರ ಇರಲಿಲ್ಲ. ಈ ಯೋಜನೆಗೆ ಸಂಬಂಧಿಸಿದಂತೆ ರೈತರ ಭೂಸ್ವಾಧೀನಕ್ಕೆ ನಾನು ಆದೇಶ ಮಾಡಿರಲಿಲ್ಲ. 2025ರ ಮಾರ್ಚ್ 12ರಂದು ಮೊದಲ ಪ್ರಾಥಮಿಕ ಅಧಿಸೂಚನೆ ಹೊರಡಿಸಿದ್ದೇ ಡಿ.ಕೆ. ಶಿವಕುಮಾರ್ ಎಂದು ದಾಖಲೆಗಳನ್ನು ಪ್ರದರ್ಶಿಸಿದರು. ಇತ್ತೀಚೆಗೆ ಜೂನ್ 10ರಂದು ಈ ಸರ್ಕಾರ ಟೌನ್‌ಶಿಪ್‌ಗೆ ಅಂತಿಮ ಅಧಿಸೂಚನೆ ಹೊರಡಿಸಿದೆ. ಇದರಲ್ಲಿ ನನ್ನ ಪಾತ್ರ ಎಲ್ಲಿದೆ. ನನಗೇನಾದರೂ ಹಪಾಹಪಿ ಇದ್ದಿದ್ದರೆ 2018ರಲ್ಲಿ ಮುಖ್ಯಮಂತ್ರಿಯಾಗಿದ್ದಾಗಲೇ ಈ ಯೋಜನೆ ಮಾಡಿಕೊಳ್ಳಬಹುದಾಗಿತ್ತು ಅಲ್ಲವೇ ಎಂದು ಪ್ರಶ್ನಿಸಿದರು.

### ನಾಗರಬಾವಿಯ ಬಾಡಿಗೆ ಮನೆಯಲ್ಲಿ ದಂಧೆ

ಈ ಟೌನ್‌ಶಿಪ್ ಯೋಜನೆಯ ಅಧಿಕೃತ ಕೆಲಸಗಳು ಜಿಲ್ಲಾಧಿಕಾರಿ ಕಚೇರಿಯಲ್ಲಿ ನಡೆಯುತ್ತಿಲ್ಲ. ಬದಲಿಗೆ ನಾಗರಭಾವಿ ಬಳಿಯ ಒಂದು ಬಾಡಿಗೆ ಮನೆಯಲ್ಲಿ ರಿಯಲ್ ಎಸ್ಟೇಟ್ ಮಾಫಿಯಾದವರನ್ನು ಕೂರಿಸಿಕೊಂಡು ಈ ದಂಧೆ ನಡೆಸಲಾಗುತ್ತಿದೆ.

ಭೂಮಿ ಕೊಡಲ್ಲ ಎಂದು ಸುಮಾರು 4,500 ರೈತರು ಆಕ್ಷೇಪಣೆ ಸಲ್ಲಿಸಿದ್ದರೂ ಸರ್ಕಾರ ಒಂದಕ್ಕೂ ಉತ್ತರಿಸಿಲ್ಲ. ಬದಲಾಗಿ ಕಚೇರಿಗೆ ರೈತರನ್ನು ಕರೆಸಿ ರೌಡಿಗಳ ಕೈಯಲ್ಲಿ ಬೆದರಿಕೆ ಹಾಕಿಸಲಾಗುತ್ತಿದೆ ಎಂದು ಎಚ್.ಡಿ. ಕುಮಾರಸ್ವಾಮಿ ಆಕ್ರೋಶ ಹೊರಹಾಕಿದರು.

### ನೈಸ್ ಯೋಜನೆ ಪಿತಾಮಹನೇ ಡಿ.ಕೆ.ಶಿ

ಶೇ.50ರಷ್ಟು ಪರಿಹಾರ ಮತ್ತು ಶೇ.50ರಷ್ಟು ಅಭಿವೃದ್ಧಿಪಡಿಸಿದ ಜಾಗ ನೀಡುತ್ತೇವೆ ಎಂದು ರೈತರನ್ನು ನಂಬಿಸಲು ಸರ್ಕಾರ ಹೊರಟಿದೆ. ಆದರೆ ಇದೇ ನೈಸ್ ಕಂಪನಿ ಯೋಜನೆ ಬಂದು 30 ವರ್ಷಗಳಾದರೂ ಇನ್ನು 4,500 ರೈತರಿಗೆ ಸೈಟ್ ಕೊಟ್ಟಿಲ್ಲ. ಆ ನೈಸ್ ಕಂಪನಿಯ ಪಿತಾಮಹನೇ ಡಿ.ಕೆ. ಶಿವಕುಮಾರ್ ಎಂದು ಟಾಂಗ್ ನೀಡಿದರು. ಯಾರೋ ನಾಲ್ಕು ಜನರಿಂದ ಬ್ಯಾನರ್ ಹಾಕಿಸಿ ರೈತರು ಜಮೀನು ಕೊಡ್ತಾರೆ ಎಂದು ನಾಟಕ ಆಡುತಿದೆ. ಬೆಂಗಳೂರಿನ ರಸ್ತೆಗಳನ್ನು ನೋಡಿದರೆ ಜನ ಉಗಿಯುತ್ತಿದ್ದಾರೆ. ನಮ್ಮ ಮೇಲೆ ಸುಳ್ಳು ಆರೋಪ ಮಾಡುತ್ತಿರುವ ನಿಮಗೆ ತಕ್ಕ ಉತ್ತರ ಕೊಡುವ ಕಾಲ ಹತ್ತಿರದಲ್ಲಿದೆ ಎಂದು ಕುಮಾರಸ್ವಾಮಿ ಎಚ್ಚರಿಕೆ ನೀಡಿದ್ದಾರೆ.

### ನಾನು ಕರೆದಾಗ ಬರದಿದ್ದಾಗ, ಈಗ ನಾನೇಕೆ ಹೋಗಲಿ?: ಸಿಎಂ ತಿರುಗೇಟು

ಬಿಡದಿ ಟೌನ್‌ಶಿಪ್ ಕುರಿತ ಚರ್ಚೆಗೆ ಎಚ್.ಡಿ. ಕುಮಾರಸ್ವಾಮಿ ಪಂಥಾಹ್ವಾನಕ್ಕೆ ಸಿಎಂ ಡಿ.ಕೆ. ಶಿವಕುಮಾರ್ ಪ್ರತಿಕ್ರಿಯಿಸಿದ್ದಾರೆ. ಈ ಹಿಂದೆ ನಾನು ಬಹಿರಂಗ ಚರ್ಚೆಗೆ ಕರೆದಾಗ ಅವರು ಬರಲಿಲ್ಲ. ಈಗ ಅವರು ಕರೆದ ತಕ್ಷಣ ನಾನೇಕೆ ಹೋಗಬೇಕು ಎಂದು ಖಾರವಾಗಿ ಉತ್ತರಿಸಿದ್ದಾರೆ. ಈ ಬಗ್ಗೆ ಮಾತನಾಡಿದ ಅವರು, ಬಿಡದಿ ಟೌನ್‌ಶಿಪ್ ವಿಚಾರವಾಗಿ ನಾನೇನು ಮಾತಾಡಲ್ಲ. ಬಹಿರಂಗ ಚರ್ಚೆಗೆ ಕರೆದಾಗ ಅವರು ಬರಲಿಲ್ಲ, ಮುಂದೆ ಹೇಗಿದ್ದರೂ ಅಧಿವೇಶನ ಇದೆ. ಹೀಗಾಗಿ ಅನುಭವಿ ರಾಜಕಾರಣಿಗಳ ಬಳಿ ಮಾತನಾಡಿಸಿ ಆಗ ಉತ್ತರ ಕೊಡೋಣ ಎಂದರು. ಇದೇವೇಳೆ 4500 ರೈತರು ಭೂಮಿ ಕೊಡಲ್ಲ ಅನ್ನೋ ವಿಚಾರದ ಬಗ್ಗೆ ಮಾತನಾಡಿದ ಸಿಎಂ, ಈ ಬಗ್ಗೆ ಇಲ್ಲಿ ಮಾತಾಡಲ್ಲ. ಐ ವಿಶ್ ದೆಮ್ ಆಲ್ ದ ಬೆಸ್ಟ್. ನೋಡೋಣ ಏನಾಗುತ್ತದೆ ಎಂದು ಹೇಳಿ ಹೊರಟರು.

### ಪೇಮೆಂಟ್, ಮ್ಯಾನೇಜ್‌ಮೆಂಟ್ ಕೋಟಾದಡಿ ಸಚಿವ ಸ್ಥಾನ ಹಂಚಿಕೆ: ಎಚ್‌ಡಿಕೆ ಆರೋಪ

**ಬೆಂಗಳೂರು, ಜೂ.22:** ಸಂಪುಟ ಸೇರ್ಪಡೆ ವಿಷಯದಲ್ಲಿ ಪೇಮೆಂಟ್, ಮ್ಯಾನೇಜ್‌ಮೆಂಟ್ ಕೋಟಾ ನಡೆಯುತ್ತಿದೆ ಎಂದು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಆರೋಪ ಮಾಡಿದರು. ನಗರದಲ್ಲಿ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಡಿ.ಕೆ. ಶಿವಕುಮಾರ್ ಸಂಪುಟದಲ್ಲಿ ಮಂತ್ರಿಯಾಗಲು ಮ್ಯಾನೇಜ್‌ಮೆಂಟ್ ಇಲ್ಲವೇ ಪೇಮೆಂಟ್ ಕೋಟಾದಡಿ ದೊಡ್ಡ ಪ್ರಮಾಣದಲ್ಲಿ ಲಾಬಿ ನಡೆಯುತ್ತಿದೆ. ಹೈಕಮಾಂಡ್‌ಗೆ ಕೊಡಬೇಕು ಎಂದು ಶಾಸಕರಿಂದ ಹಣ ಪೀಕುತ್ತಿರುವ ಮಾಹಿತಿ ಇದೆ. ಮ್ಯಾನೇಜ್ಮೆಂಟ್ ಕೋಟಾಕ್ಕೆ ಶೇಕಡ 5%, ಪೇಮೆಂಟ್ ಕೋಟಾಕ್ಕೆ 95% ಸೀಟುಗಳನ್ನು ನಿಗದಿಪಡಿಸಲಾಗಿದೆ. ಪೇಮೆಂಟ್ ಸೀಟುಗಳನ್ನು ಪಡೆಯಲು ಯಾರು ಅರ್ಹರಿರುತ್ತಾರೋ ಅಂತಹವರು ಮಾತ್ರ ಮಂತ್ರಿಯಾಗಲು ಸಾಧ್ಯ ಎಂದು ಕುಮಾರಸ್ವಾಮಿ ವ್ಯಂಗ್ಯವಾಡಿದರು. ಹಾಗಾಗಿ ಸಂಪುಟ ವಿಸ್ತರಣೆ ವಿಳಂಬವಾಗುತ್ತಿದೆ ಎಂದು ಹೇಳಿದರು.

## ಅಯೋಧ್ಯೆಯಲ್ಲಿ ನಿಧಿ ದುರ್ಬಳಕೆ: ಇದು ರಾಮರಾಜ್ಯವಲ್ಲ, ಲೂಟಿ ರಾಜ್ಯ: ಡಾ.ಆನಂದ ಕುಮಾರ್



**ಬೆಂಗಳೂರು, ಜೂ.22:** ಅಯೋಧ್ಯೆಯಲ್ಲಿ ರಾಮಮಂದಿರ ನಿರ್ಮಾಣಕ್ಕಾಗಿ ದೇಶದ ಮೂಲೆಮೂಲೆಗಳಿಂದ ಕೋಟ್ಯಂತರ ಭಕ್ತರು ಪಕ್ಷಾತೀತವಾಗಿ ಶ್ರದ್ಧೆ, ನಂಬಿಕೆಯಿಂದ ತಮ್ಮ ಪರಿಶ್ರಮದ ಹಣವನ್ನು ದೇಣಿಗೆಯಾಗಿ ನೀಡಿರುವುದದನ್ನು ದುರ್ಬಳಕೆ ಮಾಡಿಕೊಳ್ಳುತ್ತಿದ್ದು, ರಾಮನ ಹೆಸರಿನಲ್ಲಿ ಅಧಿಕಾರಕ್ಕೆ ಬಿಜೆಪಿಯವರು ರಾಮನ ಹುಂಡಿ ಹಣ ದೋಚುತ್ತಿರುವುದು ಖಂಡನೀಯ ಎಂದು ಎಐಸಿಸಿ ಎಸ್.ಸಿ ವಿಭಾಗದ ರಾಷ್ಟ್ರೀಯ ಸಂಯೋಜಕರು ಹಾಗೂ ಮಹಾರಾಷ್ಟ್ರ ಉಸ್ತುವಾರಿ ಡಾ. ಆನಂದ ಕುಮಾರ್ ಟೀಕಿಸಿದ್ದಾರೆ. ದೇಶದ ಅಸಂಖ್ಯಾತ ಭಕ್ತರ ಭಾವನೆಗಳಿಗೆ ಆಘಾತವಾಗಿದ್ದರೂ ಪ್ರಧಾನಿ ನರೇಂದ್ರ ಮೋದಿ, ಗೃಹ ಸಚಿವ ಅಮಿತ್ ಶಾ, ಬಿಜೆಪಿ ರಾಷ್ಟ್ರೀಯ ನಾಯಕರು ಮೌನವಾಗಿದ್ದಾರೆ. ಇದು ಮೌನಂ ಸಮ್ಮತಿ ಲಕ್ಷಣವೇ. ಬೇರೆ ಧರ್ಮದ ಯಾವುದಾದರೂ ದೇವಸ್ಥಾನದಲ್ಲಿ ಅಕ್ರಮ ನಡೆದಿದ್ದರೆ ಬಿಜೆಪಿ ನಾಯಕರು ದೇಶಕ್ಕೆ ಕೊಳ್ಳಿ ಇಟ್ಟು ದಂಗೆ ಎಬ್ಬಿಸುತ್ತಿದ್ದರು. ರಾಮ ರಾಜ್ಯ ಮಾಡುವುದಾಗಿ ಅಧಿಕಾರಕ್ಕೆ ಬಂದ ಬಿಜೆಪಿಯವರು ಲೂಟಿ ರಾಜ್ಯ ಮಾಡಿದ್ದಾರೆ. ರಾಜಕಾರಣದಲ್ಲಿ ಧರ್ಮ ಇರಬೇಕು ಎಂದು ಸದಾ ಕಾಲ ಪ್ರತಿಪಾದಿಸುತ್ತಾ ಬಂದ ದೇಶದಲ್ಲಿ ಧರ್ಮವನ್ನೇ ಮುಂದಿಟ್ಟುಕೊಂಡು ರಾಜಕಾರಣ ಮಾಡಿ ಇದೀಗ ಈಸ್ಟ್ ಇಂಡಿಯಾ ಕಂಪೆನಿಯಂತೆ ದೇಶವನ್ನು ಕೊಳ್ಳೆ ಹೊಡೆಯುತ್ತಿದ್ದಾರೆ. ದೇವರ ನಿಧಿಯ ನಿರ್ವಹಣೆಯಲ್ಲಿ ಪಾರದರ್ಶಕತೆ ಕಾಪಾಡದೇ, ಉತ್ತರದಾಯಿತ್ವವೂ ಇಲ್ಲದೇ ಸಾರ್ವಜನಿಕರಿಗೆ ವಿಶ್ವಾಸಘಾತಕ ಕೆಲಸ ಮಾಡಿದೆ ಎಂದು ಆರೋಪಿಸಿದ್ದಾರೆ. ಈ ಕುರಿತು ಹೇಳಿಕೆ ಬಿಡುಗಡೆ ಮಾಡಿರುವ ಡಾ. ಆನಂದ ಕುಮಾರ್, ರಾಮಮಂದಿರ ನಿಧಿಯ ಬಳಕೆ ಮತ್ತು ಲೆಕ್ಕಪತ್ರಗಳ ಕುರಿತ ಜನ ಸಾಮಾನ್ಯರ ಆಕ್ಷೇಪಗಳಿಗೆ ಈವರೆಗೆ ಸ್ಪಂದನೆ ದೊರೆತಿಲ್ಲ. ರಾಮನ ಹೆಸರಿನಲ್ಲಿ ಕಳ್ಳಾಟವಾಡುತ್ತಿರುವವರ ಮೇಲೆ ಬುಲ್ಡೋಜರ್ ಹತ್ತಿಸಬೇಕು. ಧರ್ಮ ರಕ್ಷಣೆಗೆ ಯಾಕೆ ಬಿಜೆಪಿ ಮುಂದಾಗುತ್ತಿಲ್ಲ. ರಾಮ ಇವರ ಪಾಲಿಗೆ ದೇವರಲ್ಲ. ವೋಟ್ ಬ್ಯಾಂಕ್ ರಾಜಕಾರಣದ ಗುರಾಣಿಯಾಗಿದ್ದಾರೆ. ಧರ್ಮ, ಭಕ್ತಿ, ಭಾವವೆಲ್ಲವೂ ಬೋಗಸ್ ಆಗಿದೆ ಎಂದು ಆಕ್ಷೇಪಿಸಿದ್ದಾರೆ. ದೇಣಿಗೆ ಸಂಗ್ರಹಿಸುವ ಪ್ರತಿಯೊಂದು ಸಂಸ್ಥೆಯೂ ನಿಯಮಿತ ಲೆಕ್ಕಪರಿಶೋಧನೆ, ವಾರ್ಷಿಕ ಹಣಕಾಸು ವರದಿಗಳ ಪ್ರಕಟಣೆ ಮತ್ತು ಸಾರ್ವಜನಿಕರಿಗೆ ಅಗತ್ಯ ಮಾಹಿತಿಯನ್ನು ಲಭ್ಯವಾಗುವಂತೆ ಮಾಡುತ್ತಿವೆ. ಆದರೆ ಅಯೋಧ್ಯೆಯಲ್ಲಿ ಇದಕ್ಕೆ ವ್ಯತಿರಿಕ್ತವಾದ ನಡವಳಿಕೆ ಇದೆ. ಹಣಕಾಸಿನ ಪಾರದರ್ಶಕತೆ ಕಾಪಾಡುವುದು ಸಮಾಜದ ಹಿತದೃಷ್ಟಿಯಿಂದ ಅಗತ್ಯ. ನಿಧಿಯ ಬಳಕೆಯ ಬಗ್ಗೆ ಎದ್ದಿರುವ ಅನುಮಾನಗಳಿಗೆ ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ, ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ ಕೂಡಲೇ ಸ್ಪಷ್ಟನೆ ನೀಡಬೇಕು. ಅಗತ್ಯವಿದ್ದರೆ ಸ್ವತಂತ್ರ ಲೆಕ್ಕಪರಿಶೋಧನೆ ನಡೆಸಬೇಕು. ಭಕ್ತರ ನಂಬಿಕೆ ಅಮೂಲ್ಯವಾದದ್ದು. ಅದನ್ನು ಕಾಪಾಡದೇ ಭಾವನೆಗಳ ಜೊತೆ ಚೆಲ್ಲಾಟವಾಡುತ್ತಿರುವುದು ಖಂಡನೀಯ ಎಂದು ಡಾ. ಆನಂದ ಕುಮಾರ್ ಹೇಳಿದ್ದಾರೆ.

## ಅಡ್ಡಮತದಾನ: ವರಿಷ್ಠರಿಗೆ ವಿವರಣೆ ನೀಡಲು ದೆಹಲಿಗೆ ತೆರಳಿದ ವಿಜಯೇಂದ್ರ, ಅಶೋಕ್

**ಬೆಂಗಳೂರು, ಜೂ.22:** ವಿಧಾನಸಭೆಯಿಂದ ವಿಧಾನ ಪರಿಷತ್ತಿಗೆ ನಡೆದ ಚುನಾವಣೆಯಲ್ಲಿ ಅಡ್ಡ ಮತದಾನ ನಡೆಸಿದ ಪ್ರಕರಣ ಕುರಿತು ವಿವರಣೆ ನೀಡಲು ರಾಜ್ಯ ಬಿಜೆಪಿ ನಾಯಕರು ದೆಹಲಿಗೆ ತೆರಳಿದ್ದಾರೆ. ರಾಜ್ಯ ಬಿಜೆಪಿ ಉಸ್ತುವಾರಿ ಡಾ. ರಾಧಾ ಮೋಹನ್ ಅಗರ್ವಾಲ್, ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಹಾಗೂ ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್.ಅಶೋಕ್ ಅವರುಗಳು ದೆಹಲಿಗೆ ತೆರಳಿದ್ದು ಪಕ್ಷದ ಪ್ರಮುಖರನ್ನು ಭೇಟಿಯಾಗಿ ಮಾಹಿತಿ ನೀಡಲಿದ್ದಾರೆ.

ಮಂಗಳವಾರ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬೀನ್ ಅವರನ್ನು ಭೇಟಿ ಮಾಡಲಿರುವ ಈ ಮೂವರು ನಾಯಕರು ಅಡ್ಡ ಮತದಾನ ನಡೆಸಿದ ಪ್ರಕರಣ ಹಾಗೂ ಇತ್ತೀಚಿನ ಪಕ್ಷದ ಬೆಳವಣಿಗೆಗಳ ಕುರಿತಂತೆ ಸಮಗ್ರವಾದ ಮಾಹಿತಿಯನ್ನು ನೀಡಲಿದ್ದಾರೆ.

ಅಡ್ಡಮತದಾನದ ಹಿಂದಿನ ವಾಸ್ತವಾಂಶ, ಯಾವ ಶಾಸಕರು ಪಕ್ಷದ ವಿಪ್ ಉಲ್ಲಂಘಿಸಿದ್ದಾರೆ ಎಂಬಿತ್ಯಾದಿ ವಿಷಯಗಳ ಬಗ್ಗೆ ವರಿಷ್ಠರು ಮಾಹಿತಿ ಪಡೆಯಲಿದ್ದಾರೆ. ಇದರ ಆಧಾರದ ಮೇಲೆ ಮುಂದಿನ ಶಿಸ್ತು ಕ್ರಮ ಕೈಗೊಳ್ಳುವ ಸಾಧ್ಯತೆಯಿದೆ.

ಪಕ್ಷದ ಹೈಕಮಾಡ್‌ನ ಈ ನಡೆ, ಪಕ್ಷದಲ್ಲಿ ಶಿಸ್ತನ್ನು ಮರುಸ್ಥಾಪಿಸುವ ಮತ್ತು ಅಡ್ಡಮತದಾನ ಮಾಡಿದವರ ವಿರುದ್ಧ ಕಠಿಣ ನಿರ್ಧಾರ ಕೈಗೊಳ್ಳುವ ಸಂದೇಶವನ್ನು ನೀಡಿದೆ.

ವಿಧಾನ ಪರಿಷತ್ ಚುನಾವಣೆಯಲ್ಲಿ ನಡೆದ ಅಡ್ಡಮತದಾನದ ವಿಷಯವು ರಾಜ್ಯ ರಾಜಕೀಯದಲ್ಲಿ ಭಾರೀ ಸಂಚಲನ ಮೂಡಿಸಿದ್ದು, ಈ ಸಂಬಂಧ ಬಿಜೆಪಿ ಹೈಕಮಾಂಡ್ ರಾಜ್ಯ ನಾಯಕರಿಗೆ ಸಮನ್ಸ್ ನೀಡಿತ್ತು.

ವಿಧಾನ ಪರಿಷತ್ ಚುನಾವಣೆಯಲ್ಲಿ ನಡೆದ ಅಡ್ಡಮತದಾನದ ಬಗ್ಗೆ ವಿವರಣೆ ನೀಡಲು ಹಾಗೂ ಈ ಹಿನ್ನಡೆಗೆ ಕಾರಣಗಳನ್ನು ವಿವರಿಸಲು, ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬೀನ್ ಅವರು ಕರ್ನಾಟಕ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಹಾಗೂ ರಾಜ್ಯ ಬಿಜೆಪಿ ಉಸ್ತುವಾರಿ ರಾಧಾಮೋಹನ್ ದಾಸ್ ಅಗರ್ವಾಲ್ ಅವರಿಗೆ ನಾಳೆ ದೆಹಲಿಗೆ ಬರುವಂತೆ ಸೂಚಿಸಿದ್ದರು.

ಜೂನ್ 18 ರಂದು ನಡೆದ ವಿಧಾನ ಪರಿಷತ್ ಚುನಾವಣೆಯಲ್ಲಿ ಎನ್‌ಡಿಎ (ಬಿಜೆಪಿ–ಜೆಡಿಎಸ್) ಮೈತ್ರಿಕೂಟದ ನಿರೀಕ್ಷೆಯಂತೆ ಮತಗಳು ಬಾರದಿರುವುದು ಪಕ್ಷದ ಹೈಕಮಾಂಡ್‌ಗೆ ತೀವ್ರ ಅಸಮಾಧಾನ ತಂದಿದೆ. ಸುಮಾರು 11 ಶಾಸಕರು ಅಡ್ಡಮತದಾನ ಮಾಡಿರಬಹುದು ಎಂದು ಅಂದಾಜಿಸಲಾಗಿದೆ. ಈ ಅಡ್ಡಮತದಾನದ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿರುವ ರಾಜ್ಯ ಬಿಜೆಪಿ ಘಟಕ, ಸತ್ಯಾಸತ್ಯತೆಯನ್ನು ಪತ್ತೆಹಚ್ಚಲು ಮೂವರು ಸದಸ್ಯರ ಸಮಿತಿಯನ್ನು ರಚಿಸಿದೆ.

ಸಮಿತಿಯಲ್ಲಿ ಸಿ.ಟಿ. ರವಿ (ವಿಧಾನ ಪರಿಷತ್ ಸದಸ್ಯ), ಎನ್. ಮಹೇಶ್ (ರಾಜ್ಯ ಉಪಾಧ್ಯಕ್ಷ) ಮತ್ತು ಮಹೇಶ್ ಟೆಂಗಿನಕಾಯಿ (ಶಾಸಕ) ಇದ್ದಾರೆ.

ಈ ಸಮಿತಿಯು ಜೂ.25ರ ಒಳಗೆ ವರದಿ ಸಲ್ಲಿಸಬೇಕೆಂದು ಸೂಚಿಸಲಾಗಿದೆ. ಬಿ.ವೈ. ವಿಜಯೇಂದ್ರ ಅವರು, ಪಕ್ಷದ ಶಿಸ್ತನ್ನು ಉಲ್ಲಂಘಿಸಿ ಅಡ್ಡಮತದಾನ ಮಾಡಿರುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವುದಾಗಿ ಮತ್ತು ಯಾರನ್ನೂ ಕ್ಷಮಿಸುವ ಪ್ರಶ್ನೆಯೇ ಇಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

## ಲಕ್ಷ್ಮಿ ಅರುಣಾ ಜನಾರ್ದನರೆಡ್ಡಿಗೆ ಜನಮೆಚ್ಚಿದ ಮಹಿಳಾ ನಾಯಕಿ ಪ್ರಶಸ್ತಿ




**ಬಳ್ಳಾರಿ, ಜೂ.22:** ಕಲ್ಯಾಣ ಕರ್ನಾಟಕ ಭಾಗದಲ್ಲಿ ಸಮಾಜಸೇವೆ ಮತ್ತು ಜನಪರ ಕಾರ್ಯಗಳಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡಿರುವ ಗಾಲಿ ಲಕ್ಷ್ಮಿ ಅರುಣಾ ಜನಾರ್ದನ ರೆಡ್ಡಿ ಅವರು, ಕರ್ನಾಟಕ ಟಿವಿಯು ನೀಡುವ ಪ್ರತಿಷ್ಠಿತ ಲೀಡರ್ ಅವಾರ್ಡ್ 2025 'ಜನಮೆಚ್ಚಿದ ಮಹಿಳಾ ನಾಯಕಿ' ಪ್ರಶಸ್ತಿಗೆ ಭಾಜನರಾಗಿದ್ದಾರೆ.

ಮಹಿಳಾ ಸಬಲೀಕರಣ ಮತ್ತು ಸಮಾಜದ ಅಭಿವೃದ್ಧಿಗಾಗಿ ಲಕ್ಷ್ಮಿ ಅರುಣಾ ಅವರು ಸಲ್ಲಿಸುತ್ತಿರುವ ನಿರಂತರ ಕೊಡುಗೆಯನ್ನು ಪರಿಗಣಿಸಿ, ಈ ಪ್ರಶಸ್ತಿಯನ್ನು ನೀಡಿ ಗೌರವಿಸಲಾಗಿದೆ. ಈ ಸಾಧನೆಯು ಈ ಭಾಗದ ಮಹಿಳೆಯರಿಗೆ ಸ್ಫೂರ್ತಿಯಾಗಿದ್ದು, ಅವರ ಜನಪರ ಕಾಳಜಿಗೆ ಸಿಕ್ಕ ಗೌರವವಾಗಿದೆ.

ಲಕ್ಷ್ಮೀ ಅರುಣಾ ಅವರು ಮತ್ತಷ್ಟು ಮಹಿಳಾ ಸಬಲೀಕರಣದ ಕಾರ್ಯಗಳನ್ನು ಕೈಗೊಳ್ಳಲು ಈ ಪ್ರಶಸ್ತಿ ಮತ್ತಷ್ಟು ಸ್ಫೂರ್ತಿ ನೀಡಲಿ ಎಂದು ಅವರ ಅಭಿಮಾನಿಗಳು ಆಶಿಸಿದ್ದಾರೆ.

## ಆರೆಸ್ಸೆಸ್ ನೋಂದಣಿ, ಲೆಕ್ಕ ಯಾರಿಗೆ ಕೊಡಬೇಕೋ ಅವರಿಗೆ ಕೊಡುತ್ತಾರೆ

### ಬೇಕಾದರೆ ಕಾನೂನು ಕ್ರಮ ಕೈಗೊಳ್ಳಲಿ: ಪ್ರಿಯಾಂಕ್ ಖರ್ಗೆಗೆ ಕೆ.ಎಸ್. ಈಶ್ವರಪ್ಪ ಸವಾಲು



**ಶಿವಮೊಗ್ಗ, ಜೂ.22:** ಆರೆಸ್ಸೆಸ್ ಮುಖ್ಯಸ್ಥ ಮೋಹನ್ ಭಾಗವತ್ ಅವರ ವಿದೇಶ ಪ್ರವಾಸಕ್ಕೆ ಖರ್ಗೆ ಅಪ್ಪನ ಮನೆಯಿಂದ ದುಡ್ಡು ಕೊಡುತ್ತಿಲ್ಲ. ಲೆಕ್ಕ ಮತ್ತು ನೋಂದಣಿ ಬಗ್ಗೆ ಕೇಳಲು ಈತ ಯಾರು ಎಂದು ಪ್ರಿಯಾಂಕ್ ಖರ್ಗೆ ವಿರುದ್ಧ ಮಾಜಿ ಡಿಸಿಎಂ ಕೆ.ಎಸ್. ಈಶ್ವರಪ್ಪ ಆಕ್ರೋಶ ವ್ಯಕ್ತಪಡಿಸಿದರು.

ನಗರದಲ್ಲಿ ಸೋಮವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿ, ಕೇವಲ ಪ್ರಚಾರಕ್ಕಾಗಿ ಅವರು ಹೀಗೆ ಮಾತನಾಡುತ್ತಿದ್ದಾರೆ. ಪ್ರಿಯಾಂಕ್ ಖರ್ಗೆ ಅಷ್ಟೇ ಅಲ್ಲ ಅವರ ಅಪ್ಪ, ನೆಹರು, ಇಂದಿರಾ, ರಾಜೀವ್ ಹಾಗೂ ಸೋನಿಯಾ ಗಾಂಧಿ ಕೈಯಲ್ಲಿ ಆಗಲಿಲ್ಲ. ಲೆಕ್ಕ, ನೋಂದಣಿ ಕೇಳಲು ಇವನ್ಯಾರು, ಬೇಕಾದರೆ ಕಾನೂನು ಕ್ರಮ ಕೈಗೊಳ್ಳಲಿ ಎಂದು ಸವಾಲು ಹಾಕಿದರು. ಆರೆಸ್ಸೆಸ್ ಕಾರ್ಯಕರ್ತರಿಗೆ ಈ ಬಗ್ಗೆ ನೋವಾಗಿದೆ. ಇದಕ್ಕೆ ಮೋಹನ್ ಭಾಗವತ್ ಅವರಂತಹ ಹಿರಿಯರು ಉತ್ತರ ಕೊಡುವ ಅಗತ್ಯ ಇರಲಿಲ್ಲ. ಲೆಕ್ಕ ಯಾರಿಗೆ ಕೊಡಬೇಕು ಅವರಿಗೆ ಕೊಡುತ್ತಾರೆ. ಇವರಿಗೆ ಯಾಕೆ ಲೆಕ್ಕ ಕೊಡಬೇಕು ಎಂದರು.

ದೇಶದ ಬಹುತೇಕ ರಾಜ್ಯದಲ್ಲಿ ಕಾಂಗ್ರೆಸ್ ಮೂಲೆಗೆ ಸೇರಿದೆ. ಕರ್ನಾಟಕದಲ್ಲೂ ಅದೇ ಪರಿಸ್ಥಿತಿ ಆಗಲಿದೆ. ಗ್ಯಾರಂಟಿ ಬಗ್ಗೆ ಸರ್ಕಾರ ಗೊಂದಲ ಮೂಡಿಸುತ್ತಿದೆ. ಸರ್ಕಾರದ ಬಗ್ಗೆಯೇ ಗ್ಯಾರಂಟಿ ಇಲ್ಲ. ಸರ್ಕಾರದ ಬಳಿ ದುಡ್ಡಿಲ್ಲ ಹಾಗಾಗಿ ಹೊಸದಾಗಿ ಅರ್ಜಿ ಹಾಕಲು ಹೇಳುತ್ತಿದೆ ಎಂದು ರಾಜ್ಯ ಸರ್ಕಾರದ ವಿರುದ್ಧವೂ ಈಶ್ವರಪ್ಪ ಕಿಡಿಕಾರಿದರು.

### ದೇಹ ಮಾತ್ರ ಹೊರಗಿದೆ, ಮನಸ್ಸು ಬಿಜೆಪಿಯಲ್ಲಿದೆ

ಪಕ್ಷದ ಬೆಳವಣಿಗೆ ಮತ್ತು ಶುದ್ಧೀಕರಣಕ್ಕೆ ಆಗ್ರಹಿಸಿ ಬಿಜೆಪಿಯಿಂದ ಹೊರ ಬಂದಿದ್ದೇನೆ. ಆದರೆ ನನ್ನ ಮನಸ್ಸು ಇಂದಿಗೂ ಬಿಜೆಪಿಯಲ್ಲೇ ಇದ್ದು ದೇಹ ಮಾತ್ರ ಹೊರಗಡೆ ಇದೆ. ನನ್ನ ಅಭಿಪ್ರಾಯವೇ ಬಹಳಷ್ಟು ಜನನಾಯಕರು ಮತ್ತು ಕಾರ್ಯಕರ್ತರದ್ದಾಗಿದೆ. ಪಕ್ಷದ ನಾಯಕತ್ವ ಇದನ್ನು ಗಮನಿಸುತ್ತಿದೆ. ಇಂದಲ್ಲ ನಾಳೆ ಪರಿಸ್ಥಿತಿ ಸರಿ ಹೋಗಲಿದೆ ಎಂದು ಕೆ.ಎಸ್. ಈಶ್ವರಪ್ಪ ವಿಶ್ವಾಸ ವ್ಯಪಡಿಸಿದರು.

### ಶರಾವತಿ ಪಂಪ್ಡ್ ಸ್ಟೋರೇಜ್ ವಿಚಾರದಲ್ಲಿ ಹಠಮಾರಿ ಧೋರಣೆ

ಶರಾವತಿ ಪಂಪ್ಡ್ ಸ್ಟೋರೇಜ್ ವಿಚಾರದಲ್ಲಿ ರಾಜ್ಯ ಸರ್ಕಾರ ಹಠಮಾರಿ ಧೋರಣೆ ಅನುಸರಿಸುತ್ತಿದೆ. ಹಿಂದಿನ ಸಿಎಂ ಸಿದ್ದರಾಮಯ್ಯ ಅವರಂತೆ ಹಾಲಿ ಸಿಎಂ ಡಿ.ಕೆ.ಶಿವಕುಮಾರ್ ನಡೆದುಕೊಳ್ಳುತ್ತಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರನ್ನು ದಿಲ್ಲಿಯಲ್ಲಿ ಭೇಟಿ ಮಾಡಿ ಈ ಯೋಜನೆಗೆ ಒತ್ತಾಯಿಸಿದ್ದಾರೆ. ಹೈಕೋರ್ಟ್ ತಡೆಯಾಜ್ಞೆ ಇದ್ದಾಗ್ಯೂ ಯೋಜನೆಗೆ ಒತ್ತಾಯಿಸಿದ್ದಾರೆ. 3 ಸಾವಿರ ಕೋಟಿ ರೂಪಾಯಿ ಇದ್ದ ಯೋಜನೆ 10 ಸಾವಿರ ಕೋಟಿಗೆ ತಲುಪಿದೆ. ಡಿಪಿಆರ್ ಇಲ್ಲದೆ ಟೆಂಡರ್ ಕರೆಯಲಾಗಿದೆ. ಇದು ಅನೇಕ ಅನುಮಾನಕ್ಕೆ ಎಡೆಮಾಡಿಕೊಟ್ಟಿದೆ. .ದ್ರದ ಅನೇಕ ತಜ್ಞರು ಯೋಜನೆಯಿಂದ ಪರಿಸರಕ್ಕೆ ಧಕ್ಕೆ ಆಗಲಿದೆ ಎಂದು ಹೇಳಿದ್ದಾರೆ. ಹಾಗಾಗಿ ಈ ಎಲ್ಲಾ ಅಂಶಗಳ ಕುರಿತು ಪ್ರಧಾನಿಗೆ ರಾಷ್ಟ್ರ ಭಕ್ತರ ಬಳಗದ ವತಿಯಿಂದ ಪತ್ರ ಬರೆಯಲಾಗುವುದು ಎಂದು ಈಶ್ವರಪ್ಪ ಹೇಳಿದರು.

## ಸಂವಿಧಾನ ನುಡಿ ಸಂಹಿತೆ ಕೃತಿ ಬಿಡುಗಡೆ ಇಂದು

**ಬೆಂಗಳೂರು, ಜೂ.22:** ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಮಹತ್ವದ ಪ್ರಕಟಣೆಯಾಗಿ ಭಾರತದ ಸಂವಿಧಾನದಲ್ಲಿ ಭಾಷೆಗಳು ನಡೆದ ಹಾದಿಯ ಕುರಿತಾದ 'ಸಂವಿಧಾನ ನುಡಿ ಸಂಹಿತೆ' ಎನ್ನುವ ಕೃತಿ ಮಂಗಳವಾರ ಬೆಳಗ್ಗೆ 11 ಗಂಟೆಗೆ ಬೆಂಗಳೂರಿನ ನಯನ ಸಭಾಂಗಣದಲ್ಲಿ ಬಿಡುಗಡೆಯಾಗಲಿದೆ.

ಡಾ. ಸಂತೋಷ ಹಾನಗಲ್ಲ ಸಂಪಾದಿಸಿರುವ ಈ ವಿಶಿಷ್ಟ ಕೃತಿಯಲ್ಲಿ ಸಂವಿಧಾನದಲ್ಲಿ ಭಾಷೆಗಳ ಕುರಿತು ನೀಡಲಾದ ಸ್ಥಾನಮಾನ, ಹಕ್ಕುಗಳು, ಜವಾಬ್ದಾರಿಗಳು ಮತ್ತು ಮೌಲ್ಯಗಳು ಹೇಗೆ ದೇಶದ ಏಕತೆಗೆ ಕಾರಣವಾಗಿವೆ ಮತ್ತು ಇಲ್ಲಿನ ವೈವಿಧ್ಯವನ್ನು ಗೌರವಿಸುವ ನಮ್ಮ ಸಂಸ್ಕೃತಿಯ ವಿಶೇಷವನ್ನು ಪ್ರತಿಬಿಂಬಿಸಿವೆ ಎನ್ನುವ ಅಂಶಗಳನ್ನು ಅತ್ಯಂತ ಪರಿಣಾಮಕಾರಿಯಾಗಿ ನಿರೂಪಿಸಲಾಗಿದೆ.

ಈ ಕೃತಿಯನ್ನು ಸರ್ವೋಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಮೂರ್ತಿ ನಾಡೋಜ ಡಾ.ಶಿವರಾಜ ವಿ ಪಾಟೀಲ ಅವರು ಲೋಕಾರ್ಪಣೆ ಮಾಡಲಿದ್ದು, ಕೃತಿಯ ಕುರಿತಂತೆ ಅಜೀಂ ಪ್ರೇಮ್ ಜಿ ವಿಶ್ವವಿದ್ಯಾಲಯದ ಪ್ರಾಧ್ಯಾಪಕರಾದ ಪ್ರೊ.ಎ.ನಾರಾಯಣ ಅವರು ಮಾತನಾಡಲಿದ್ದಾರೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ. ಪುರುಷೋತ್ತಮ ಬಿಳಿಮಲೆ ವಹಿಸಿಕೊಳ್ಳಲಿದ್ದಾರೆ. ವಿಶೇಷ ಆಹ್ವಾನಿತರಾಗಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸರ್ಕಾರದ ಕಾರ್ಯದರ್ಶಿ ಜೆ. ಮಂಜುನಾಥ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ನಿರ್ದೇಶಕ ಡಾ.ಬಿ.ಎಸ್.ಮಂಜುನಾಥ್ ಸ್ವಾಮಿ ಅವರು ಪಾಲ್ಗೊಳ್ಳಲಿದ್ದಾರೆ. ಕಾರ್ಯಕ್ರಮದಲ್ಲಿ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ನಾಮನಿರ್ದೇಶಿತ ಸದಸ್ಯರು ಮತ್ತು ಪ್ರಾಧಿಕಾರದ ಕಾರ್ಯದರ್ಶಿ ಹಾಗೂ ಈ ಕೃತಿಯ ಸಂಪಾದಕ ಡಾ. ಸಂತೋಷ ಹಾನಗಲ್ಲ ಉಪಸ್ಥಿತರಿರಲಿದ್ದಾರೆ.

## ತುಂಗಭದ್ರಾ ಅಣೆಕಟ್ಟಿನ ಗೇಟ್ ಅಳವಡಿಕೆ ಯಶಸ್ವಿ ಉದ್ಘಾಟನಾ ಕಾರ್ಯಕ್ರಮಕ್ಕೆ ಆಂಧ್ರ ಸಿಎಂ ಚಂದ್ರಬಾಬು ನಾಯ್ಡುಗೆ ಆಹ್ವಾನ



**ಬೆಂಗಳೂರು, ಜೂ.22:** ದಾಖಲೆಯ ಸಮಯದಲ್ಲಿ ತುಂಗಭದ್ರಾ ಅಣೆಕಟ್ಟಿನ ಎಲ್ಲಾ 33 ಗೇಟ್‌ಗಳನ್ನು ಯಶಸ್ವಿಯಾಗಿ ಬದಲಾಯಿಸಿದ ಹಿನ್ನೆಲೆಯಲ್ಲಿ ಆಯೋಜಿಸಿರುವ ಐತಿಹಾಸಿಕ ಸಂಭ್ರಮಾಚರಣೆ ಕಾರ್ಯಕ್ರಮಕ್ಕೆ ಆಂಧ್ರಪ್ರದೇಶದ ಮುಖ್ಯಮಂತ್ರಿ ಎನ್. ಚಂದ್ರಬಾಬು ನಾಯ್ಡು ಹಾಗೂ ಅಲ್ಲಿನ ನೀರಾವರಿ ಸಚಿವ ನಿಮ್ಮಲ ರಾಮ ನಾಯ್ಡು ಅವರನ್ನು ಕರ್ನಾಟಕದ ಉನ್ನತ ಮಟ್ಟದ ನಿಯೋಗವು ಅಧಿಕೃತವಾಗಿ ಆಹ್ವಾನಿಸಿದೆ.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ನಿರ್ದೇಶನದ ಮೇರೆಗೆ, ರಾಜ್ಯದ ಮಾಜಿ ಸಚಿವ ಎನ್.ಎಸ್. ಬೋಸರಾಜು ನೇತೃತ್ವದ ನಿಯೋಗವು ಆಂಧ್ರಪ್ರದೇಶದ ನಾಯಕರನ್ನು ಖುದ್ದಾಗಿ ಭೇಟಿಯಾಗಿ ಆಹ್ವಾನ ಪತ್ರಿಕೆ ಹಸ್ತಾಂತರಿಸಿತು. ಈ ನಿಯೋಗದಲ್ಲಿ ಹಿರಿಯ ಶಾಸಕ ಬಸವರಾಜ ರಾಯರೆಡ್ಡಿ ಮತ್ತು ವಿಧಾನ ಪರಿಷತ್ ಸದಸ್ಯ ಬಸನಗೌಡ ಬಾದರ್ಲಿ ಅವರು ಸಹ ಇದ್ದರು.

ಈ ಐತಿಹಾಸಿಕ ಆಚರಣೆಯಲ್ಲಿ ಪಾಲ್ಗೊಳ್ಳುವಂತೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಆಂಧ್ರ ಸಿಎಂಗೆ ಪತ್ರದ ಮೂಲಕ ವೈಯಕ್ತಿಕವಾಗಿ ವಿನಂತಿಸಿದ್ದಾರೆ.

ತುಂಗಭದ್ರಾ ಅಣೆಕಟ್ಟಿನ ಸುರಕ್ಷತೆ ಮತ್ತು ಭವಿಷ್ಯದ ದೃಷ್ಟಿಯಿಂದ ಅತ್ಯಂತ ಮಹತ್ವದ್ದಾಗಿದ್ದ ಈ ಗೇಟ್ ಅಳವಡಿಕೆ ಕಾರ್ಯವು ಇಂಜಿನಿಯರಿಂಗ್ ಹಾಗೂ ಆಡಳಿತಾತ್ಮಕ ಸಾಧನೆಯ ಮೈಲುಗಲ್ಲಾಗಿದೆ.

ಈ ಯಶಸ್ಸಿನ ಸಂಭ್ರಮಾಚರಣೆಯನ್ನು ಇದೇ ಜೂನ್ 25, 2026 ರಂದು ನೇರವಾಗಿ ತುಂಗಭದ್ರಾ ಅಣೆಕಟ್ಟಿನ ಮೇಲೆಯೇ ಆಯೋಜಿಸಲಾಗಿದೆ. ಕರ್ನಾಟಕ ರಾಜ್ಯ ಸರ್ಕಾರವು ಆಯೋಜಿಸುತ್ತಿರುವ ಈ ಬೃಹತ್ ಕಾರ್ಯಕ್ರಮದಲ್ಲಿ ಕೇಂದ್ರ ಜಲಶಕ್ತಿ ಸಚಿವ ಸಿ.ಆರ್. ಪಾಟೀಲ್ ಹಾಗೂ ಇತರ ಪಾಲುದಾರ ರಾಜ್ಯಗಳ ಜನಪ್ರತಿನಿಧಿಗಳು ಭಾಗವಹಿಸಲಿದ್ದಾರೆ. ಎಂದು ಮಾಜಿ ಸಚಿವ ಎನ್.ಎಸ್. ಬೋಸರಾಜು ತಿಳಿಸಿದ್ದಾರೆ.

## ಗೃಹ ಕಚೇರಿ ಕೃಷ್ಣಾದಲ್ಲಿ ಮಾತ್ರ ಸಿಎಂ ಭೇಟಿಗೆ ಅವಕಾಶ

**ಸದಾಶಿವನಗರ ನಿವಾಸಕ್ಕೆ ಬಾರದಂತೆ ಶಾಸಕರು, ಮುಖಂಡರು, ಕಾರ್ಯಕರ್ತರು, ಸಾರ್ವಜನಿಕರಿಗೆ ಡಿ.ಕೆ. ಶಿವಕುಮಾರ್ ಮನವಿ**

**ಬೆಂಗಳೂರು, ಜೂ.22:** ಮುಂದಿನ ದಿನಗಳಲ್ಲಿ ಶಾಸಕರು, ಪಕ್ಷದ ಮುಖಂಡರು, ಕಾರ್ಯಕರ್ತರು ಹಾಗೂ ಸಾರ್ವಜನಿಕರನ್ನು ಗೃಹ ಕಚೇರಿ ಕೃಷ್ಣಾದಲ್ಲಿ ಭೇಟಿ ಮಾಡುವುದಾಗಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ಅನಿವಾರ್ಯ ಕಾರಣಗಳಿಂದ ಇನ್ನು ಮುಂದೆ ಸದಾಶಿವನಗರ ನಿವಾಸದಲ್ಲಿ ಯಾರನ್ನೂ ಭೇಟಿ ಮಾಡುವುದಿಲ್ಲ, ಯಾರೂ ಇಲ್ಲಿಗೆ ಬರುವ ತೊಂದರೆ ತೆಗೆದುಕೊಳ್ಳಬೇಡಿ ಹಾಗೂ ಅನ್ಯತಾ ಭಾವಿಸಬೇಡಿ ಎಂದು ತಿಳಿಸಿದ್ದಾರೆ.

## ಐಎಎಸ್ ಅಧಿಕಾರಿಗಳ ವರ್ಗಾವಣೆ

**ಬೆಂಗಳೂರು, ಜೂ.22:** ಆಡಳಿತ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸುವ ಮತ್ತು ಚುರುಕುಗೊಳಿಸುವ ನಿಟ್ಟಿನಲ್ಲಿ ಇಬ್ಬರು ಪ್ರಮುಖ ಐಎಎಸ್ ಅಧಿಕಾರಿಗಳನ್ನು ವರ್ಗಾವಣೆ ಮಾಡಿ ಸರ್ಕಾರ ಆದೇಶ ಹೊರಡಿಸಿದೆ.

ತಕ್ಷಣವೇ ಜಾರಿಗೆ ಬರುವಂತೆ ರಾಜ್ಯದ ಪ್ರಮುಖ ಐಎಎಸ್ ಅಧಿಕಾರಿಗಳು ಹಾಗೂ ಸಿಎಂ ಕಚೇರಿಗೆ ವಿಶೇಷ ಕರ್ತವ್ಯಾಧಿಕಾರಿಯನ್ನು ನೇಮಕ ಮಾಡಿ ರಾಜ್ಯ ಸರ್ಕಾರ ಅಧಿಕೃತ ಆದೇಶ ಹೊರಡಿಸಿದೆ.

1997ರ ಬ್ಯಾಚ್‌ನ ಐಎಎಸ್ ಅಧಿಕಾರಿ ಆಮ್ಲಾನ್ ಆದಿತ್ಯ ಬಿಸ್ವಾಸ್ ಅವರನ್ನು ಬೆಂಗಳೂರು ವಿಭಾಗದ ಪ್ರಾದೇಶಿಕ ಆಯುಕ್ತರನ್ನಾಗಿ ನೇಮಕ ಮಾಡಲಾಗಿದೆ. ಇದರ ಜೊತೆಗೆ ಕಂದಾಯ ಇಲಾಖೆ ಆರ್ಥಿಕ ಅಪರಾಧಗಳ ವಿಭಾಗದ ಪದನಿಮಿತ್ತ ಕಾರ್ಯದರ್ಶಿಯಾಗಿಯೂ ಕಾರ್ಯನಿರ್ವಹಿಸಲಿದ್ದಾರೆ. ಅಲ್ಲದೆ ಬಹುಕೋಟಿ ಐಎಂಎ ಹಗರಣದ ವಿಶೇಷ ಅಧಿಕಾರಿ ಮತ್ತು ಸಕ್ಷಮ ಪ್ರಾಧಿಕಾರದ ಹೆಚ್ಚುವರಿ ಜವಾಬ್ದಾರಿಯನ್ನು ಅವರಿಗೆ ನೀಡಲಾಗಿದೆ

2015ರ ಬ್ಯಾಚ್‌ನ ಐಎಎಸ್ ಅಧಿಕಾರಿ ನಿತೀಶ್ ಕೆ. ಅವರ ವರ್ಗಾವಣೆ ಆದೇಶದಲ್ಲಿ ಸರ್ಕಾರ ಬದಲಾವಣೆ ಮಾಡಿದೆ. ಈ ಹಿಂದೆ ಜೂನ್ 18ರಂದು ಅವರಿಗೆ ನೀಡಲಾಗಿದ್ದ ಪೌರಾಡಳಿತ ನಿರ್ದೇಶನಾಲಯದ ನಿರ್ದೇಶಕ ಹುದ್ದೆಯ ಆದೇಶವನ್ನು ಹಿಂಪಡೆಯಲಾಗಿದೆ.

ಹೊಸ ಆದೇಶದಂತೆ ನಿತೀಶ್ ಅವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಗ್ರೇಟರ್ ಬೆಂಗಳೂರು ಅಥಾರಿಟಿಯ ವಿಶೇಷ ಆಯುಕ್ತ ಮತ್ತು ಮುಖ್ಯ ಹಣಕಾಸು ಅಧಿಕಾರಿಯಾಗಿ ನೇಮಿಸಲಾಗಿದೆ. ಈ ಹುದ್ದೆಯಲ್ಲಿದ್ದ ಡಾ. ಹರೀಶ್ ಕುಮಾರ್ ಕೆ. ಅವರನ್ನು ವರ್ಗಾವಣೆ ಮಾಡಲಾಗಿದೆ. ಈ ಕುರಿತು ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ ಸರ್ಕಾರದ ಅಧೀನಸ ಕಾರ್ಯದರ್ಶಿ ಟಿ.ಮಹಾಂತೇಶ್ ಆದೇಶ ಹೊರಡಿಸಿದ್ದಾರೆ. ಹಾಗೂ ಡಾ. ಕೆ. ವೈಷ್ಣವಿ, ಕೆ.ಎಂ.ಎ.ಎಸ್, ಪೌರಾಡಳಿತ ಇಲಾಖೆ, ಇವರನ್ನು ಮುಖ್ಯಮಂತ್ರಿಗಳ ವಿಶೇಷ ಕರ್ತವ್ಯಾಧಿಕಾರಿಯಾಗಿ ನಿಯೋಜನೆ ಮಾಡಿ ಆದೇಶ ಹೊರಡಿಸಲಾಗಿದೆ.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com
Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ಆರೋಗ್ಯ ಕ್ಷೇತ್ರದ ಸವಾಲು ಎದುರಿಸಲು ಅನುವಾದ ಸಂಶೋಧನೆ ಅಗತ್ಯ

### ಆದಿಚುಂಚನಗಿರಿಯಲ್ಲಿ ಆಯೋಜಿಸಿದ್ದ ಅಂತಾರಾಷ್ಟ್ರೀಯ ಸಮ್ಮೇಳನದಲ್ಲಿ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋತ್ ಹೇಳಿಕೆ

**ಮಂಡ್ಯ, ಜೂ.22:** ಆಧುನಿಕ ಆರೋಗ್ಯ ಕ್ಷೇತ್ರದ ಸಂಕೀರ್ಣ ಸವಾಲುಗಳನ್ನು ಎದುರಿಸಲು ಅಂತರಶಿಸ್ತೀಯ ಸಹಯೋಗ ಮತ್ತು ಅನುವಾದ ಸಂಶೋಧನೆ ಅತ್ಯಗತ್ಯವಾಗಿದ್ದು, ಆರೋಗ್ಯ ವಿಜ್ಞಾನಗಳ ಭವಿಷ್ಯವು ವಿವಿಧ ವಿಭಾಗಗಳ ಜ್ಞಾನ ಮತ್ತು ತಂತ್ರಜ್ಞಾನಗಳ ಸಮನ್ವಯದಲ್ಲಿದೆ ಎಂದು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋತ್ ಹೇಳಿದರು.

ಆದಿಚುಂಚನಗಿರಿ ವಿಶ್ವವಿದ್ಯಾಲಯ, ಆದಿಚುಂಚನಗಿರಿ ಇನ್‌ಸ್ಟಿಟ್ಯೂಟ್ ಫಾರ್ ಮಾಲಿಕ್ಯುಲರ್ ಮೆಡಿಸಿನ್ ವತಿಯಿಂದ ನಾಗಮಂಗಲದ ಬಿಜಿಎಸ್ ಸಭಾಂಗಣದಲ್ಲಿ ಆಯೋಜಿಸಿದ್ದ ಅನುವಾದ ಸಂಶೋಧನೆಗಾಗಿ ಆರೋಗ್ಯ ವಿಜ್ಞಾನಗಳಲ್ಲಿ ಅಂತರಶಿಸ್ತೀಯ ವಿಧಾನಗಳು ವಿಷಯದ ಅಂತರರಾಷ್ಟ್ರೀಯ ಸಮ್ಮೇಳನವನ್ನು ಜಗದ್ಗುರು ಡಾ. ನಿರ್ಮಲಾನಂದನಾಥ ಸ್ವಾಮೀಜಿ ಸಮ್ಮುಖದಲ್ಲಿ ಉದ್ಘಾಟಿಸಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋತ್ ಅವರು ಮಾತನಾಡಿದರು.

ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಐತಿಹಾಸಿಕ ಹಾಗೂ ಸಾಮಾಜಿಕ ಕೊಡುಗೆಗಳನ್ನು ಸ್ಮರಿಸಿದ ರಾಜ್ಯಪಾಲರು ಸುಮಾರು 1800 ವರ್ಷಗಳ ಇತಿಹಾಸ ಹೊಂದಿರುವ ಈ ಮಠವು ಶಿಕ್ಷಣ, ಆರೋಗ್ಯ, ಸಾಮಾಜಿಕ ಸಮಾನತೆ ಹಾಗೂ ರಾಷ್ಟ್ರ ನಿರ್ಮಾಣ ಕ್ಷೇತ್ರಗಳಲ್ಲಿ ಮಹತ್ವದ ಸೇವೆ ಸಲ್ಲಿಸುತ್ತಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.




ಇಂದಿನ ಆರೋಗ್ಯ ಕ್ಷೇತ್ರದಲ್ಲಿ ಕ್ಯಾನ್ಸರ್, ಮಧುಮೇಹ, ಹೃದ್ರೋಗ, ಸಾಂಕ್ರಾಮಿಕ ರೋಗಗಳು ಮತ್ತು ಮಾನಸಿಕ ಆರೋಗ್ಯ ಸಮಸ್ಯೆಗಳಂತಹ ಸವಾಲುಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಏಕಶಿಸ್ತೀಯ ವಿಧಾನಗಳಿಂದ ಪರಿಹಾರ ಸಾಧ್ಯವಿಲ್ಲ. ವೈದ್ಯಕೀಯ ವಿಜ್ಞಾನ, ಜೈವಿಕ ತಂತ್ರಜ್ಞಾನ, ಕೃತಕ ಬುದ್ಧಿಮತ್ತೆ, ಜೈವಿಕ ಮಾಹಿತಿ ವಿಜ್ಞಾನ, ಸಾರ್ವಜನಿಕ ಆರೋಗ್ಯ ಹಾಗೂ ಎಂಜಿನಿಯರಿಂಗ್ ಕ್ಷೇತ್ರಗಳ ಪರಿಣಿತರ ಸಹಯೋಗದಿಂದ ಮಾತ್ರ ಪರಿಣಾಮಕಾರಿ ಪರಿಹಾರಗಳನ್ನು ಕಂಡುಹಿಡಿಯಲು ಸಾಧ್ಯ ಎಂದು ಹೇಳಿದರು. ಕೃತಕ ಬುದ್ಧಿಮತ್ತೆ ಮತ್ತು ದೊಡ್ಡ ದತ್ತಾಂಶ ವಿಶ್ಲೇಷಣೆಯು ಆರೋಗ್ಯ ಕ್ಷೇತ್ರದಲ್ಲಿ ಮಹತ್ವದ ಪರಿವರ್ತನೆ ತರಲಿದ್ದು, ಆರಂಭಿಕ ರೋಗನಿರ್ಣಯ, ಔಷಧ ಅಭಿವೃದ್ಧಿ ಹಾಗೂ ರೋಗ ಮುನ್ನರಿವು ಕ್ಷೇತ್ರಗಳಲ್ಲಿ ಹೊಸ ಅವಕಾಶಗಳನ್ನು ಸೃಷ್ಟಿಸುತ್ತಿದೆ. ಕೋವಿಡ್–19 ಸಾಂಕ್ರಾಮಿಕದ ಸಂದರ್ಭದಲ್ಲಿ ವಿಜ್ಞಾನಿಗಳು, ವೈದ್ಯರು, ಜೈವಿಕ ತಂತ್ರಜ್ಞಾನ ತಜ್ಞರು, ಸಂಖ್ಯಾಶಾಸ್ತ್ರಜ್ಞರು ಮತ್ತು ನೀತಿ ನಿರೂಪಕರ ಸಾಮೂಹಿಕ ಪ್ರಯತ್ನದಿಂದ ದಾಖಲೆಯ ಅವಧಿಯಲ್ಲಿ ಲಸಿಕೆ ಅಭಿವೃದ್ಧಿಯಾಗಿರುವುದು ಅಂತರಶಿಸ್ತೀಯ ಸಂಶೋಧನೆಯ ಯಶಸ್ವಿ ಉದಾಹರಣೆ ಎಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋತ್ ಅವರು ಹೇಳಿದರು. ವಿಕಸಿತ ಭಾರತ–2047 ಗುರಿ ಸಾಧನೆಯಲ್ಲಿ ಆರೋಗ್ಯ ಸಂಶೋಧನೆ ಪ್ರಮುಖ ಪಾತ್ರ ವಹಿಸಲಿದ್ದು, ರಾಷ್ಟ್ರೀಯ ಶಿಕ್ಷಣ ನೀತಿ–2020 ಬಹುಶಿಸ್ತೀಯ ಮತ್ತು ಅಂತರಶಿಸ್ತೀಯ ಶಿಕ್ಷಣಕ್ಕೆ ಒತ್ತು ನೀಡಿರುವುದು ಸಂಶೋಧನೆಗೆ ಹೊಸ ದಿಕ್ಕುಗಳನ್ನು ನೀಡುತ್ತಿದೆ ಎಂದು ಅವರು ಅಭಿಪ್ರಾಯಪಟ್ಟರು. ಭಾರತೀಯ ವೈದ್ಯಕೀಯ ಸಂಶೋಧನಾ ಮಂಡಳಿ ಜೈವಿಕ ತಂತ್ರಜ್ಞಾನ ಇಲಾಖೆ, ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ ಹಾಗೂ ವಿವಿಧ ವಿಶ್ವವಿದ್ಯಾಲಯಗಳು ಜೀನೋಮಿಕ್ಸ್, ಕಾಂಡಕೋಶ ಸಂಶೋಧನೆ, ನ್ಯಾನೋಮೆಡಿಸಿನ್, ಟೆಲಿಮೆಡಿಸಿನ್ ಮತ್ತು ಡಿಜಿಟಲ್ ಆರೋಗ್ಯ ಕ್ಷೇತ್ರಗಳಲ್ಲಿ ಗಮನಾರ್ಹ ಸಾಧನೆ ಮಾಡುತ್ತಿವೆ ಎಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋತ್ ಅವರು ಹೇಳಿದರು.

ಆಯುರ್ವೇದ, ಯೋಗ ಮತ್ತು ಆಧುನಿಕ ವೈದ್ಯಕೀಯ ವಿಜ್ಞಾನಗಳ ಸಮನ್ವಯದ ಮೂಲಕ ಸಮಗ್ರ ಆರೋಗ್ಯ ಸೇವೆಗೆ ಹೊಸ ಸಾಧ್ಯತೆಗಳು ಮೂಡುತ್ತಿದ್ದು, ಇದು ಆರೋಗ್ಯ ಕ್ಷೇತ್ರವನ್ನು ಇನ್ನಷ್ಟು ಮಾನವೀಯ ಮತ್ತು ಪರಿಣಾಮಕಾರಿಯಾಗಿಸಲಿದೆ. ಹೊಕ್ಕೈಡೋ ವಿಶ್ವವಿದ್ಯಾಲಯ ಸೇರಿದಂತೆ ವಿವಿಧ ಅಂತರರಾಷ್ಟ್ರೀಯ ಸಂಸ್ಥೆಗಳ ವಿಜ್ಞಾನಿಗಳು ಹಾಗೂ ಸಂಶೋಧಕರು ಭಾಗವಹಿಸಿರುವುದು ಜಾಗತಿಕ ವೈಜ್ಞಾನಿಕ ಸಹಭಾಗಿತ್ವದ ಮಹತ್ವವನ್ನು ಪ್ರತಿಬಿಂಬಿಸುತ್ತದೆ ಎಂದು ರಾಜ್ಯಪಾಲರು ಹೇಳಿದರು. ಆದಿಚುಂಚನಗಿರಿ ಇನ್‌ಸ್ಟಿಟ್ಯೂಟ್ ಫಾರ್ ಮಾಲಿಕ್ಯುಲರ್ ಮೆಡಿಸಿನ್ ಕಳೆದ ಒಂದು ದಶಕದಲ್ಲಿ ಬಯೋಮೆಡಿಕಲ್ ಸಂಶೋಧನೆ, ಅನುವಾದ ವೈದ್ಯಕೀಯ, ಕ್ಯಾನ್ಸರ್ ಜೀವಶಾಸ್ತ್ರ, ಮಾಲಿಕ್ಯುಲರ್ ಡಯಾಗ್ನೋಸ್ಟಿಕ್ಸ್ ಹಾಗೂ ಆರೋಗ್ಯ ನಾವೀನ್ಯತೆ ಕ್ಷೇತ್ರಗಳಲ್ಲಿ ಮಹತ್ವದ ಸಾಧನೆ ಮಾಡಿರುವುದನ್ನು ರಾಜ್ಯಪಾಲರು ಶ್ಲಾಘಿಸಿದರು.

ಸಚಿವ ಡಾ. ಶರಣಪ್ರಕಾಶ ಪಾಟೀಲ್, ಶಾಸಕ ಎನ್. ಚೆಲುವರಾಯಸ್ವಾಮಿ, ಪ್ರಾಧ್ಯಾಪಕ ಕೆ.ಎನ್. ಗಣೇಶ್, ಕುಲಪತಿ ಡಾ. ಎಸ್.ಎನ್. ಶ್ರೀಧರ್, ಕುಲಸಚಿವ ಡಾ. ಸಿ.ಕೆ. ಸುಬ್ಬರಾಯ, ಪ್ರಾಧ್ಯಾಪಕ ಕೆ.ಎಸ್. ರಂಗಪ್ಪ, ಜಪಾನ್ ನ ಪ್ರಾಧ್ಯಾಪಕ ಶಿನ್–ಇಚಿರೊ ನಿಶಿಮುರಾ, ಂಖಬಓ ನಿರ್ದೇಶಕ ಡಾ. ಶೋಬಿತ್ ಸೇರಿದಂತೆ ದೇಶ–ವಿದೇಶಗಳ ವಿಜ್ಞಾನಿಗಳು, ಸಂಶೋಧಕರು, ಶಿಕ್ಷಣ ತಜ್ಞರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಕೆಎಸ್‌ಐಐಡಿಸಿಯಿಂದ 143 ಕೋಟಿ ರೂ. ಲಾಭಾಂಶ ಸಲ್ಲಿಕೆ




**ಬೆಂಗಳೂರು, ಜೂ.22:** 2024–25ನೇ ಸಾಲಿನಲ್ಲಿ ಕರ್ನಾಟಕ ಕೈಗಾರಿಕಾ ಮೂಲಸೌಕರ್ಯ ಅಭಿವೃದ್ಧಿ ನಿಗಮವು (ಕೆಎಸ್‌ಐಐಡಿಸಿ) ಗಳಿಸಿದ ನಿವ್ವಳ ಲಾಭದಲ್ಲಿ 143.12 ಕೋಟಿ ರೂ.ಗಳ ಲಾಭಾಂಶವನ್ನು (ಡಿವಿಡೆಂಡ್) ಬೃಹತ್ ಕೈಗಾರಿಕೆ ಮತ್ತು ಮೂಲಸೌಕರ್ಯ ಸಚಿವ ಎಂ ಬಿ ಪಾಟೀಲ ಅವರು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಸೋಮವಾರ ಹಸ್ತಾಂತರಿಸಿದರು. ಇದೇ ಸಂದರ್ಭದಲ್ಲಿ ಸಂಸ್ಥೆಯ ವತಿಯಿಂದ 3 ಕೋಟಿ ರೂ.ಗಳ ಚೆಕ್ ಅನ್ನು ಮುಖ್ಯಮಂತ್ರಿಗಳ ಪರಿಹಾರ ನಿಧಿಗೆ ಕೊಡಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ಸಚಿವರು, ನಿಗಮವು 2024–25ರಲ್ಲಿ ಒಟ್ಟು ತೆರಿಗೆ ಕಡಿತದ ಬಳಿಕ 188.41 ಕೋಟಿ ರೂ. ಲಾಭ ಗಳಿಸಿತ್ತು. ಜತೆಗೆ 2025–26ನೇ ಸಾಲಿನಲ್ಲಿ ಸಂಸ್ಥೆಗೆ 19.34 ಕೋಟಿ ರೂ.ಗಳಷ್ಟು ಹಣವು ವಿಶೇಷ ಲಾಭಾಂಶ ಬಂದಿತ್ತು. ನಿಯಮಾನುಸಾರವಾಗಿ ಲಾಭಾಂಶದ ಪೈಕಿ ಶೇ.30ರಷ್ಟನ್ನು ಈಗ ಸರಕಾರಕ್ಕೆ ಹಸ್ತಾಂತರಿಸಲಾಗಿದೆ ಎಂದಿದ್ದಾರೆ. ಕೆಎಸ್‌ಐಐಡಿಸಿ ಸಂಸ್ಥೆಗೆ ಕ್ಯಾಮ್ಕೊ, ಕ್ಯಾಟ್ಕೊ, ಎಂಎಸ್‌ಐಎಲ್, ಎಚ್.ಜಿ.ಎಂ.ಎಲ್ ಮುಂತಾದ ಉದ್ದಿಮೆಗಳಿಂದ ಈ ಆದಾಯ ಬಂದಿದೆ. ಸಾರ್ವಜನಿಕ ಉದ್ದಿಮೆಗಳು ಲಾಭದ ಹಳಿಗೆ ಮರಳುತ್ತಿರುವುದು ಮತ್ತು ಕಳೆದ ಮೂರು ವರ್ಷಗಳಿಂದ ಇದು ಸಾರ್ವಕಾಲಿಕ ದಾಖಲೆಯ ಪ್ರಮಾಣದಲ್ಲಿರುವುದು ಒಳ್ಳೆಯ ಬೆಳವಣಿಗೆಯಾಗಿದೆ ಎಂದು ಅವರು ನುಡಿದಿದ್ದಾರೆ. ವಿಧಾನಸೌಧದಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ನಿಗಮದ ವ್ಯವಸ್ಥಾಪಕ ನಿರ್ದೇಶಕಿ ಖುಷ್ಬೂ ಗೋಯಲ್, ಕಾರ್ಯನಿರ್ವಾಹಕ ನಿರ್ದೇಶಕ ಚಿದಾನಂದ್ ಹಾಜರಿದ್ದರು.

# ಪದ್ಮಶ್ರೀ ಅಂಕೇಗೌಡರ ಪುಸ್ತಕ ಮನೆಗೆ ಮುಖ್ಯಮಂತ್ರಿ ಉಡುಗೊರೆ

### ಪುಸ್ತಕಗಳ ಸಂರಕ್ಷಣೆಗೆ 5 ಕೋಟಿ ರೂ. ಅನುದಾನ, 2 ಎಕರೆ ಭೂಮಿ



**ಬೆಂಗಳೂರು, ಜೂ.22:** 2026ನೇ ಸಾಲಿನ ಪದ್ಮಶ್ರೀ ಪುರಸ್ಕೃತ, ಕನ್ನಡಿಗ ಮಂಡ್ಯದ ಅಂಕೇಗೌಡರ ಕನಸಿಗೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಉಡುಗೊರೆ ನೀಡಿದ್ದಾರೆ. ಅಂಕೇಗೌಡರು ಸಂಗ್ರಹಿಸಿರುವ ಅಪರೂಪದ 20 ಲಕ್ಷಕ್ಕೂ ಹೆಚ್ಚು ಪುಸ್ತಕಗಳ ರಕ್ಷಣೆ ಹಾಗೂ ಹೈಟೆಕ್ ಗ್ರಂಥಾಲಯ ನಿರ್ಮಾಣಕ್ಕಾಗಿ ಸರ್ಕಾರದ ವತಿಯಿಂದ 5 ಕೋಟಿ ರೂಪಾಯಿ ಅನುದಾನ ಮತ್ತು 2 ಎಕರೆ ಜಮೀನು ನೀಡಲು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಇಂದು ಮಹತ್ವದ ಆದೇಶ ಹೊರಡಿಸಿದ್ದಾರೆ. ವಿಧಾನಸೌಧದಲ್ಲಿರುವ ಮುಖ್ಯಮಂತ್ರಿಗಳ ಕಚೇರಿಯಲ್ಲಿ ಪದ್ಮಶ್ರೀ ಪುರಸ್ಕೃತ ಅಂಕೇಗೌಡರು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಸೋಮವಾರ ಭೇಟಿ ಮಾಡಿ ಮಾಡಿದ ಸಂದರ್ಭದಲ್ಲಿ ಅಂಕೇಗೌಡರು ತಮ್ಮ "ಪುಸ್ತಕ ಮನೆ"ಯ ಇತಿಹಾಸ ಹಾಗೂ ಅಲ್ಲಿರುವ ಲಕ್ಷಾಂತರ ಜ್ಞಾನದ ಭಂಡಾರವನ್ನು ಸಂರಕ್ಷಿಸಲು ಎದುರಿಸುತ್ತಿರುವ ಸವಾಲುಗಳನ್ನು ಮುಖ್ಯಮಂತ್ರಿಗಳ ಮುಂದೆ ವಿವರಿಸಿದರು. ಅಂಕೇಗೌಡರ ಅಪ್ರತಿಮ ಸಾಹಿತ್ಯ ಸೇವೆ ಹಾಗೂ ಜ್ಞಾನದ ದಾಹವನ್ನು ಮನಗಂಡ ಮುಖ್ಯಮಂತ್ರಿಗಳು ತಕ್ಷಣವೇ ಅವರು ಸಲ್ಲಿಸಿದ ಮನವಿ ಪತ್ರದಲ್ಲಿ ಬೃಹತ್ ಗ್ರಂಥಾಲಯದ ಅಭಿವೃದ್ಧಿಗೆ ಅಗತ್ಯವಿರುವ ಭೂಮಿ ಮತ್ತು ಆರ್ಥಿಕ ನೆರವನ್ನು ಘೋಷಿಸಿ ಸಹಿ ಮಾಡಿ ಅಧಿಕಾರಿಗಳಿಗೆ ಆದೇಶ ನೀಡಿದ್ದಾರೆ. ಅಂಕೇಗೌಡರ ಭೇಟಿ, ಸೌಜನ್ಯದ ಮಾತುಕತೆಯನ್ನು ಸಿಎಂ ಡಿ.ಕೆ. ಶಿವಕುಮಾರ್ ತಮ್ಮ ಸೋಷಿಯಲ್ ಮೀಡಿಯಾದಲ್ಲಿ ವಿಶ್ವಮಾನವ ಕುವೆಂಪು ಅವರು ತಮ್ಮ ಆತ್ಮಕಥೆ ನೆನಪಿನ ದೋಣಿಯಲ್ಲಿ ಅವರು ಮೊದಲ ಬಾರಿಗೆ ಗ್ರಂಥಾಲಯಕ್ಕೆ ಭೇಟಿ ನೀಡಿದಾಗ ಆದ ಅನುಭವವನ್ನು ಅಕ್ಷರ ರೂಪದಲ್ಲಿ ಕಟ್ಟಿಕೊಟ್ಟದ್ದನ್ನು ಸ್ಮರಿಸಿ ಬರೆದಿದ್ದಾರೆ. ಲಕ್ಷಾಂತರ ಪುಸ್ತಕಗಳ ಸಂಗ್ರಹದ ಮೂಲಕ ನಾಡಿಗೆ ಉಣಬಡಿಸುತ್ತಿರುವ ಮಹಾನ್ ಚೇತನ, ಪದ್ಮಶ್ರೀ ಪುರಸ್ಕೃತರು ಹಾಗೂ ಪುಸ್ತಕ ಮನೆಯ ರೂವಾರಿಗಳಾದ ಅಂಕೇಗೌಡ ಎಂ. ಅವರು ಇಂದು ವಿಧಾನಸೌಧದಲ್ಲಿ ನನ್ನನ್ನು ಭೇಟಿಯಾಗಿ ಸಮಾಲೋಚಿಸಿದರು.

ಪುಸ್ತಕ ಲೋಕದ ಈ ಅನನ್ಯ ಸಾಧಕರೊಂದಿಗಿನ ಭೇಟಿ ಅತ್ಯಂತ ಅರ್ಥಪೂರ್ಣವಾಗಿತ್ತು ಎಂದು ಬರೆದುಕೊಂಡಿದ್ದಾರೆ. ಈ ವೇಳೆ ವಿಧಾನ ಪರಿಷತ್ ಸದಸ್ಯ ದಿನೇಶ್ ಗೂಳಿಗೌಡ ಇದ್ದರು.

# ಕಂದಾಯ ಇಲಾಖೆ ಆಡಳಿತ ಸುಧಾರಣೆ: ಸರ್ಕಾರದ ಹೆಜ್ಜೆ



■ ಕಾರ್ಯಕ್ಷಮತೆ ಹೆಚ್ಚಿ ಸಹಾಯಕ ಆಯುಕ್ತರಿಗೆ ಹೆಚ್ಚಿನ ಜವಾಬ್ದಾರಿ: ಸಚಿವ ಡಾ.ಜಿ. ಪರಮೇಶ್ವರ್

**ಬೆಂಗಳೂರು, ಜೂ.22:** ರಾಜ್ಯ ಕಂದಾಯ ಇಲಾಖೆಯ ಆಡಳಿತ ಸುಧಾರಣೆಗೆ ಸರ್ಕಾರ ಮುಂದಾಗಿದೆ. ಇಲಾಖೆಯ ಕಾರ್ಯಕ್ಷಮತೆ ಹೆಚ್ಚಿಸಲು ಸಹಾಯಕ ಆಯುಕ್ತರಿಗೆ ಹೆಚ್ಚಿನ ಜವಾಬ್ದಾರಿ ನೀಡಬೇಕು. ಖಾಲಿ ಹುದ್ದೆಗಳ ಭರ್ತಿ ಕುರಿತು ಅಗತ್ಯ ನಿರ್ದೇಶನ ನೀಡಿರುವುದಾಗಿ ಡಿಸಿಎಂ ಡಾ.ಜಿ.ಪರಮೇಶ್ವರ ಹೇಳಿದರು. ವಿಧಾನಸೌಧದಲ್ಲಿ ಕಂದಾಯ ಇಲಾಖೆಯ ವಿವಿಧ ಯೋಜನೆಗಳು, ಆಡಳಿತಾತ್ಮಕ ಪ್ರಗತಿ ಹಾಗೂ ಸಾರ್ವಜನಿಕ ಸೇವೆಗಳ ಅನುಷ್ಠಾನದ ಕುರಿತು ಅಧಿಕಾರಿಗಳೊಂದಿಗೆ ಸೋಮವಾರ ಸಭೆ ನಡೆಸಿದರು. ಬಾಕಿ ಉಳಿದಿರುವ ಕಡತಗಳನ್ನು ಶೀಘ್ರ ವಿಲೇವಾರಿ ಮಾಡುವಂತೆ ಕಟ್ಟುನಿಟ್ಟಿನ ಸೂಚನೆ ನೀಡಿದರು. ಜನರ ಸಮಸ್ಯೆಗಳಿಗೆ ಆದ್ಯತೆ ನೀಡುವುದು ಅದ್ಯತೆ ಆಗಬೇಕೆಂದು ತಿಳಿಸಿದರು. ಪರವಾನಗಿ ಭೂಮಾಪಕರ ಸಮಸ್ಯೆಗಳ ಕುರಿತು ಗಮನ ಹರಿಸಬೇಕೆಂದು ಸೂಚಿಸಿದ ಅವರು, ಭೂಮಾಪಕರ ಸಭೆಯನ್ನು ಕರೆದು ಅವರ ಅಹವಾಲುಗಳು ಹಾಗೂ ಬೇಡಿಕೆಗಳನ್ನು ಆಲಿಸಬೇಕು. ಭೂಮಾಪಕರ ಸೇವಾ ಹಾಗೂ ವೃತ್ತಿಪರ ಸಮಸ್ಯೆಗಳ ಪರಿಹಾರಕ್ಕೆ ಅಗತ್ಯ ಕ್ರಮ ಕೈಗೊಂಡು, ತ್ವರಿತವಾಗಿ ಇತ್ಯರ್ಥಪಡಿಸಬೇಕು ಎಂದು ಹೇಳಿದರು.

ಕಂದಾಯ ಇಲಾಖೆಯಲ್ಲಿ ಖಾಲಿ ಇರುವ ವಿವಿಧ ಹುದ್ದೆಗಳ ನೇಮಕಾತಿ ಪ್ರಕ್ರಿಯೆಯನ್ನು ವೇಗಗೊಳಿಸಬೇಕು. ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ಬಡ್ತಿ ನೀಡುವ ಪ್ರಕ್ರಿಯೆಯಲ್ಲಿ ಯಾವುದೇ ರೀತಿಯ ವಿಳಂಬ ಉಂಟಾಗಬಾರದು. ಜೇಷ್ಠತಾ ಪಟ್ಟಿಯನ್ನು ಶೀಘ್ರ ಪ್ರಕಟಿಸಬೇಕು. ನಿಯಮಾನುಸಾರ ಪಾರದರ್ಶಕವಾಗಿ ಬಡ್ತಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಬೇಕು ಎಂದು ಹೇಳಿದರು.

ಇ–ಪೌತಿ ಖಾತೆ ಸೇರಿದಂತೆ ಇಲಾಖೆಯ ಎಲ್ಲ ಆನ್‌ಲೈನ್ ಮತ್ತು ಸಾರ್ವಜನಿಕ ಸೇವೆಗಳನ್ನು ನಿಗದಿತ ಕಾಲಮಿತಿಯೊಳಗೆ ಪೂರ್ಣಗೊಳಿಸಬೇಕು. ನಾಗರಿಕರು ಕಚೇರಿಗಳಿಗೆ ಅನಗತ್ಯವಾಗಿ ಅಲೆದಾಡುವ ಪರಿಸ್ಥಿತಿ ನಿರ್ಮಾಣವಾಗದಂತೆ ಸೇವೆಗಳ ವಿತರಣೆಯಲ್ಲಿ ದಕ್ಷತೆ ಮತ್ತು ಪಾರದರ್ಶಕತೆ ಕಾಪಾಡುವಂತೆ ತಿಳಿಸಿದರು.ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ಜನಸಾಮಾನ್ಯರ ಸಮಸ್ಯೆಗಳಿಗೆ ತ್ವರಿತವಾಗಿ ಸ್ಪಂದಿಸಬೇಕು. ಭೂ ದಾಖಲೆ, ಖಾತೆ ಬದಲಾವಣೆ, ಸರ್ವೇ ಕಾರ್ಯ, ಮ್ಯೂಟೇಷನ್ ಹಾಗೂ ಇತರೆ ಕಂದಾಯ ಸೇವೆಗಳ ವಿಲೇವಾರಿಯಲ್ಲಿ ವಿಳಂಬ ಕಡಿಮೆ ಮಾಡುವ ನಿಟ್ಟಿನಲ್ಲಿ ನಿರಂತರ ಮೇಲ್ವಿಚಾರಣೆ ನಡೆಸಬೇಕು.ಅಧಿಕಾರಿಗಳು ಇಲಾಖೆಯ ಎಲ್ಲಾ ಕಾರ್ಯಗಳ ಪ್ರಗತಿಯನ್ನು ನಿಯಮಿತವಾಗಿ ಪರಿಶೀಲಿಸಿ, ಗುರಿ ಸಾಧನೆಯತ್ತ ಗಮನ ಹರಿಸಬೇಕು. ಸಾರ್ವಜನಿಕರಿಗೆ ಉತ್ತಮ ಸೇವೆ ಒದಗಿಸುವ ಉದ್ದೇಶದಿಂದ ಆಡಳಿತಾತ್ಮಕ ಕಾರ್ಯಗಳಿಗೆ ಮತ್ತಷ್ಟು ವೇಗ ನೀಡುವಂತೆ ಹೇಳಿದರು.

# ನೀಟ್ ಪರೀಕ್ಷೆ ತಿಳಿದಿದ್ದರೂ ಬೃಹತ್ ಕಾರ್ಯಕ್ರಮ ಆಯೋಜನೆ, ಪರೀಕ್ಷಾರ್ಥಿಗಳು, ಜನರಿಗೆ ತೊಂದರೆ



■ ಕೆಪಿಸಿಸಿ ಅಧ್ಯಕ್ಷರ ಪದಗ್ರಹಣ ಕಾರ್ಯಕ್ರಮಕ್ಕೆ ಕಿಡಿ

**ಬೆಂಗಳೂರು, ಜೂ.22:** ರಾಜಧಾನಿಯ ಅರಮನೆ ಮೈದಾನದಲ್ಲಿ ನಡೆದ ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಅವರ ಅದ್ದೂರಿ ಪದಗ್ರಹಣ ಸಮಾರಂಭ ಈಗ ತೀವ್ರ ರಾಜಕೀಯ ವಿವಾದಕ್ಕೆ ಕಾರಣವಾಗಿದೆ. ನೀಟ್ ಪರೀಕ್ಷೆಯ ದಿನವೇ ಇಂತಹ ಬೃಹತ್ ಸಮಾರಂಭ ಆಯೋಜಿಸಿ ವಿದ್ಯಾರ್ಥಿಗಳಿಗೆ ತೊಂದರೆ ಕೊಟ್ಟ ಕಾಂಗ್ರೆಸ್ ಸರ್ಕಾರದ ವಿರುದ್ಧ ಬೆಂಗಳೂರು ದಕ್ಷಿಣ ಸಂಸದ ತೇಜಸ್ವಿ ಸೂರ್ಯ ಕಿಡಿಕಾರಿದ್ದಾರೆ. ಈ ಕುರಿತು ಮಾಧ್ಯಮಗಳ ಜೊತೆ ಮಾತನಾಡಿ, ನೀಟ್ ಪರೀಕ್ಷೆ ಇದೆ ಎಂದು ಗೊತ್ತಿದ್ದೂ ಕಾಂಗ್ರೆಸ್ ನಾಯಕರು ಅರಮನೆ ಮೈದಾನದಲ್ಲಿ ಇಷ್ಟು ದೊಡ್ಡ ಕಾರ್ಯಕ್ರಮ ಮಾಡಿದ್ದಾರೆ. ಉದ್ದೇಶ ಪೂರ್ವಕವಾಗಿಯೇ ವಿದ್ಯಾರ್ಥಿಗಳಿಗೆ ಮತ್ತು ಸಾರ್ವಜನಿಕರಿಗೆ ತೊಂದರೆ ನೀಡಲಾಗಿದೆ. ಹರಿಪ್ರಸಾದ್ ಅವರು ಒಂದು ದಿನ ತಡವಾಗಿ ಪದಗ್ರಹಣ ಮಾಡಿದ್ದರೆ ಭೂಮಿ ಬಾಯಿ ಬಿಡುತ್ತಿತ್ತೇ? ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಭಾಷಣಗಳಲ್ಲಿ ತಾವು ವಿದ್ಯಾರ್ಥಿಗಳ ಪರ ಎಂದು ದೊಡ್ಡದಾಗಿ ಮಾತನಾಡುತ್ತಾರೆ. ಆದರೆ ಅವರದ್ದೆಲ್ಲ ಬರೀ ಡ್ರಾಮಾ ಎಂಬುದು ಈ ಘಟನೆಯಿಂದ ಸಾಬೀತಾಗಿದೆ. ಕಾಂಗ್ರೆಸ್‌ನವರಿಗೆ ಜವಾಬ್ದಾರಿ ಇದ್ದಿದ್ದರೆ ಮಕ್ಕಳ ಪರೀಕ್ಷೆಯ ದಿನ ಇಂತಹ ಸಮಾರಂಭ ಮಾಡುತ್ತಿರಲಿಲ್ಲ ಎಂದು ಹರಿಹಾಯ್ದರು. "ಈಗಲಾದರೂ ಮುಖ್ಯಮಂತ್ರಿಗಳು ಇಂತಹ ಸಾರ್ವಜನಿಕ ಕಾರ್ಯಕ್ರಮಗಳ ಬಗ್ಗೆ ಗಮನ ಹರಿಸಬೇಕು. ಪ್ರಮುಖ ಪರೀಕ್ಷೆಗಳು ಇರುವ ದಿನಗಳಲ್ಲಿ ಜನರಿಗೆ ಮತ್ತು ವಿದ್ಯಾರ್ಥಿಗಳಿಗೆ ತೊಂದರೆಯಾಗುವಂತಹ ಯಾವುದೇ ರಾಜಕೀಯ ರ್‍ಯಾಲಿ ಅಥವಾ ಸಮಾರಂಭಗಳಿಗೆ ಅನುಮತಿ ನೀಡಬಾರದು ಎಂಬ ನಿಯಮ ತರಬೇಕು ಎಂದು ಆಗ್ರಹಿಸಿದ್ದಾರೆ.

## ಕಾಂಗ್ರೆಸ್ ಕಾರ್ಯಕ್ರಮದಿಂದ ಸಂಕಷ್ಟ



ಅರಮನೆ ಮೈದಾನದಲ್ಲಿ ಕಾಂಗ್ರೆಸ್ ಪಕ್ಷ ಭಾನುವಾರ ಆಯೋಜಿಸಿದ್ದ ಕಾರ್ಯಕ್ರಮದಿಂದಾಗಿ ನಗರದಲ್ಲಿ ಭಾರಿ ವಾಹನದಟ್ಟಣೆ ಉಂಟಾಗಿ ನೀಟ್ ಪರೀಕ್ಷೆಗೆ ತೆರಳುತ್ತಿದ್ದ ಸಾವಿರಾರು ವಿದ್ಯಾರ್ಥಿಗಳು ಹಾಗೂ ಪೋಷಕರು ಸಂಕಷ್ಟ ಅನುಭವಿಸಿದ್ದಾರೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ್ ಹೇಳಿದ್ದಾರೆ. ಪದ್ಮನಾಭನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾರ್ಯಕ್ರಮವನ್ನು ಎರಡು ಅಥವಾ ಮೂರು ಗಂಟೆ ಮುಂದೂಡಿದ್ದರೆ ಈ ಸಮಸ್ಯೆಯನ್ನು ತಪ್ಪಿಸಬಹುದಾಗಿತ್ತು. ಆದರೆ ಕಾಂಗ್ರೆಸ್ ನಾಯಕರಿಗೆ ವಿದ್ಯಾರ್ಥಿಗಳ ಭವಿಷ್ಯಕ್ಕಿಂತ ರಾಜಕೀಯ ಪ್ರಚಾರವೇ ಮುಖ್ಯವಾಗಿತ್ತು, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ತಮ್ಮ ಕಾರ್ಯಕ್ರಮಗಳ ವೇಳಾಪಟ್ಟಿಯನ್ನೇ ಬದಲಾಯಿಸುವಷ್ಟು ಕಾಳಜಿ ತೋರಿಸುತ್ತಾರೆ. ಆದರೆ ಕಾಂಗ್ರೆಸ್ ಸರ್ಕಾರಕ್ಕೆ ಹಾಗೂ ಅದರ ನಾಯಕರಿಗೆ ವಿದ್ಯಾರ್ಥಿಗಳ ಬಗ್ಗೆ ಯಾವುದೇ ಸಂವೇದನೆ ಇಲ್ಲ ಎಂಬುದು ಮತ್ತೊಮ್ಮೆ ಸಾಬೀತಾಗಿದೆ ಎಂದಿದ್ದಾರೆ.

# ಅಡ್ಡ ಮತದಾನ: ಬಿಜೆಪಿಯ 3 ಶಾಸಕರು, ಕಾಂಗ್ರೆಸ್ ನಾಯಕರ ರಹಸ್ಯ ಸಭೆ

**ಬೆಂಗಳೂರು, ಜೂ.22:** ವಿಧಾನ ಪರಿಷತ್ ಚುನಾವಣೆ ಅಡ್ಡ ಮತದಾನದ ಹಿಂದೆ ನಡೆದಿದ್ದ ಪ್ರಮುಖ ರಹಸ್ಯ ಸಭೆಯ ಬಗ್ಗೆ ಮಾಜಿ ಸಿಎಂ ಡಿ.ವಿ.ಸದಾನಂದ ಗೌಡ ಬಹಿರಂಗಪಡಿಸಿದ್ದಾರೆ.



■ ಪಕ್ಷದ ರಾಜ್ಯ ಪ್ರಧಾನ ಕಾರ್ಯದರ್ಶಿಗೆ ತಿಳಿಸಿದ್ದೆ: ಮಾಜಿ ಸಿಎಂ ಸದಾನಂದಗೌಡ

ಬೆಂಗಳೂರಿನ ಪ್ರೆಸ್ಟೀಜ್ ಅಪಾರ್ಟ್‌ಮೆಂಟ್‌ನಲ್ಲಿ ಬಿಜೆಪಿಯ ಮೂವರು ಮತ್ತು ಕಾಂಗ್ರೆಸ್‌ನ ಇಬ್ಬರು ಪ್ರಮುಖ ನಾಯಕರು ಒಟ್ಟಿಗೆ ಸೇರಿ ಈ ಕುರಿತು ಗುಪ್ತ ಆಪರೇಷನ್ ನಡೆಸುತ್ತಿದ್ದಾರೆ ಎಂಬ ಖಚಿತ ಮಾಹಿತಿ ತಮಗೆ ಮೊದಲೇ ಸಿಕ್ಕಿತ್ತು ಎಂದು ತಿಳಿಸಿದ್ದಾರೆ. ಈ ಆತಂಕಕಾರಿ ಸುದ್ದಿ ತಿಳಿಯುತ್ತಿದ್ದಂತೆ ಎಚ್ಚೆತ್ತ ಅವರು, ತಕ್ಷಣವೇ ರಾಜ್ಯ ಬಿಜೆಪಿ ಪ್ರಧಾನ ಕಾರ್ಯದರ್ಶಿಗಳಿಗೆ ಕರೆ ಮಾಡಿ ಲಭ್ಯವಿದ್ದ ಎಲ್ಲ ವಿವರಗಳನ್ನು ಹಂಚಿಕೊಂಡಿದ್ದರು. ಅಲ್ಲದೆ ಈ ಬಗ್ಗೆ ತೀವ್ರ ನಿಗಾ ವಹಿಸುವಂತೆ ಮುನ್ನೆಚ್ಚರಿಕೆ ನೀಡಿದ್ದರು. ಆದರೆ ರಾಜ್ಯ ನಾಯಕತ್ವ ಈ ಆಂತರಿಕ ಸುಳಿವನ್ನು ಗಂಭೀರವಾಗಿ ಪರಿಗಣಿಸದ ಕಾರಣ, ಚುನಾವಣೆಯಲ್ಲಿ ಪಕ್ಷ ಹಿನ್ನಡೆ ಅನುಭವಿಸುವಂತಾಯಿತು ಎಂದು ಬೇಸರ ವ್ಯಕ್ತಪಡಿಸಿದ್ದಾರೆ. ಇದೇ ವೇಳೆ, ಅಡ್ಡ ಮತದಾನ ಮಾಡಿದವರನ್ನು ಪತ್ತೆ ಹಚ್ಚಲು ಧರ್ಮಸ್ಥಳದ ಮಂಜುನಾಥ ಸ್ವಾಮಿ ಸನ್ನಿಧಿಯಲ್ಲಿ ಆಣೆ–ಪ್ರಮಾಣ ಮಾಡಿಸಲು ಮುಂದಾಗಿರುವ ಬಿಜೆಪಿ ನಾಯಕರ ನಿರ್ಧಾರವನ್ನು ಅವರು ತೀವ್ರವಾಗಿ ಖಂಡಿಸಿದ್ದಾರೆ. ರಾಜಕೀಯ ಬಿಕ್ಕಟ್ಟುಗಳನ್ನು ಸಾಂಸ್ಥಿಕವಾಗಿ ಬಗೆಹರಿಸಿಕೊಳ್ಳಬೇಕೇ ಹೊರತು, ಧಾರ್ಮಿಕ ಕ್ಷೇತ್ರಗಳನ್ನು ಇಂತಹ ವಿಚಾರಗಳಿಗೆ ಬಳಸಿಕೊಳ್ಳುವುದು ಸರಿಯಲ್ಲ. ಇದು ಸಮಾಜಕ್ಕೆ ತಪ್ಪು ಸಂದೇಶ ರವಾನಿಸುತ್ತದೆ ಮತ್ತು ಪಕ್ಷದ ಸಾಮರ್ಥ್ಯವನ್ನು ನಗೆಪಾಟಲಿಗೀಡು ಮಾಡುತ್ತದೆ ಎಂದು ಅವರು ಬಿ.ವೈ. ವಿಜಯೇಂದ್ರ ಮತ್ತು ಆರ್. ಅಶೋಕ್‌ಗೆ ಕಿವಿಮಾತು ಹೇಳಿದ್ದಾರೆ.

# ಅನ್ನಭಾಗ್ಯ ಯೋಜನೆಯಲ್ಲಿ 13 ಲಕ್ಷ ಅನರ್ಹರು: ಕೆ.ಎಚ್. ಮುನಿಯಪ್ಪ



**ಬೆಂಗಳೂರು, ಜೂ.22:** ಅನ್ನಭಾಗ್ಯ ಯೋಜನೆಯಲ್ಲಿ ಸುಮಾರು 13 ಲಕ್ಷ ಅನರ್ಹ ಫಲಾನುಭವಿಗಳಿದ್ದು, ಅವರನ್ನು ಯೋಜನೆಯಿಂದ ತೆಗೆಯಬೇಕಿದೆ ಎಂದು ಆಹಾರ ಸಚಿವ ಕೆ. ಎಚ್ ಮುನಿಯಪ್ಪ ಹೇಳಿದ್ದರೆ.

ಈ ಕುರಿತು ಮಾತನಾಡಿದ ಅವರು, ಅನ್ನಭಾಗ್ಯ ಯೋಜನೆ ಪರಿಷ್ಕರಣೆ ಮಾಡಬೇಕಾಗಿದೆ. ಬಡವರಿಗೆ ಅನ್ನಭಾಗ್ಯ ನೀಡಬೇಕು. ಅನರ್ಹರು ಎಪಿಎಲ್‌ಗೆ ಹೋಗಬೇಕು. ನಾನು ಈ ಹಿಂದೆಯೇ ಪ್ರಯತ್ನ ಮಾಡಿದ್ದೆ. ಆಗ ಗೊಂದಲ ಆಗಿತ್ತು. ಮನವಿ ಮಾಡುತ್ತಿದ್ದೇನೆ ಬಡವರಿಗೆ ಅವಕಾಶ ಮಾಡಿಕೊಡಿ ಎಂದರು.

ಸಚಿವ ಸಂಪುಟ ಉಪಸಮಿತಿ ಸಭೆ ಏಕೆ ಕರೆದಿದ್ದಾರೆ ಗೊತ್ತಿಲ್ಲ. ಗ್ಯಾರಂಟಿ ಬಗ್ಗೆ ಏನೂ ಚರ್ಚೆ ಆಗಲ್ಲ. ಬೇರೆ ವಿಚಾರಕ್ಕೆ ಕರೆದಿದ್ದಾರೆ. ಗ್ಯಾರಂಟಿ ಅಥಾವಾ ಆಹಾರ ಇಲಾಖೆಗೆ ಸಂಬಂಧಿಸಿದಂತೆ ನಾನೇ ಸಭೆ ಕರೆಯುವೆ ಎಂದು ಸಚಿವ ಮುನಿಯಪ್ಪ ತಿಳಿಸಿದರು.

# ಬಿಜೆಪಿ ನಾಯಕರಿಂದ ಸುಳ್ಳು ಸಂದೇಶ ಹರಡುವ ಕೆಲಸ: ಬಿ.ಕೆ. ಹರಿಪ್ರಸಾದ್ ಟೀಕೆ

### ಕಾಂಗ್ರೆಸ್ ಕಾರ್ಯಕ್ರಮದಿಂದ ನೀಟ್ ಪರೀಕ್ಷಾರ್ಥಿಗಳಿಗೆ ತೊಂದರೆಯಾಗಿದ್ದರೆ ವಿಷಾದ



**ಬೆಂಗಳೂರು, ಜೂ.22:** ಬೆಂಗಳೂರು ದಕ್ಷಿಣ ಸಂಸದರು ಮತ್ತೊಮ್ಮೆ ತಪ್ಪು ಸಂದೇಶ ಹರಡುವ ಕೆಲಸ ಮಾಡುತ್ತಿದ್ದಾರೆ. ನಿನ್ನೆ ನಡೆದ ಕಾಂಗ್ರೆಸ್ ಪಕ್ಷದ ಸಂಕಲ್ಪ ಸಮಾವೇಶ ಕಾರ್ಯಕ್ರಮದಲ್ಲಿ ಸಾರಿಗೆ ದಟ್ಟಣೆ ಆಗಿದ್ದು ನಿಜ. ಸಾರ್ವಜನಿಕರಿಗೆ ತೊಂದರೆ ಆಗಬಾರದು ಎಂದು ಭಾನುವಾರ ಕಾರ್ಯಕ್ರಮ ಹಮ್ಮಿಕೊಂಡಿದ್ದೆವು. ಸಣ್ಣಪುಟ್ಟ ತೊಂದರೆಗಳು ಆಗಿವೆ. ಆದರೆ ನಮ್ಮ ಕಾರ್ಯಕ್ರಮದಿಂದಾಗಿ ಟ್ರಾಫಿಕ್ ಸಮಸ್ಯೆ ಉಂಟಾಗಿ ಎರಡು, ಮೂರು ವಿದ್ಯಾರ್ಥಿಗಳು ನೀಟ್ ಪರೀಕ್ಷೆಗೆ ಹಾಜರಾಗದೇ ಉಳಿದಿದ್ದಾರೆ ಎಂಬ ಸುದ್ದಿ ನೋಡಿದೆ. ಈ ಕಾರ್ಯಕ್ರಮದಿಂದ ಇಂತಹ ಪ್ರಮಾದವಾಗಿದ್ದರೆ ವಿಷಾದ ವ್ಯಕ್ತಪಡಿಸುತ್ತೇವೆ ಎಂದು ಕೆಪಿಸಿಸಿ ನೂತನ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಹೇಳಿದರು.

ಕೆಪಿಸಿಸಿ ಕಚೇರಿಯಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಮುಂಜಾಗ್ರತೆ ಕ್ರಮವಾಗಿ ಪೊಲೀಸರು ಹಾಗೂ ಸೇವಾದಳದ ಕಾರ್ಯಕರ್ತರಿಗೆ ಸ್ಪಷ್ಟವಾಗಿ ಕೆಲವು ನಿರ್ದೇಶನ ನೀಡಿದ್ದೆವು. ನೀಟ್ ಪ್ರಾರಂಭವಾಗಿದ್ದು 1:30ರ ಸಮಯದಲ್ಲಿ ನಮ್ಮ ಕಾರ್ಯಕ್ರಮಕ್ಕೆ ಬರಬೇಕಾಗಿದ್ದ ಎಲ್ಲಾ ಬಸ್‌ಗಳು ಬೆಳಗ್ಗೆ 10:30ರ ವೇಳೆಗೆ ಅರಮನೆ ಮೈದಾನ ತಲುಪಿದ್ದವು. ಆದರೂ ಮೂವರು ಮಕ್ಕಳಿಗೆ ತೊಂದರೆ ಆಗಿರುವ ಬಗ್ಗೆ ಮಾಧ್ಯಮಗಳಲ್ಲಿ ಪ್ರಸಾರವಾಗಿವೆ. ಅವರಿಗೆ ಮುಂದಿನ ಪರೀಕ್ಷೆ ಕೈಗೊಳ್ಳಲು ಬೇಕಾಗಿರುವ ಎಲ್ಲಾ ಸಹಾಯ ಮಾಡಲು ಸಿದ್ಧರಿದ್ದೇವೆ ಎಂದು ತಿಳಿಸಿದರು. ನೀಟ್ ಪರೀಕ್ಷೆ ಮುಂದೂಡಿಕೆಯಾಗಿರುವುದು, ಪ್ರಶ್ನೆಪತ್ರಿಕೆ ಸೋರಿಕೆಯಾಗಿರುವುದನ್ನು ನಾವು ನೋಡಿದ್ದೇವೆ. 12 ವಿದ್ಯಾರ್ಥಿಗಳು ಆತ್ಮಹತ್ಯೆ ಮಾಡಿಕೊಂಡಾಗ ದೇಶದ ಪ್ರಧಾನಿ ಮೋದಿ ಅವರಾಗಲಿ, ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರಾಗಲಿ ಈ ಬಗ್ಗೆ ವಿಷಾದ ವ್ಯಕ್ತಪಡಿಸಿದ್ದಾರಾ ಎಂದು ಪ್ರಶ್ನಿಸಿದರು.

ಬಿಜೆಪಿಯವರು ತಮ್ಮ ತಪ್ಪು ಮರೆಮಾಚಲು ಕಾಂಗ್ರೆಸ್ ವಿರುದ್ಧ ಕುಂಟುನೆಪ ಹೇಳುವುದು ಬೇಡ. ಕಾಂಗ್ರೆಸ್ ಪಕ್ಷ ವಿದ್ಯಾರ್ಥಿಗಳ ಭವಿಷ್ಯದ ಬಗ್ಗೆ ಕಾಳಜಿ ಹೊಂದಿದೆ. ಅವರ ಹಕ್ಕುಗಳ ಪರವಾಗಿ ನಿಲ್ಲುತ್ತದೆ. ವಿದ್ಯಾರ್ಥಿಗಳ ಭವಿಷ್ಯದ ಜೊತೆ ಆಟವಾಡಿದವರು ಇಂದು ನೀತಿ ಪಾಠ ಹೇಳುತ್ತಿರುವುದು ಈ ದೇಶದ ದುರಂತ. ಬಿಜೆಪಿ ನೀಟ್ ಹಗರಣದಲ್ಲಿ ದೇಶದ ಜನರಿಗೆ ಕ್ಷಮೆ ಕೇಳಲಿ. ನಂತರ ಕಾಂಗ್ರೆಸ್ ಪಕ್ಷದ ಬಗ್ಗೆ ಮಾತನಾಡುವುದಿಲ್ಲ. ಮೊದಲು ಈ ದೇಶದ ಶಿಕ್ಷಣ ಸಚಿವರು ರಾಜೀನಾಮೆ ನೀಡಬೇಕು ಎಂದು ಒತ್ತಾಯಿಸಿದರು.

ವಿಮಾನ ನಿಲ್ದಾಣದಲ್ಲಿ ಮೋದಿ ಕಾದಿರುವುದನ್ನು ನೋಡಿ ಕಲಿಯಲಿ ಎಂಬ ಎಚ್‌ಡಿಕೆ ಹೇಳಿಕೆ ಬಗ್ಗೆ ಗಮನಸೆಳೆದಾಗ, "ಎಷ್ಟು ನಿಮಿಷ ಕಾದರು, ಯಾವ ಹೆಲಿಕಾಪ್ಟರ್‌ನಲ್ಲಿ ಹೋದರು ಎಂದು ಅವರಿಂದ ನಾವು ಕಲಿಯಬೇಕಾಗಿಲ್ಲ. ಮೋದಿ, ಕುಮಾರಸ್ವಾಮಿ ಉತ್ತರ ಕೊಡಬೇಕಾಗಿರುವುದು ನೀಟ್ ಪ್ರಶ್ನೆಪತ್ರಿಕೆ ಮೂರು ಬಾರಿ ಸೋರಿಕೆಯಾಗಿರುವುದರಿಂದ 20 ವಿದ್ಯಾರ್ಥಿಗಳು ಆತ್ಮಹತ್ಯೆ ಮಾಡಿಕೊಂಡಿರುವುದರ ಬಗ್ಗೆ. ಮೋದಿ ವಿಮಾನ ನಿಲ್ದಾಣದಲ್ಲಿ 45 ನಿಮಿಷ ಯಾವ ಕಾರಣಕ್ಕೆ ಇದ್ದರು ಎಂಬುದು ನನಗೆ ಗೊತ್ತಿದೆ. ಈಗ ಆ ವಿಚಾರ ಮಾತನಾಡುವುದಿಲ್ಲ ಎಂದರು.

## ಸರಣಿ ತಪ್ಪು ಮಾಹಿತಿ ನೀಡುವ ಸಂಸದ



ಕಾಂಗ್ರೆಸ್ ರ್‍ಯಾಲಿಯಿಂದಾಗಿ ಸಂಚಾರ ವ್ಯವಸ್ಥೆ ಅಸ್ತವ್ಯಸ್ತಗೊಂಡು ನೀಟ್ ವಿದ್ಯಾರ್ಥಿಗಳಿಗೆ ಅಡಚಣೆಯಾಗಿದೆ ಎಂಬ ಬಿಜೆಪಿ ಸಂಸದ ತೇಜಸ್ವಿ ಸೂರ್ಯ ಆರೋಪಕ್ಕೆ ಸಚಿವ ಪ್ರಿಯಾಂಕ್ ಖರ್ಗೆ ಪ್ರತಿಕ್ರಿಯಿಸಿದ್ದಾರೆ. ಸರಣಿ ತಪ್ಪುಮಾಹಿತಿಯ ಸಂಸದ ಎಂದು ಟೀಕಿಸಿದ್ದು, ತೇಜಸ್ವಿಯವರ ಆರೋಪ "ಅರ್ಧಸತ್ಯ ಮತ್ತು ವ್ಯವಸ್ಥಿತ ಆಕ್ರೋಶ" ಎಂದು ವ್ಯಂಗ್ಯವಾಡಿದ್ದಾರೆ. ಆರ್‌ಸಿ ಕಾಲೇಜಿನಲ್ಲಿ ನೀಟ್ ಪರೀಕ್ಷೆ ಬರೆಯಬೇಕಿದ್ದ 720 ಮಂದಿಯ ಪೈಕಿ 142 ಮಂದಿ ಗೈರುಹಾಜರಾಗಿದ್ದರು. ಮೂವರು ವಿದ್ಯಾರ್ಥಿಗಳು ಪರೀಕ್ಷೆ ತಪ್ಪಿಸಿಕೊಂಡರು. ಮಾಗಡಿಯಿಂದ ಬರುತ್ತಿದ್ದ ಒಬ್ಬ ವಿದ್ಯಾರ್ಥಿ ಬಸ್ ಸೌಕರ್ಯವಿಲ್ಲದೇ ಕೇಂದ್ರಕ್ಕೆ ತಡವಾಗಿ ಆಗಮಿಸಿ ಪರೀಕ್ಷೆ ಬರೆಯಲು ಸಾಧ್ಯವಾಗಲಿಲ್ಲ. ಮತ್ತೊಬ್ಬ ಅಭ್ಯರ್ಥಿ ಮೇ 3ರ ಪರೀಕ್ಷೆಯ ಹಾಲ್‌ಟಿಕೆಟ್‌ನೊಂದಿಗೆ ಬಂದಿದ್ದರಿಂದ ಪರೀಕ್ಷೆ ಬರೆಯಲು ಅವಕಾಶ ನೀಡಿಲ್ಲ. ಆರ್‌ಟಿ ನಗರ ಕಡೆಯಿಂದ ಬರಬೇಕಿದ್ದ ಒಬ್ಬ ಅಭ್ಯರ್ಥಿ ಪರೀಕ್ಷೆ ತಪ್ಪಿಸಿಕೊಂಡಿದ್ದು, ಕಾರಣ ತಿಳಿದುಬಂದಿಲ್ಲ ಎಂದು ಸ್ಪಷ್ಟನೆ ನೀಡಿದ್ದಾರೆ. ವಿದ್ಯಾರ್ಥಿಗಳ ಬಗ್ಗೆ ಅತಿಕಾಳಜಿ ವ್ಯಕ್ತಪಡಿಸುತ್ತಿರುವ ಬಿಜೆಪಿ ಸಂಸದ, ತಮ್ಮದೇ ಸರ್ಕಾರದ ಅಸಮರ್ಥತೆಯಿಂದ ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಹಿನ್ನೆಲೆಯಲ್ಲಿ 22 ಲಕ್ಷ ವಿದ್ಯಾರ್ಥಿಗಳಿಗೆ ತೊಂದರೆಯಾದಾಗ, 10 ವಿದ್ಯಾರ್ಥಿಗಳು ಆತ್ಮಹತ್ಯೆ ಮಾಡಿಕೊಂಡಾಗ ಮೌನವಾಗಿದ್ದರು ಎಂದು ತಿರುಗೇಟು ನೀಡಿದ್ದಾರೆ.

## ಹಿಂದಿನ ಶೇ.50 ಸುಂಕದಿಂದಾಗಿ ಅಮೆರಿಕ ಜೊತೆಗಿನ ವ್ಯಾಪಾರ ಒಪ್ಪಂದ ಹೆಚ್ಚು ಸಮಯ ತೆಗೆದುಕೊಳ್ಳುತ್ತಿದೆ: ಗೋಯಲ್



**ನವದೆಹಲಿ, ಜೂ.22:** ದೇಶದ ಸರಕುಗಳ ಮೇಲೆ ವಿಧಿಸಲಾದ ಶೇ. 50 ರಷ್ಟು ಸುಂಕದಿಂದಾಗಿ ಅಮೆರಿಕ (ಯುಎಸ್) ಜೊತೆಗಿನ ವ್ಯಾಪಾರ ಒಪ್ಪಂದಕ್ಕೆ ಸಹಿ ಹಾಕಲು ಸ್ವಲ್ಪ ಹೆಚ್ಚು ಸಮಯ ತೆಗೆದುಕೊಳ್ಳುತ್ತಿದೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಸೋಮವಾರ ಹೇಳಿದ್ದಾರೆ. ಮಾಧ್ಯಮ ಸಮ್ಮೇಳನದಲ್ಲಿ ಮಾತನಾಡಿದ ಗೋಯಲ್, "ಭಾರತ ಅಮೆರಿಕ ಜೊತೆಗಿನ ವ್ಯಾಪಾರ ಒಪ್ಪಂದದ ಮೂಲಕ ಆದ್ಯತೆಯ ಪ್ರವೇಶವನ್ನು ಪಡೆಯುವ ಗುರಿಯನ್ನು ಹೊಂದಿದೆ" ಎಂದು ಹೇಳಿದರು. ಅಮೆರಿಕದ ವ್ಯಾಪಾರ ಪ್ರತಿನಿಧಿ ಜೇಮಿಸನ್ ಗ್ರೀರ್ ಮತ್ತು ಪಿಯೂಷ್ ಗೋಯಲ್ ದ್ವಿಪಕ್ಷೀಯ ವ್ಯಾಪಾರ ಒಪ್ಪಂದದ ಮೊದಲ ಹಂತದ ಕುರಿತು ಎರಡು ದಿನಗಳ ಮಾತುಕತೆ ನಡೆಸಲಿದ್ದಾರೆ. ಮಧ್ಯಂತರ ವ್ಯಾಪಾರ ಒಪ್ಪಂದದ ವಿವರಗಳನ್ನು ಅಂತಿಮಗೊಳಿಸಲು ಮತ್ತು ವಿಶಾಲವಾದ ದ್ವಿಪಕ್ಷೀಯ ವ್ಯಾಪಾರ ಒಪ್ಪಂದ (ಬಿಟಿಎ) ಅಡಿಯಲ್ಲಿ ಮಾತುಕತೆಗಳನ್ನು ಮುಂದುವರಿಸಲು ಜೂನ್ 1 ರಿಂದ 4 ರವರೆಗೆ ಭಾರತಕ್ಕೆ ಯುಎಸ್ ನಿಯೋಗ ಭೇಟಿ ನೀಡಿತು. ಮಧ್ಯಂತರ ಒಪ್ಪಂದದ ವಿವರಗಳನ್ನು ಅಂತಿಮಗೊಳಿಸುವ ಮತ್ತು ಮಾರುಕಟ್ಟೆ ಪ್ರವೇಶ, ಸುಂಕ ರಹಿತ ಕ್ರಮಗಳು, ಕಸ್ಟಮ್ಸ್ ಮತ್ತು ವ್ಯಾಪಾರ ಸೌಲಭ್ಯ, ಹೂಡಿಕೆ ಪ್ರಚಾರ ಮತ್ತು ಆರ್ಥಿಕ ಭದ್ರತಾ ಜೋಡಣೆಯಂತಹ ಬಹು ಕ್ಷೇತ್ರಗಳಲ್ಲಿ ವಿಶಾಲವಾದ ಬಿಟಿಎ ಅಡಿಯಲ್ಲಿ ಮಾತುಕತೆಗಳನ್ನು ಮುನ್ನಡೆಸುವ ಗುರಿಯನ್ನು ಈ ಭೇಟಿ ಹೊಂದಿತ್ತು. ಗಮನಾರ್ಹವಾಗಿ, ಫೆಬ್ರವರಿ 7 ರಂದು, ಭಾರತ ಮತ್ತು ಅಮೆರಿಕ ಪರಸ್ಪರ ಮತ್ತು ಪರಸ್ಪರ ಪ್ರಯೋಜನಕಾರಿ ವ್ಯಾಪಾರದ ಕುರಿತು ಮಧ್ಯಂತರ ಒಪ್ಪಂದಕ್ಕಾಗಿ ಚೌಕಟ್ಟಿನ ಕುರಿತು ಜಂಟಿ ಹೇಳಿಕೆಯನ್ನು ನೀಡಿತು. ನಂತರ, ಏಪ್ರಿಲ್ 20 ರಿಂದ 23 ರವರೆಗೆ, ಭಾರತದ ಕಡೆಯವರು ತಮ್ಮ ಅಮೆರಿಕದ ಸಹವರ್ತಿಗಳೊಂದಿಗೆ ವೈಯಕ್ತಿಕ ಸುತ್ತಿನ ಸಭೆಗಳಿಗಾಗಿ ವಾಷಿಂಗ್ಟನ್ ಡಿ.ಸಿ.ಗೆ ಭೇಟಿ ನೀಡಿದರು. ವಿಶಾಲವಾದ ಭಾರತ–ಅಮೆರಿಕ ದ್ವಿಪಕ್ಷೀಯ ವ್ಯಾಪಾರ ಒಪ್ಪಂದ ಮಾತುಕತೆಗಳಿಗೆ ಎರಡೂ ಕಡೆಯವರ ಬದ್ಧತೆಯನ್ನು ಚೌಕಟ್ಟು ಪುನರುಚ್ಚರಿಸಿತು. ಅಮೆರಿಕದ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರುಬಿಯೊ ಇತ್ತೀಚೆಗೆ ಭಾರತಕ್ಕೆ ಭೇಟಿ ನೀಡಿದ್ದರು. ತಮ್ಮ ಭೇಟಿಯ ಸಮಯದಲ್ಲಿ, ಮುಂದಿನ ಐದು ವರ್ಷಗಳಲ್ಲಿ ಇಂಧನ, ತಂತ್ರಜ್ಞಾನ ಮತ್ತು ಕೃಷಿಯ ಮೇಲೆ ಕೇಂದ್ರೀಕರಿಸಿ, $500 ಶತಕೋಟಿ ಮೌಲ್ಯದ ಅಮೆರಿಕದ ಸರಕುಗಳನ್ನು ಖರೀದಿಸಲು ಭಾರತ ಬದ್ಧವಾಗಿದೆ ಎಂದು ಅಮೆರಿಕ ಕಾರ್ಯದರ್ಶಿ ಹೇಳಿದರು.

## ಜೆಡಿಯು ರಾಷ್ಟ್ರೀಯ ಅಧ್ಯಕ್ಷರಾಗಿ ನಿತೀಶ್ ಮರು ಆಯ್ಕೆ



**ನವದೆಹಲಿ, ಜೂ. 22:** ಸಂಯುಕ್ತ ಜನತಾ ದಳ ಪಕ್ಷದ ರಾಷ್ಟ್ರೀಯ ಮಂಡಳಿ ಸಭೆಯಲ್ಲಿ ನಿತೀಶ್ ಕುಮಾರ್ ಅವರನ್ನು ರಾಷ್ಟ್ರೀಯ ಅಧ್ಯಕ್ಷರಾಗಿ ಮರು ಆಯ್ಕೆ ಮಾಡಿರುವುದನ್ನು ಭಾನುವಾರ ಅಧಿಕೃತವಾಗಿ ಅನುಮೋದಿಸಲಾಗಿದೆ. ಈ ವರ್ಷದ ಮಾರ್ಚ್‌ನಲ್ಲಿ ನಡೆದ ಸಾಂಸ್ಥಿಕ ಚುನಾವಣೆಯಲ್ಲಿ ಅವರು ಅವಿರೋಧವಾಗಿ ಆಯ್ಕೆಯಾಗಿದ್ದರು.

ರಾಜ್ಯ ಕೌನ್ಸಿಲ್ ಸಭೆಯಲ್ಲಿ ಉಮೇಶ್ ಸಿಂಗ್ ಕುಶ್ವಾಹ ಅವರು ರಾಜ್ಯ ಅಧ್ಯಕ್ಷರಾಗಿ ಮರು ಆಯ್ಕೆಯಾಗಿರುವುದನ್ನು ಸರ್ವಾನುಮತದಿಂದ ಅಂಗೀಕರಿಸಲಾಯಿತು. ಇದೇ ಸಂದರ್ಭದಲ್ಲಿ, ನಿತೀಶ್ ಕುಮಾರ್ ಅವರ ಪುತ್ರ ಮತ್ತು ಸಚಿವ ನಿಶಾಂತ್ ಕುಮಾರ್ ಅವರಿಗೆ ಪಕ್ಷದಲ್ಲಿ ದೊಡ್ಡ ಸಾಂಸ್ಥಿಕ ಪಾತ್ರವನ್ನು ನೀಡಬೇಕೆಂಬ ರಾಜಕೀಯ ನಿರ್ಣಯವನ್ನೂ ಅಂಗೀಕರಿಸಲಾಗಿದೆ.

ಜೆಡಿಯು ಕಾರ್ಯಾಧ್ಯಕ್ಷ ಮತ್ತು ರಾಜ್ಯಸಭಾ ಸದಸ್ಯ ಸಂಜಯ್ ಕುಮಾರ್ ಝಾ ಮಾತನಾಡಿ, ನಿಶಾಂತ್ ಪಕ್ಷದ ಭವಿಷ್ಯವನ್ನು ಪ್ರತಿನಿಧಿಸುತ್ತಾರೆ, ಇದು ಅತ್ಯಂತ ಮುಖ್ಯವಾದ ವಿಷಯ. ಸದ್ಯ ಅವರು ಸರ್ಕಾರದಲ್ಲಿ ಕೆಲಸ ಮಾಡುತ್ತಿದ್ದಾರೆ, ಮುಂದಿನ ದಿನಗಳಲ್ಲಿ ಪಕ್ಷದ ವ್ಯವಹಾರಗಳಲ್ಲೂ ತೊಡಗಿಸಿಕೊಳ್ಳಲಿದ್ದಾರೆ ಎಂದು ತಿಳಿಸಿದರು. ನಿಶಾಂತ್ ಅವರ ಸಮರ್ಥ ನಾಯಕತ್ವದಲ್ಲಿ ಯುವಕರು ಪಕ್ಷಕ್ಕೆ ಸೇರ್ಪಡೆಯಾಗಲಿದ್ದು, ಇದರಿಂದ ಪಕ್ಷವು ಇನ್ನಷ್ಟು ಬಲಗೊಳ್ಳಲಿದೆ ಎಂದು ರಾಜ್ಯ ಸಚಿವ ಮದನ್ ಸಾಹ್ನಿ ಅಭಿಪ್ರಾಯಪಟ್ಟಿದ್ದಾರೆ. ನಿಶಾಂತ್ ಅವರೇ ನಮ್ಮ ನಾಯಕ ಮತ್ತು ಮುಂದೆಯೂ ಅವರೇ ಮುಂದುವರಿಯಲಿದ್ದಾರೆ ಎಂದು ಅಶೋಕ್ ಚೌಧರಿ ತಿಳಿಸಿದ್ದಾರೆ.

ಮುಂದಿನ ವರ್ಷ ನಡೆಯಲಿರುವ ಉತ್ತರ ಪ್ರದೇಶ ವಿಧಾನಸಭೆ ಚುನಾವಣೆಯಲ್ಲಿ ಜೆಡಿಯು ಸ್ಪರ್ಧಿಸುವ ಸಾಧ್ಯತೆಗಳ ಬಗ್ಗೆ ಪ್ರತಿಕ್ರಿಯಿಸಿದ ಸಂಜಯ್‌ಕುಮಾರ್ ಝಾ, ನಾವು ಈ ವಿಷಯದ ಬಗ್ಗೆ ಚರ್ಚಿಸುತ್ತಿದ್ದೇವೆ. ಉತ್ತರ ಪ್ರದೇಶದಲ್ಲಿ ಪಕ್ಷಕ್ಕೆ ಮೊದಲಿನಿಂದಲೂ ನೆಲೆ ಇದೆ. ಪಕ್ಷದ ಉಪಸ್ಥಿತಿಯನ್ನು ಇನ್ನಷ್ಟು ಬಲಪಡಿಸಲು ಮತ್ತು ಚುನಾವಣೆಯಲ್ಲಿ ಸ್ಪರ್ಧಿಸಲು ಪಕ್ಷದೊಳಗೆ ಬಲವಾದ ಇಚ್ಛಾಶಕ್ತಿ ಇದೆ ಎಂದು ಹೇಳಿದ್ದಾರೆ. ಈ ಬೆಳವಣಿಗೆಗಳ ಕುರಿತು ಮಾತನಾಡಿದ ನಿಶಾಂತ್ ಕುಮಾರ್, ನಮ್ಮ ಜವಾಬ್ದಾರಿ ಹೆಚ್ಚಾಗಿದೆ. ಇನ್ನು ಮುಂದೆ ಪಕ್ಷದ ಕಾರ್ಯಕರ್ತರೊಂದಿಗೆ ಸೇರಿ ಬಿಹಾರದಾದ್ಯಂತ ಪಕ್ಷವನ್ನು ಬಲಪಡಿಸುತ್ತೇವೆ ಎಂದು ತಿಳಿಸಿದ್ದಾರೆ. ಸಭೆಯಲ್ಲಿ ಪಾಲ್ಗೊಂಡಿದ್ದ ಪಕ್ಷದ ನಾಯಕರು, ಬಿಹಾರದಲ್ಲಿ ಎನ್‌ಡಿಎ ಮೈತ್ರಿಕೂಟವನ್ನು ತಳಮಟ್ಟದಿಂದ ಬಲಪಡಿಸಲು ನಿಶಾಂತ್ ಕುಮಾರ್ ಅವರಿಗೆ ಪಕ್ಷದ ಉನ್ನತ ಹುದ್ದೆಯನ್ನು ನೀಡಬೇಕೆಂದು ನಿತೀಶ್ ಕುಮಾರ್ ಅವರಲ್ಲಿ ಸರ್ವಾನುಮತದ ಬೇಡಿಕೆ ಸಲ್ಲಿಸಿದರು.

ಬಿಹಾರದ ಮಾಜಿ ಮುಖ್ಯಮಂತ್ರಿ ನಿತೀಶ್ ಕುಮಾರ್ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡುವುದಕ್ಕೂ ಮುನ್ನ ಹಲವಾರು ವಿಚಿತ್ರ ವರ್ತನೆಯಿಂದಾಗಿ ಟ್ರೋಲ್‌ಗೆ ಒಳಗಾಗಿದ್ದವರು. ಈಗ ಅವರ ಪುತ್ರ, ಬಿಹಾರದ ಆರೋಗ್ಯ ಸಚಿವ ನಿಶಾಂತ್ ಕೂಡಾ ಟ್ರೋಲಿಗರ ಕೈಗೆ ಸಿಲುಕುತ್ತಿದ್ದಾರೆ. ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಸಂದರ್ಭದಲ್ಲಿ ನಿಶಾಂತ್ ಸಾರ್ವಜನಿಕವಾಗಿ ವಿಚಿತ್ರವಾಗಿ ಯೋಗ ಮಾಡಿ ಸಾಮಾಜಿಕ ಜಾಲತಾಣಗಳಲ್ಲಿ ವ್ಯಾಪಕವಾಗಿ ಟ್ರೋಲ್ ಆಗಿದ್ದರು.

## ಶ್ರೀರಾಮಮಂದಿರದ ದೇಣಿಗೆ ದುರ್ಬಳಕೆ ಪ್ರಕರಣ ಸಿಎಂ ಯೋಗಿಗೆ ಪ್ರಾಥಮಿಕ ವರದಿ ಸಲ್ಲಿಸಿದ ಎಸ್‌ಐಟಿ



**ಅಯೋಧ್ಯೆ, ಜೂ.22:** ಶ್ರೀರಾಮ ಮಂದಿರದ ದೇಣಿಗೆ ದುರ್ಬಳಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ತನಿಖೆ ನಡೆಸುತ್ತಿರುವ ಎಸ್‌ಐಟಿ ತನ್ನ ಪ್ರಾಥಮಿಕ ವರದಿಯನ್ನು ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್‌ಗೆ ಸಲ್ಲಿಸಿದೆ. ಪ್ರಕರಣದಲ್ಲಿ ರಾಮ ಮಂದಿರ ಟ್ರಸ್ಟ್‌ನ ಹಲವಾರು ಹಿರಿಯ ಅಧಿಕಾರಿಗಳ ಪಾತ್ರವೂ ಅನುಮಾನಾಸ್ಪದವಾಗಿದೆ ಎಂದು ವರದಿಯಲ್ಲಿ ಉಲ್ಲೇಖಿಸಿದೆ ಎನ್ನಲಾಗಿದೆ.

ಎಸ್‌ಐಟಿ ತನಿಖೆಯು ಎಣಿಕೆ ಸಿಬ್ಬಂದಿ ಮಾತ್ರವಲ್ಲದೆ ಟ್ರಸ್ಟ್‌ನ ಸುಮಾರು ಮೂವತ್ತು ವ್ಯಕ್ತಿಗಳು ಭಾಗಿಯಾಗಿರುವುದನ್ನು ಬಹಿರಂಗಪಡಿಸಿದೆ. ಆರಂಭಿಕ ವಿಚಾರಣೆಯ ಸಮಯದಲ್ಲಿ ತೃಪ್ತಿದಾಯಕ ಉತ್ತರಗಳ ಕೊರತೆ ಮತ್ತು ಅನೇಕ ಪ್ರಶ್ನೆಗಳಿಗೆ ತಪ್ಪಿಸಿಕೊಳ್ಳುವ ಪ್ರತಿಕ್ರಿಯೆಗಳ ಕೊರತೆಯಿಂದಾಗಿ, ಟಿನ್ನು ಯಾದವ್, ಲವ್ಕುಶ್ ಮತ್ತು ಅನುಕೂಲ್‌ರಂತಹ ವ್ಯಕ್ತಿಗಳನ್ನು ಹೆಚ್ಚಿನ ಅನುಮಾನ ವ್ಯಕ್ತವಾಗಿದೆ. ಈ ವ್ಯಕ್ತಿಗಳಿಂದ ವಶಪಡಿಸಿಕೊಂಡ ನಗದು ಹಣದ ಬಗ್ಗೆ ಬಲವಾದ ಪುರಾವೆಗಳು ಕಂಡುಬಂದಿವೆ. ಎಸ್‌ಐಟಿ ಈ ಐವರನ್ನು 20 ಗಂಟೆಗಳಿಗೂ ಹೆಚ್ಚು ಕಾಲ ವಿಚಾರಣೆ ನಡೆಸಿತು.

ಪ್ರಕರಣದಲ್ಲಿ ಎಫ್‌ಐಆರ್ ದಾಖಲಿಸಲು ಸಿದ್ಧತೆಗಳು ನಡೆಯುತ್ತಿವೆ. ತನಿಖೆಯ ಸಂಶೋಧನೆಗಳ ಆಧಾರದ ಮೇಲೆ, ಚಂಪತ್‌ರಾಯ್ ಅವರ ಆಪ್ತರು ಎಂದು ಪರಿಗಣಿಸಲಾದ ಟಿನ್ನು ಯಾದವ್, ಲುವ್ಕುಶ್ ಮತ್ತು ಅನುಕೂಲ್ ಸೇರಿದಂತೆ ಐದು ವ್ಯಕ್ತಿಗಳ ವಿರುದ್ಧ ಎಫ್‌ಐಆರ್ ದಾಖಲಿಸುವ ಸಾಧ್ಯತೆಯಿದೆ ಎಂದು ಮೂಲಗಳು ತಿಳಿಸಿವೆ. ಆದಾಗ್ಯೂ, ಎಸ್‌ಐಟಿ ವರದಿ ಮತ್ತು ಸರ್ಕಾರಿ ಮಟ್ಟದ ಪರಿಶೀಲನೆಯ ನಂತರವೇ ಅಂತಿಮ ನಿರ್ಧಾರ ತೆಗೆದುಕೊಳ್ಳಲಾಗುತ್ತದೆ.

ಕೇಂದ್ರ ಸರ್ಕಾರವು ಟ್ರಸ್ಟ್ ಅನ್ನು ರಚಿಸಿರುವುದರಿಂದ ಈ ವಿಷಯದಲ್ಲಿ ಪ್ರಧಾನ ಮಂತ್ರಿ ಕಚೇರಿಯಿಂದ ನಿರ್ದೇಶನಗಳನ್ನು ಸಹ ನಿರೀಕ್ಷಿಸಲಾಗಿದೆ. ಪಿಎಂಒನಿಂದ ಬಂದ ನಿರ್ದೇಶನಗಳ ಆಧಾರದ ಮೇಲೆ ಟ್ರಸ್ಟ್‌ನ ಮರುಸಂಘಟನೆಯ ಕುರಿತು ಮುಂದಿನ ಕ್ರಮ ಮತ್ತು ನಿರ್ಧಾರಗಳನ್ನು ತೆಗೆದುಕೊಳ್ಳಲಾಗುತ್ತದೆ ಎಂದು ಮೂಲಗಳು ಹೇಳಿವೆ.

ಪ್ರಧಾನ ಮಂತ್ರಿ ಕಚೇರಿ ಇದನ್ನು ಸೂಕ್ಷ್ಮವಾಗಿ ಗಮನಿಸುತ್ತಿದೆ. ಪಿಎಂಒನ ಹಲವು ಅಧಿಕಾರಿಗಳು ತನಿಖೆ ನಡೆಸಲು ದೇವಾಲಯಕ್ಕೆ ಭೇಟಿ ನೀಡಿದ್ದಾರೆ. ಮೂಲಗಳ ಪ್ರಕಾರ, ಈ ಅಧಿಕಾರಿಗಳು ಗೌಪ್ಯ ತನಿಖಾ ವರದಿಯನ್ನು ಸಿದ್ಧಪಡಿಸಿದ್ದಾರೆ, ಅದನ್ನು ಪ್ರಧಾನ ಮಂತ್ರಿ ಕಚೇರಿಗೆ ಕಳುಹಿಸಲಾಗಿದೆ. ಇದು ಅಕ್ರಮಗಳು, ಟ್ರಸ್ಟ್ ಅಧಿಕಾರಿಗಳ ನಿರ್ಲಕ್ಷ್ಯ ಮತ್ತು ಕೆಲವರ ಅನುಮಾನಾಸ್ಪದ ಪಾತ್ರವನ್ನು ಸಹ ಆರೋಪಿಸಿದೆ. ಅದಕ್ಕಾಗಿಯೇ ಈ ಪ್ರಕರಣದಲ್ಲಿ ಪ್ರಮುಖ ಕ್ರಮ ಸಾಧ್ಯ.

ರಾಮಮಂದಿರ ಕಳ್ಳತನ ಪ್ರಕರಣದಲ್ಲಿ ಎಣಿಕೆಯಲ್ಲಿ ತೊಡಗಿದ್ದ ಸುಮಾರು 40 ಉದ್ಯೋಗಿಗಳನ್ನು ಅಂತಿಮವಾಗಿ ತೆಗೆದುಹಾಕಲಾಗಿದೆ. ಈಗ ಬ್ಯಾಂಕ್‌ನಿಂದ ಹೊಸ ಎಣಿಕೆ ಸಿಬ್ಬಂದಿಯನ್ನು ನೇಮಿಸಲಾಗಿದೆ. ಕಣ್ಗಾವಲು ಕೂಡ ಹೆಚ್ಚಿಸಲಾಗಿದೆ. ಅಯೋಧ್ಯೆಯನ್ನು ಬಿಟ್ಟು ಹೋಗದಂತೆ ದೇವಾಲಯದ ಟ್ರಸ್ಟ್ ಮತ್ತು ದೇವಾಲಯದ ಅಧಿಕಾರಿಗಳಿಗೆ ಎಸ್‌ಐಟಿ ಸೂಚನೆ ನೀಡಿದೆ.

## ಶಿಂಧೆ ಅಭ್ಯರ್ಥಿಗೆ ಸೋಲು: ಬಿಜೆಪಿ ಬಂಡಾಯ ಅಭ್ಯರ್ಥಿಗೆ ಜಯ

**ಮುಂಬೈ, ಜೂ. 22:** ಮಹಾರಾಷ್ಟ್ರ ವಿಧಾನ ಪರಿಷತ್ನ 17 ಸ್ಥಾನಗಳಿಗೆ ಚುನಾವಣೆ ನಡೆದಿದೆ. 16 ಸ್ಥಾನಗಳನ್ನು ಎನ್‌ಡಿಎ ಮೈತ್ರಿಕೂಟ ಗೆದ್ದಿದೆ. ಆದಾಗ್ಯೂ, ನಾಸಿಕ್ ಜಿಲ್ಲಾ ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಸ್ಪರ್ಧಿಸಿದ್ದ ಉಪ ಮುಖ್ಯಮಂತ್ರಿ ಏಕನಾಥ್ ಶಿಂಧೆ ಅವರ ಶಿವಸೇನೆಯ ಅಧಿಕೃತ ಅಭ್ಯರ್ಥಿ ನರೇಂದ್ರ ದರಡೆ ಅವರನ್ನು ಬಿಜೆಪಿಯ ಬಂಡಾಯ ಅಭ್ಯರ್ಥಿ ಗೋಕುಲ್ ಗೀತೆ ಸೋಲಿಸಿದ್ದಾರೆ. ಒಂದು ಉಪಚುನಾವಣೆ ಸೇರಿದಂತೆ ಒಟ್ಟು 17 ಸ್ಥಾನಗಳಿಗೆ ಚುನಾವಣೆ ನಡೆದಿತ್ತು. ಈ ಪೈಕಿ, ಬಿಜೆಪಿ, ಶಿವಸೇನೆ (ಶಿಂಧೆ) ಹಾಗೂ ಎನ್ಸಿಪಿ (ಸುನೇತ್ರಾ ಪವಾರ್) ಒಳಗೊಂಡ ಮಹಾಯುತಿ ಮೈತ್ರಿಕೂಟದ ಅಭ್ಯರ್ಥಿಗಳು 6 ಸ್ಥಾನಗಳಲ್ಲಿ ಅವಿರೋಧವಾಗಿ ಆಯ್ಕೆಯಾಗಿದ್ದರು. ಆದ್ದರಿಂದ, ಉಳಿದ 11 ಸ್ಥಾನಗಳಿಗೆ ಜೂನ್ 18ರಂದು ಮತದಾನ ನಡೆದಿತ್ತು. ಸ್ಥಳೀಯ ಸಂಸ್ಥೆಗಳ ಜನಪ್ರತಿಧಿಗಳು ಮತದಾನ ಮಾಡಿದ್ದರು. ಸೋಮವಾರ (ಜೂನ್ 22) ಮತ ಎಣಿಕೆ ನಡೆದಿದೆ. ಒಟ್ಟು ಸ್ಥಾನಗಳಲ್ಲಿ ಬರೋಬ್ಬರಿ 16 ಸ್ಥಾನಗಳನ್ನು ಮಹಾಯುತಿ ಗೆದ್ದುಕೊಂಡಿದೆ. ಆದಾಗ್ಯೂ, ಮೈತ್ರಿಯೊಳಗಿನ ಬಂಡಾಯದಿಂದಾಗಿ ಶಿವಸೇನಾ (ಶಿಂಧೆ) ಒಂದು ಸ್ಥಾನವನ್ನು ಕಳೆದುಕೊಂಡಿದೆ. ಚುನಾವಣಾ ಅಧಿಕಾರಿಗಳು ನೀಡಿರುವ ಮಾಹಿತಿಯ ಪ್ರಕಾರ, ಬಂಡಾಯ ಅಭ್ಯರ್ಥಿ ಗೋಕುಲ್ ಗೀತೆ ಅವರು 357 ಮತಗಳನ್ನು ಪಡೆದರೆ, ಶಿವಸೇನೆಯ ಅಧಿಕೃತ ಅಭ್ಯರ್ಥಿ ನರೇಂದ್ರ ದರಡೆ 248 ಮತಗಳನ್ನು ಮಾತ್ರ ಗಳಿಸಲು ಶಕ್ತರಾಗಿದ್ದಾರೆ. ಗೋಕುಲ್ ಗೀತೆ ಅವರು 109 ಮತಗಳ ಅಂತರದಿಂದ ವಿಜಯಶಾಲಿಯಾಗಿಯಾಗಿದ್ದಾರೆ.

ಗೋಕುಲ್ ಗೀತೆ ಅವರು ದರಡೆ ವಿರುದ್ಧ ಬಂಡಾಯವೆದ್ದು ಪಕ್ಷೇತರರಾಗಿ ಕಣಕ್ಕಿಳಿದ ದಿನದಿಂದಲೇ ನಾಸಿಕ್ ಕ್ಷೇತ್ರದಲ್ಲಿ ರಾಜಕೀಯ ಮೇಲಾಟ ಸೃಷ್ಟಿಯಾಗಿತ್ತು. ಪ್ರಚಾರದ ವೇಳೆ ದರಡೆ ಅವರು ತಮ್ಮ ವಿರುದ್ಧ ಅವಾಚ್ಯ ಶಬ್ದಗಳನ್ನು ಬಳಸಿದ್ದಾರೆ ಎಂದು ಗೋಕುಲ್ ಗೀತೆ ಆರೋಪಿಸಿದ್ದರು. ಮೈತ್ರಿಕೂಟದ ಒಳಗಿನ ಈ ಬಿಕ್ಕಟ್ಟನ್ನು ಬಗೆಹರಿಸಲು ಮುಖ್ಯಮಂತ್ರಿ ದೇವೇಂದ್ರ ಫಡ್ನವಿಸ್, ಉಪ ಮುಖ್ಯಮಂತ್ರಿ ಏಕನಾಥ್ ಶಿಂದೆ, ಬಿಜೆಪಿ ಸಚಿವ ಗಿರೀಶ್ ಮಹಾಜನ್ ಹಾಗೂ ಶಿವಸೇನೆ ಸಚಿವ ಉದಯ್ ಸಾಮಂತ್ ಸೇರಿದಂತೆ ಹಿರಿಯ ನಾಯಕರು ಸರಣಿ ಸಭೆ ನಡೆಸಿದ್ದರು. ನಾಮಪತ್ರ ಹಿಂಪಡೆಯುವ ಗಡುವು ಮುಗಿದಿದ್ದರಿಂದ, ಗೋಕುಲ್ ಗೀತೆ ತಮ್ಮ ಪ್ರಚಾರ ನಡೆಸದಂತೆ ತಡೆಯಲಾಗಿತ್ತು. ಆದಾಗ್ಯೂ, ಚುನಾವಣೆಯಲ್ಲಿ ಗೋಕುಲ್ ಗೀತೆ ಗೆಲುವು ಸಾಧಿಸಿದ್ದಾರೆ. ಗೆಲುವಿನ ಬಳಿಕ, ಮಾಧ್ಯಮಗಳೊಂದಿಗೆ ಮಾತನಾಡಿದ ಗೋಕುಲ್ ಗೀತೆ, ನಾಯಕರ ಮಾತಿಗೆ ಗೌರವ ಕೊಟ್ಟು ನಾನು ಪ್ರಚಾರ ನಿಲ್ಲಿಸಿದ್ದೆ ನಿಜ. ಆದರೆ, ನನ್ನ ಬೆಂಬಲಿಗರು ನನಗಾಗಿ ತೆರೆಮರೆಯಲ್ಲಿ ಮತಯಾಚನೆ ಮುಂದುವರಿಸಿದ್ದರು ಎಂದು ಸ್ಪಷ್ಟಪಡಿಸಿದ್ದಾರೆ.

## ರೈಲ್ವೆ ಹೊಸ ನಿಯಮ: ಈ ತಪ್ಪು ಮಾಡಿದ್ರೆ 2,000 ರೂ. ದಂಡ



**ನವದೆಹಲಿ, ಜೂ. 22:** ಭಾರತೀಯ ರೈಲ್ವೆಯು ತನ್ನ ಪ್ರಯಾಣ ನಿಯಮಗಳನ್ನು ಕಠಣಿಗೊಳಿಸಿದೆ. ಪ್ರಯಾಣಿಕರ ಸುರಕ್ಷತೆ ಮತ್ತು ಆರಾಮದಾಯಕ ಪ್ರಯಾಣದ ಖಾತ್ರಿಗಾಗಿ ನಿಯಮಗಳಲ್ಲಿ ಮಾರ್ಪಾಡು ಮಾಡಿರುವುದಾಗಿ ಹೇಳಿಕೊಂಡಿದೆ. ಕೇಂದ್ರ ಸರ್ಕಾರವು ಜಾರಿಗೆ ತಂದಿರುವ ಜನ್ ವಿಶ್ವಾಸ್ (ನಿಬಂಧನೆಗಳ ತಿದ್ದುಪಡಿ) ಕಾಯ್ದೆ–2026?ರ ಅಡಿಯಲ್ಲಿ ರೈಲು ಮತ್ತು ರೈಲ್ವೆ ಆವರಣದಲ್ಲಿ ಧೂಮಪಾನ ಮಾಡುವುದು, ಅನಧಿಕೃತವಾಗಿ ವ್ಯಾಪಾರ ನಡೆಸುವುದು ಹಾಗೂ ಭಿಕ್ಷಾಟನೆ ಮಾಡುವುದರ ವಿರುದ್ಧ ಹೊಸ ನಿಯಮಗಳನ್ನು ರೂಪಿಸಲಾಗಿದೆ. ಇದನ್ನು 2016ರ ಜೂನ್ 19ರಂದು ಗೆಜೆಟ್ ಅಧಿಸೂಚನೆ ಹೊರಡಿಸುವ ಮೂಲಕ, ಜಾರಿಗೆ ತರಲಾಗಿದೆ ಎಂದು ಹೇಳಿದೆ.

ರೈಲ್ವೆ ಕಾಯ್ದೆಯ ಸೆಕ್ಷನ್ 167ರ ಪ್ರಕಾರ ರೈಲುಗಳಲ್ಲಿ ಮತ್ತು ರೈಲ್ವೆ ನಿಲ್ದಾಣದ ಆವರಣದಲ್ಲಿ ಧೂಮಪಾನ ಮಾಡುವುದನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ. ಈ ಹಿಂದೆ ಧೂಮಪಾನಕ್ಕೆ ಕೇವಲ 100 ರೂಪಾಯಿಗಳವರೆಗೆ ಮಾತ್ರ ದಂಡ ವಿಧಿಸುವ ನಿಯಮವಿತ್ತು. ಆದರೆ, ನೂತನ ಕಾಯ್ದೆಯಡಿ ನಿಯಮ ಉಲ್ಲಂಘಿಸುವವರಿಗೆ ತಕ್ಷಣವೇ 2,000 ರೂಪಾಯಿಗಳ ಭಾರಿ ದಂಡವನ್ನು ವಿಧಿಸಲಾಗುತ್ತದೆ.

ಒಂದು ವೇಳೆ ಅಪರಾಧಿಯು ಈ ದಂಡವನ್ನು ಪಾವತಿಸಲು ನಿರಾಕರಿಸಿದರೆ ಅಥವಾ ವಿಫಲವಾದರೆ, ಅವರನ್ನು ಸಕ್ಷಮ ನ್ಯಾಯಾಲಯದ ಮುಂದೆ ಹಾಜರುಪಡಿಸಲಾಗುತ್ತದೆ. ನ್ಯಾಯಾಲಯದಲ್ಲಿ ಅಪರಾಧ ಸಾಬೀತಾದರೆ ದಂಡದ ಪ್ರಮಾಣವು 5,000 ರೂ.ವರೆಗೆ ಹೆಚ್ಚಾಗಬಹುದು. ಅಲ್ಲದೆ, ನ್ಯಾಯಾಲಯವು ವಿಶೇಷ ಕಾರಣಗಳನ್ನು ದಾಖಲಿಸದ ಹೊರತು ಕನಿಷ್ಠ 2,000 ರೂ. ದಂಡ ವಿಧಿಸುವುದು ಕಡ್ಡಾಯವಾಗಿದೆ. ಜೊತೆಗೆ, ಧೂಮಪಾನ ಮಾಡುವ ವ್ಯಕ್ತಿಯ ರೈಲು ಟಿಕೆಟ್ ಅಥವಾ ಪಾಸ್ ಅನ್ನು ಮುಟ್ಟುಗೋಲು ಹಾಕಿಕೊಳ್ಳುವ ಹಾಗೂ ಅವರನ್ನು ರೈಲಿನಿಂದ ತಕ್ಷಣವೇ ಕೆಳಗಿಳಿಸುವ ಸಂಪೂರ್ಣ ಅಧಿಕಾರವನ್ನು ರೈಲ್ವೆ ಸಿಬ್ಬಂದಿಗೆ ನೀಡಲಾಗಿದೆ.

ಇದೇ ರೀತಿ ರೈಲುಗಳಲ್ಲಿ ಹಾಗೂ ರೈಲ್ವೆ ನಿಲ್ದಾಣಗಳಲ್ಲಿ ಅನಧಿಕೃತವಾಗಿ ವ್ಯಾಪಾರ ಮಾಡುವುದು ಮತ್ತು ಭಿಕ್ಷಾಟನೆ ಮಾಡುವುದನ್ನು ಸೆಕ್ಷನ್ 144ರ ಅಡಿಯಲ್ಲಿ ಕಡ್ಡಾಯವಾಗಿ ನಿಷೇಧಿಸಲಾಗಿದೆ. ರೈಲ್ವೆ ಆಡಳಿತ ಮಂಡಳಿಯಿಂದ ಸೂಕ್ತ ಪರವಾನಗಿ ಪಡೆಯದೆ ಯಾವುದೇ ವಸ್ತುವನ್ನು ಮಾರಾಟ ಮಾಡಲು ಯತ್ನಿಸಿದರೆ ಅಥವಾ ಭಿಕ್ಷಾಟನೆ ನಡೆಸಿದರೆ ಮೊದಲ ಬಾರಿಗೆ 2,000 ರೂಪಾಯಿಗಳ ದಂಡವನ್ನು ವಿಧಿಸಲಾಗುತ್ತದೆ.

ಈ ದಂಡವನ್ನು ಪಾವತಿಸದಿದ್ದರೆ ನ್ಯಾಯಾಲಯದ ಮೂಲಕ ಮೂರು ತಿಂಗಳವರೆಗಿನ ಜೈಲು ಶಿಕ್ಷೆ, 5,000 ರೂ. ವರೆಗೆ ದಂಡ ಅಥವಾ ಇವೆರಡನ್ನೂ ವಿಧಿಸಲು ಕಾನೂನಿನಲ್ಲಿ ಅವಕಾಶವಿದೆ. ನ್ಯಾಯಾಲಯವು ವಿಶೇಷ ಕಾರಣಗಳನ್ನು ನೀಡದ ಹೊರತು ಕನಿಷ್ಠ ಒಂದು ತಿಂಗಳ ಜೈಲು ಅಥವಾ 2,000 ರೂಪಾಯಿ ದಂಡದ ಶಿಕ್ಷೆ ಅನ್ವಯವಾಗುತ್ತದೆ.

ಇದೇ ಅಪರಾಧವನ್ನು ನಾಲ್ಕು ಅಥವಾ ಅದಕ್ಕಿಂತ ಹೆಚ್ಚು ಬಾರಿ ಪುನರಾವರ್ತಿಸಿದರೆ ಶಿಕ್ಷೆಯು ಒಂದು ವರ್ಷದ ಜೈಲು ಮತ್ತು 5,000 ರೂಪಾಯಿ ದಂಡದವರೆಗೆ ಹೆಚ್ಚಾಗಬಹುದು. ಇಂತಹ ನಿಯಮ ಉಲ್ಲಂಘಿಸುವವರನ್ನು ರೈಲಿನಿಂದ ಅಥವಾ ನಿಲ್ದಾಣದಿಂದ ಹೊರಹಾಕಲು ರೈಲ್ವೆ ಸಿಬ್ಬಂದಿಗೆ ಮುಕ್ತ ಅಧಿಕಾರ ನೀಡಲಾಗಿದೆ. ಆದಾಗ್ಯೂ, ಹೊಟ್ಟೆ ಪಾಡಿಗಾಗಿ ವ್ಯಾಪಾರ ಮಾಡುವವರ ಮೇಲೆ ಭಾರೀ ದಂಡ ವಿಧಿಸುವ ನಿಯಮದ ವಿರುದ್ಧ ಸಾರ್ವಜನಿಕರು ಮತ್ತು ಬೀದಿ ಬದಿ ವ್ಯಾಪಾರಿಗಳಂತಹ ಬಡ ವ್ಯಾಪಾರಿಗಳು ಅಸಮಾಧಾನ ವ್ಯಕ್ತಪಡಿಸಿದ್ದಾರೆ.



ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ಅವರು ಸೋಮವಾರ ಮಂಗೋಲಿಯಾದ ಗಂದನ್ ಮಠದ ಮುಖ್ಯ ಮಠಾಧೀಶ ಖಂಬಾ ನೊಮುನ್ ಖಾನ್ ಗೆಶೆ ಲ್ಹಾರಂಪ ಡಿ ಜಾವ್ಜಾಂದೋರ್ಜ್ ಅವರನ್ನು ಭೇಟಿ ಮಾಡಿದ್ದರು.

## ವಿಚಾರಣೆಗೆ ಹಾಜರಾದ ನಟ ಅಲ್ಲು ಅರ್ಜುನ್: ಜು.6ಕ್ಕೆ ಮುಂದೂಡಿಕೆ



**ಹೈದ್ರಬಾದ್ :** ಪುಷ್ಪ 2 ಸಿನಿಮಾ ಬಿಡುಗಡೆ ವೇಳೆ ಹೈದ್ರಾಬಾದ್‌ನ ಸಂಧ್ಯಾ ಥಿಯೇಟರ್‌ನಲ್ಲಿ ಸಂಭವಿಸಿದ ಕಾಲ್ತುಳಿತ ಪ್ರಕರಣಕ್ಕೆ ಸಂಬಂಧಿಸಿದಂತೆ ನಟ ಅಲ್ಲು ಅರ್ಜುನ್ ಇಂದು ವರ್ಚುವಲ್ ಮೂಲಕ ವಿಚಾರಣೆಗೆ ಹಾಜರಾದರು. ವಿಚಾರಣೆಯನ್ನು ಹೈದರಾಬಾದ್ನ ನಾಂಪಲ್ಲಿ ಕ್ರಿಮಿನಲ್ ನ್ಯಾಯಾಲಯ ಇಂದು ಜುಲೈ 6ಕ್ಕೆ ಮುಂದೂಡಿತು. ಕೋರ್ಟ್‌ಗೆ ಹಾಜರಾಗುವಂತೆ ಸೂಚಿಸಿ ನಟ ಅಲ್ಲು ಅರ್ಜುನ್ ಅವರಿಗೆ ಸಮನ್ಸ್ ನೀಡಲಾಗಿತ್ತು. ಆದರೆ, ತಾವು ಶೂಟಿಂಗ್ನಲ್ಲಿ ಮುಂಬೈನಲ್ಲಿರುವ ಕಾರಣ ಹಾಜರಾಗಲು ಸಾಧ್ಯವಿಲ್ಲ. ಈ ಹಿನ್ನೆಲೆಯಲ್ಲಿ ವಿಡಿಯೋ ಕಾನ್ಪರೆನ್ಸ್ ಮೂಲಕ ವರ್ಚುಯಲ್ ಆಗಿ ವಿಚಾರಣೆಗೆ ಅವಕಾಶ ನೀಡಬೇಕು ಎಂಬ ಅಲ್ಲು ಅರ್ಜುನ್ ಮನವಿಯನ್ನು ನ್ಯಾಯಾಲಯ ಪುರಸ್ಕರಿಸಿತ್ತು. ಆದರೆ, ಪ್ರಕರಣದ ಕೆಲವು ಆರೋಪಿಗಳು ಗೈರುಹಾಜರಾಗಿದ್ದ ಕಾರಣ ವಿಚಾರಣೆ ಮುಂದೂಡಲಾಯಿತು. ಸಂಧ್ಯಾ ಥಿಯೇಟರ್ ಆಡಳಿತ ಮಂಡಳಿಯ ಪರ ವಕೀಲ ಭಾನುಚಂದರ್ ಅವರು ನ್ಯಾಯಾಲಯದ ಹೊರಗೆ ಮಾಧ್ಯಮದವರೊಂದಿಗೆ ಮಾತನಾಡಿ, ಇಂದು ನಾಂಪಲ್ಲಿಯಲ್ಲಿ ಮ್ಯಾಜಿಸ್ಟ್ರೇಟ್ ಎದುರು ಬದ್ಧತಾ ಬಾಂಡ್ ಸಲ್ಲಿಸಲು ಹಾಜರಾಗಬೇಕಿದೆ. ಆದರೆ, 23 ಆರೋಪಿಗಳಲ್ಲಿ 21 ಅಥವಾ 22 ಮಂದಿ ಹಾಜರಾಗಿದ್ದಾರೆ. ಒಬ್ಬರು ಅಥವಾ ಇಬ್ಬರು ಗೈರುಹಾಜರಾದರು. ಈ ಕಾರಣದಿಂದ ನ್ಯಾಯಾಲಯವು ಪ್ರಕರಣದ ಮುಂದಿನ ವಿಚಾರಣೆಯನ್ನು ಜುಲೈ 6ಕ್ಕೆ ಮುಂದೂಡಿತು. ಮುಂದಿನ ವಿಚಾರಣೆಗೆ ಎಲ್ಲಾ 23 ಆರೋಪಿಗಳು ಹಾಜರಾಗಬೇಕು ಎಂದು ಸೂಚಿಸಿರುವುದಾಗಿ ತಿಳಿಸಿದರು.

ಚಿಕ್ಕಡಪಲ್ಲಿ ಪೊಲೀಸರು ನಟ ಅಲ್ಲು ಅರ್ಜುನ್ ಅವರನ್ನು 11ನೇ ಆರೋಪಿಯಾಗಿ ಗುರುತಿಸಿದ್ದಾರೆ. ಸಂಧ್ಯಾ ಥಿಯೇಟರ್‌ನ ಆಡಳಿತ ಮಂಡಳಿಯನ್ನು 1ರಿಂದ 10ನೇ ಆರೋಪಿಗಳೆಂದು ಪಟ್ಟಿ ಮಾಡಲಾಗಿದೆ. ಘಟನೆಗೆ ಸಂಬಂಧಿಸಿದಂತೆ ಪೊಲೀಸರು ಈಗಾಗಲೇ 23 ಆರೋಪಿಗಳ ವಿರುದ್ಧ ಆರೋಪಪಟ್ಟಿ ಸಲ್ಲಿಸಿದ್ದಾರೆ. 2024ರ ಡಿಸೆಂಬರ್ 4ರಂದು ಹೈದರಾಬಾದ್‌ನ ಸಂಧ್ಯಾ ಚಿತ್ರಮಂದಿರದಲ್ಲಿ ಆಯೋಜಿಸಿದ್ದ ಪುಷ್ಪಾ 2 ಪ್ರೀಮಿಯರ್ ಶೋಗೆ ಆಗಮಿಸಿದ್ದ ಚಿತ್ರದ ನಾಯಕ ಅಲ್ಲು ಅರ್ಜುನ್ ಅವರನ್ನು ನೋಡಲು ಅಭಿಮಾನಿಗಳು ಭಾರಿ ಸಂಖ್ಯೆಯಲ್ಲಿ ಸೇರಿದಾಗ ಭೀಕರ ಕಾಲ್ತುಳಿತ ಸಂಭವಿಸಿತ್ತು.

## ಲಖನೌ ಅಗ್ನಿ ದುರಂತದಲ್ಲಿ 15 ಸಾವು; ನಾಲ್ವರ ಬಂಧನ; 7 ದಿನಗಳಲ್ಲಿ ತನಿಖಾ ವರದಿ ಸಲ್ಲಿಸಲು ಎಸ್‌ಐಟಿಗೆ ಆದೇಶ



**ಲಖನೌ,ಜೂ.22:** ಸೋಮವಾರ ಲಖನೌದ ಅಲಿಗಂಜ್ ಪ್ರದೇಶದ ಉಷಾ ಮೆಹ್ತಾ ಮಾರ್ಗದಲ್ಲಿರುವ ಮೂರು ಅಂತಸ್ತಿನ ಕಟ್ಟಡದಲ್ಲಿ ಸಂಭವಿಸಿದ ಅಗ್ನಿ ಅವಘಡದಲ್ಲಿ 15 ಮಂದಿ ಮೃತಪಟ್ಟ ಪ್ರಕರಣಕ್ಕೆ ಸಂಬಂಧಿಸಿದಂತೆ ನಾಲ್ವರನ್ನು ಬಂಧಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಬಂಧಿತರನ್ನು ರಾಮ್ ಕೃಷ್ಣ ಉಪಾಧ್ಯಾಯ್ (43), ವೀರೇಂದ್ರ ಪ್ರಸಾದ್ ಶುಕ್ಲಾ (62), ತುಷೋಕ್ ಕೃಷ್ಣ ಜೈಸ್ವಾಲ್ (31) ಮತ್ತು ಸುರೇಶ್ ಕುಮಾರ್ ಸಾಹು ಎಂದು ಪೊಲೀಸರು ಗುರುತಿಸಿದ್ದಾರೆ. ಯೋಗಿ ಆದಿತ್ಯನಾಥ ಘಟನೆ ನಡೆದ ಸ್ಥಳಕ್ಕೆ ಭೇಟಿ ನೀಡಿ, ಮೃತರ ಕುಟುಂಬಗಳಿಗೆ ತಲಾ 5 ಲಕ್ಷ ಹಾಗೂ ಗಾಯಾಳುಗಳಿಗೆ ತಲಾ 50,000 ಪರಿಹಾರ ಘೋಷಿಸಿದ್ದಾರೆ. ಜೊತೆಗೆ, ಈ ಅಗ್ನಿ ದುರಂತದ ತನಿಖೆಗಾಗಿ ಇಬ್ಬರು ಸದಸ್ಯರ ವಿಶೇಷ ತನಿಖಾ ತಂಡ (ಎಸ್‌ಐಟಿ) ರಚಿಸಿದ್ದು, 7 ದಿನಗಳೊಳಗೆ ವರದಿ ಸಲ್ಲಿಸುವಂತೆ ಸ ೂ ಚಿ ಸಿ ದ ಾ ್ದ ರ ೆ. ಪ್ರಾಥಮಿಕ ಮಾಹಿತಿಯ ಪ್ರಕಾರ, ಕಟ್ಟಡದ ಏರ್ ಕಂಡೀಷನರ್ (ಎಸಿ) ಡಕ್ಟ್‌ನಲ್ಲಿ ಬೆಂಕಿ ಕಾಣಿಸಿಕೊಂಡಿರಬಹುದು. ಸರಿಯಾದ ತುರ್ತು ನಿರ್ಗಮನ ಮಾರ್ಗ (ಎಕ್ಸಿಟ್) ಇಲ್ಲದ ಕಾರಣ ಹೊಗೆ ತುಂಬಿ ಉಸಿರುಗಟ್ಟುವಿಕೆಯಿಂದ ಹೆಚ್ಚಿನ ಸಾವುಗಳು ಸಂಭವಿಸಿವೆ ಎಂದು ಎ.ಕೆ. ಶರ್ಮಾ ತಿಳಿಸಿದ್ದಾರೆ. ಕಟ್ಟಡ ನಿರ್ಮಾಣದ ಸುರಕ್ಷತಾ ಮಾನದಂಡಗಳಲ್ಲಿ ಯಾವುದೇ ನಿರ್ಲಕ್ಷ್ಯ ನಡೆದಿದೆಯೇ ಎಂಬುದರ ಕುರಿತು ತನಿಖೆ ನಡೆಯಲಿದೆ. ಇದಕ್ಕೂ ಮುನ್ನ ನರೇಂದ್ರ ಮೋದಿ ಅವರು ಪ್ರಧಾನಮಂತ್ರಿಗಳ ರಾಷ್ಟ್ರೀಯ ಪರಿಹಾರ ನಿಧಿ ಯಿಂದ ಮೃತರ ಕುಟುಂಬಗಳಿಗೆ ತಲಾ 2 ಲಕ್ಷ ಹಾಗೂ ಗಾಯಾಳುಗಳಿಗೆ ತಲಾ 50,000 ಪರಿಹಾರ ಘೋಷಿಸಿದ್ದರು. ಲಖನೌ ಅಗ್ನಿ ದುರಂತದಲ್ಲಿ ಸಂಭವಿಸಿದ ಜೀವಹಾನಿಗೆ ಅವರು ತೀವ್ರ ಸಂತಾಪ ವ್ಯಕ್ತಪಡಿಸಿ, ಗಾಯಾಳುಗಳು ಶೀಘ್ರ ಗುಣಮುಖರಾಗಲಿ ಎಂದು ಹಾರೈಸಿದರು. ರಕ್ಷಣಾ ಕಾರ್ಯಾಚರಣೆ ಮುಂದುವರಿದಿದ್ದು, ಅಧಿಕಾರಿಗಳು ಎಲ್ಲ ರೀತಿಯ ನೆರವು ನೀಡುತ್ತಿದ್ದಾರೆ ಎಂದರು. ಬೆಂಕಿಯನ್ನು ನಿಯಂತ್ರಣಕ್ಕೆ ತಂದ ನಂತರ, ಪಕ್ಕದ ಕಟ್ಟಡದ ಮೂಲಕ ಸ್ಟ್ರೆಚರ್‌ಗಳನ್ನು ಒಳಗೆ ಕೊಂಡೊಯ್ಯಲಾಯಿತು. ರಕ್ಷಣಾ ಸಿಬ್ಬಂದಿ ಗೋಡೆಯಲ್ಲಿ ರಂಧ್ರ ಮಾಡಿ, ಅದರ ಮೂಲಕ ಗಾಯಾಳುಗಳನ್ನು ಹೊರತೆಗೆದರು. ಅಧಿಕಾರಿಗಳ ಪ್ರಕಾರ, ಇನ್ನೂ ನಾಲ್ಕರಿಂದ ಐದು ಮಂದಿ ಒಳಗೆ ಸಿಲುಕಿರುವ ಸಾಧ್ಯತೆ ಇದೆ ಎಂದು ಆರಂಭದಲ್ಲಿ ಶಂಕಿಸಲಾಗಿತ್ತು. ಅಲಿಗಢ ಪ್ರವಾಸ ಮೊಟಕುಗೊಳಿಸಿದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ ಅವರು ಈ ದುರ್ಘಟನೆಯಲ್ಲಿ ಮೃತಪಟ್ಟವರ ಕುಟುಂಬಗಳಿಗೆ ಸಂತಾಪ ಸೂಚಿಸಿದರು. ಹೊಸ ಯೋಜನೆಗಳ ಘೋಷಣೆಗಾಗಿ ಅಲಿಗಢಕ್ಕೆ ತೆರಳಿದ್ದ ಅವರು, ಅಗ್ನಿ ಅವಘಡದ ಮಾಹಿತಿ ತಿಳಿದ ಕೂಡಲೇ ತಮ್ಮ ಪ್ರವಾಸವನ್ನು ಮೊಟಕುಗೊಳಿಸಿ ಲಖನೌಗೆ ಮರಳಿ, ಘಟನೆ ನಡೆದ ಸ್ಥಳಕ್ಕೆ ಭೇಟಿ ನೀಡಿದರು. ಪರಿಣಾಮಕ್ಕೊಳಗಾದ ಕುಟುಂಬಗಳಿಗೆ ತಕ್ಷಣ ನೆರವು ಒದಗಿಸುವಂತೆ ಹಾಗೂ ಗಾಯಾಳುಗಳಿಗೆ ಅತ್ಯುತ್ತಮ ವೈದ್ಯಕೀಯ ಚಿಕಿತ್ಸೆ ನೀಡುವಂತೆ ಅವರು ಹಿರಿಯ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಈ ಕುರಿತು ಮಾತನಾಡಿದ ಉಪ ಮುಖ್ಯಮಂತ್ರಿ ಬ್ರಜೇಶ್ ಪಾಠಕ್, "ರಕ್ಷಣಾ ಕಾರ್ಯಾಚರಣೆ ಇನ್ನೇನು ಕೆಲವೇ ನಿಮಿಷಗಳಲ್ಲಿ ಪೂರ್ಣಗೊಳ್ಳುವ ನಿರೀಕ್ಷೆಯಿದೆ. ನಮ್ಮ ಮೊದಲ ಆದ್ಯತೆ ಎಲ್ಲ ಮಕ್ಕಳನ್ನೂ ಸುರಕ್ಷಿತವಾಗಿ ರಕ್ಷಿಸುವುದಾಗಿದೆ. ಹೆಚ್ಚಿನ ಮಕ್ಕಳನ್ನು ಈಗಾಗಲೇ ಸುರಕ್ಷಿತವಾಗಿ ಹೊರತೆಗೆದಿದ್ದೇವೆ," ಎಂದು ಹೇಳಿದರು.

# ಮದ್ಯ ಪರವಾನಗಿಯಲ್ಲಿ ಮೀಸಲಾತಿ ಅನುಷ್ಠಾನಗೊಳಿಸಿದ ಮೊದಲ ರಾಜ್ಯವೆಂಬ ಹೆಗ್ಗಳಿಕೆ ಕರ್ನಾಟಕಕ್ಕೆ

**ಬೆಂಗಳೂರು, ಜೂ.22:** ಕರ್ನಾಟಕ ಸರ್ಕಾರದ ಆದೇಶವು ರಾಜ್ಯದ ಅಬಕಾರಿ ಇಲಾಖೆಯ ಇತಿಹಾಸದಲ್ಲಿ ಕ್ರಾಂತಿಕಾರಕ ತಿರುವು ತಂದಿದೆ. ಮದ್ಯ ಪರವಾನಗಿ ಹರಾಜುಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡಗಳಿಗೆ ಮೀಸಲಾತಿ ನೀಡುವ ಈ ನಿರ್ಧಾರವು ಕೇವಲ ಆಡಳಿತಾತಕ ತಿದ್ದುಪಡಿ ಅಲ್ಲ. ಇದು ಸಾಮಾಜಿಕ ನ್ಯಾಯದ ಹೊಸ ಪರಿಕಲ್ಪನೆಗೆ ಜೀವತುಂಬಿದ ಹೆಜ್ಜೆ. ಇತರ ರಾಜ್ಯಗಳಲ್ಲಿ ಇಂತಹ ಮೀಸಲಾತಿ ವ್ಯವಸ್ಥೆ ಇಲ್ಲದಿರುವುದರಿಂದ, ಕರ್ನಾಟಕವು ದೇಶದಾದ್ಯಂತ ಸಾಮಾಜಿಕ ಒಳಗೊಳ್ಳುವಿಕೆಯ ಮಾದರಿಯಾಗಿ ಹೊರಹೊಮ್ಮಿದೆ.

ಈ ಕ್ರಮದ ಮೂಲಕ ಸರ್ಕಾರವು ಆರ್ಥಿಕ ಅವಕಾಶಗಳ ಸಮಾನತೆ ಮತ್ತು ಸಾಮಾಜಿಕ ನ್ಯಾಯದ ತತ್ವವನ್ನು ವ್ಯಾಪಾರ ಕ್ಷೇತ್ರದೊಳಗೂ ವಿಸ್ತರಿಸಿದೆ. ಕರ್ನಾಟಕದಲ್ಲಿ ಮೊದಲ ಬಾರಿಗೆ ಮದ್ಯ ಪರವಾನಗಿ ಹರಾಜುಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳಿಗೆ ಮೀಸಲಾತಿ ನೀಡುವ ಸರ್ಕಾರದ ಆದೇಶ ಹೊರಬಂದಿದೆ.

ಇದು ರಾಜ್ಯದ ಆಬಕಾರಿ ಇಲಾಖೆಯ ಇತಿಹಾಸದಲ್ಲೇ ಹೊಸ ಅಧ್ಯಾಯವನ್ನು ಆರಂಭಿಸಿದೆ. ಇತರ ರಾಜ್ಯಗಳಲ್ಲಿ ಇಂತಹ ಮೀಸಲಾತಿ ಇಲ್ಲದಿರುವುದರಿಂದ, ಕರ್ನಾಟಕ ಈ ಕ್ರಮದ ಮೂಲಕ ಸಾಮಾಜಿಕ ನ್ಯಾಯದ ಹೊಸ ಮಾದರಿಯನ್ನು ಸ್ಥಾಪಿಸಿದೆ. ಕರ್ನಾಟಕ ಸರ್ಕಾರವು ಇದೇ 17ರಂದು ಹೊರಡಿಸಿದ ಅಧಿಸೂಚನೆಯ ಪ್ರಕಾರ, ಕರ್ನಾಟಕ ಆಬಕಾರಿ (ಭಾರತೀಯ ಮತ್ತು ವಿದೇಶಿ ಮದ್ಯ ಮಾರಾಟ) ನಿಯಮಗಳು, 1968ರ 5ನೇ ನಿಯಮದಲ್ಲಿ ತಿದ್ದುಪಡಿ ಮಾಡಲಾಗಿದೆ. ಈ ತಿದ್ದುಪಡಿಯಡಿ ಸಿಎಲ್–2ಎ ಮತ್ತು ಸಿಎಲ್–9ಎ ಪರವಾನಗಿಗಳ ಇ–ಹರಾಜುಗಳಲ್ಲಿ ಮೀಸಲಾತಿ ಶೇಕಡಾವಾರು ಹಂಚಿಕೆ ಈ ರೀತಿಯಾಗಿದೆ. ಪರಿಶಿಷ್ಟ ಜಾತಿ–ಎಗೆ 5.25%, ಪರಿಶಿಷ್ಟ ಜಾತಿ–ಬಿಗೆ 5.25%,




ಪರಿಶಿಷ್ಟ ಜಾತಿ–ಸಿಗೆ 4.5%, ಮತ್ತು ಪರಿಶಿಷ್ಟ ಪಂಗಡಕ್ಕೆ 3% ಮೀಸಲಾತಿ. ಈ ಆದೇಶವನ್ನು ಕರ್ನಾಟಕ ರಾಜ್ಯಪಾಲರ ಹೆಸರಿನಲ್ಲಿ, ಭೀಮಪ್ಪ ಪಿ. ಅಜೂರ್, ಹಣಕಾಸು ಇಲಾಖೆಯ ಅಧೀನ ಕಾರ್ಯದರ್ಶಿ (ಆಬಕಾರಿ) ಸಹಿ ಮಾಡಿದ್ದಾರೆ. ಈ ಕ್ರಮವು ಕರ್ನಾಟಕದಲ್ಲಿ ಮೊದಲ ಬಾರಿಗೆ ಮದ್ಯ ಪರವಾನಗಿ ಹರಾಜುಗಳಲ್ಲಿ ಸಾಮಾಜಿಕ ಮೀಸಲಾತಿ ನೀಡುವ ಪ್ರಯತ್ನವಾಗಿದೆ.

ಇದುವರೆಗೆ ಯಾವುದೇ ರಾಜ್ಯದಲ್ಲಿ ಮಹಾರಾಷ್ಟ್ರ, ತಮಿಳುನಾಡು, ಆಂಧ್ರಪ್ರದೇಶ, ತೆಲಂಗಾಣ ಅಥವಾ ಕೇರಳ ಮದ್ಯ ಪರವಾನಗಿ ಹರಾಜುಗಳಲ್ಲಿ ಪರಿಶಿಷ್ಟ ಜಾತಿ ಅಥವಾ ಪಂಗಡಗಳಿಗೆ ಮೀಸಲಾತಿ ನೀಡುವ ನಿಯಮಗಳಿಲ್ಲ. ಇತರ ರಾಜ್ಯಗಳಲ್ಲಿ ಆಬಕಾರಿ ಪರವಾನಗಿಗಳು ಸಾಮಾನ್ಯವಾಗಿ ಆರ್ಥಿಕ ಅರ್ಹತೆ, ತೆರಿಗೆ ಪಾವತಿ ಸಾಮರ್ಥ್ಯ ಮತ್ತು ವ್ಯಾಪಾರ ಅನುಭವದ ಆಧಾರದ ಮೇಲೆ ನೀಡಲಾಗುತ್ತವೆ. ಆದರೆ ಸಾಮಾಜಿಕ ನ್ಯಾಯದ ಅಂಶವನ್ನು ಒಳಗೊಂಡಿಲ್ಲ. ಕರ್ನಾಟಕ ಸರ್ಕಾರದ ಈ ಕ್ರಮವು ಸಾಮಾಜಿಕ ನ್ಯಾಯ ಮತ್ತು ಆರ್ಥಿಕ ಅವಕಾಶಗಳ ಸಮಾನತೆ ಸಾಧಿಸುವ ನಿಟ್ಟಿನಲ್ಲಿ ಮಹತ್ವದ ಹೆಜ್ಜೆಯಾಗಿದೆ. ಪರಿಶಿಷ್ಟ ಜಾತಿ ಮತ್ತು ಪಂಗಡಗಳ ವ್ಯಾಪಾರಿಗಳಿಗೆ ಮದ್ಯ ಪರವಾನಗಿ ಕ್ಷೇತ್ರದಲ್ಲಿ ಪ್ರವೇಶದ ಅವಕಾಶ ದೊರಕುವುದರಿಂದ, ಅವರು ಆಬಕಾರಿ ವ್ಯಾಪಾರದಲ್ಲಿ ಪಾಲ್ಗೊಳ್ಳುವ ಮೂಲಕ ರಾಜ್ಯದ ಆದಾಯ ಮತ್ತು ಉದ್ಯೋಗಾವಕಾಶಗಳಲ್ಲಿ ತಮ ಪಾತ್ರವನ್ನು ವಿಸ್ತರಿಸಬಹುದು.

ಈ ಆದೇಶವು 26 ಮೇ 2026ರಿಂದ ಜಾರಿಗೆ ಬರುತ್ತದೆ ಮತ್ತು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಇ–ಹರಾಜು ಪ್ರಕ್ರಿಯೆಗಳಲ್ಲಿ ಈ ಮೀಸಲಾತಿ ಅನ್ವಯವಾಗಲಿದೆ. ಸರ್ಕಾರದ ಅಧಿಕೃತ ಪ್ರಕಟಣೆಯ ಪ್ರಕಾರ, ಈ ತಿದ್ದುಪಡಿ ಕರ್ನಾಟಕ ಆಬಕಾರಿ ಕಾಯ್ದೆ, 1965ರ 71ನೇ ವಿಧಿಯಡಿ ಮಾಡಲಾಗಿದೆ.

ಈ ಕ್ರಮದ ಪರಿಣಾಮವಾಗಿ, ಕರ್ನಾಟಕವು ದೇಶದ ಮೊದಲ ರಾಜ್ಯವಾಗಿ ಮದ್ಯ ಪರವಾನಗಿ ಹರಾಜುಗಳಲ್ಲಿ ಸಾಮಾಜಿಕ ಮೀಸಲಾತಿ ನೀಡುವ ರಾಜ್ಯವಾಗಿ ಗುರುತಿಸಲ್ಪಟ್ಟಿದೆ. ಇದು ರಾಜ್ಯದ ಆಬಕಾರಿ ನೀತಿಯಲ್ಲಿ ಸಾಮಾಜಿಕ ಒಳಗೊಳ್ಳುವಿಕೆಯ ಹೊಸ ಮಾದರಿಯನ್ನು ಸ್ಥಾಪಿಸಿದೆ.

## ಕನಕಪುರ ದೇಗುಲ ಮಠದ ಮುಮ್ಮಡಿ ನಿರ್ವಾಣ ಸ್ವಾಮೀಜಿ ಲಿಂಗೈಕ್ಯ: ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸಂತಾಪ

**ಬೆಂಗಳೂರು, ಜೂ.22:** "ಕನಕಪುರ ದೇಗುಲ ಮಠದ ನಿ.ಪ್ರ.ಸ್ವ.ಶ್ರೀ ಮುಮ್ಮಡಿ ನಿರ್ವಾಣ ಸ್ವಾಮೀಜಿಯವರು ಲಿಂಗೈಕ್ಯರಾದ ಸುದ್ದಿ ತಿಳಿದು ತೀವ್ರ ದುಃಖಿತನಾಗಿದ್ದೇನೆ" ಎಂದು ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಅವರು ತಿಳಿಸಿದ್ದಾರೆ.



"ಸ್ಥಾವರಕ್ಕೆ ಅಳಿವುಂಟು ಜಂಗಮಕ್ಕೆ ಅಳಿವಿಲ್ಲ ಎನ್ನುವ ಮಾತನ್ನು ನಾವು ಕೇಳಿದ್ದೇವೆ. ಈ ಮಾತಿಗೆ ಅನ್ವರ್ಥದಂತೆ ಶರಣ ತತ್ವದ ಏಳಿಗೆಗೆ ದುಡಿದವರು ಮುಮ್ಮಡಿ ನಿರ್ವಾಣ ಮಹಾಸ್ವಾಮಿಯವರು. ಪರಮ ಪೂಜ್ಯರ ಅಗಲಿಕೆ ಅತ್ಯಂತ ನೋವಿನ ಸಂಗತಿ ಎಂದು ಕಂಬನಿ ಮಿಡಿದಿದ್ದಾರೆ.

"ಜನನ, ಮರಣ ದೇಹಕ್ಕೆ ಹೊರತು ಜಂಗಮಕ್ಕಲ್ಲ. ಶರಣರ ಗುಣವನ್ನು ಮರಣದಲ್ಲಿ ಕಾಣಬೇಕು" ಎಂದು ವಚನಕಾರರು ಹೇಳಿದ್ದಾರೆ. ಪೂಜ್ಯ ಮಹಾ ಸ್ವಾಮೀಜಿಯವರು ಕನಕಪುರದ ದೇಗುಲ ಮಠದ ಮೂಲಕ ಬೆಂಗಳೂರು ದಕ್ಷಿಣ ಜಿಲ್ಲೆ ಸೇರಿದಂತೆ ಹಳೇ ಮೈಸೂರು ಭಾಗ ಹಾಗೂ ಕರ್ನಾಟಕದಾದ್ಯಂತ ಶರಣರ, ಬಸವಣ್ಣನವರ ತತ್ವ, ಆದರ್ಶಗಳನ್ನು ಪಸರಿಸಿದವರು. ಆಧ್ಯಾತ್ಮದ ಅರಿವು ಮೂಡಿಸಿದವರು ಎಂದು ಕೊಂಡಾಡಿದ್ದಾರೆ.

ಸುಮಾರು 700 ವರ್ಷಗಳ ಇತಿಹಾಸವಿರುವ ಶ್ರೀಮಠದ ಪೀಠಾಧ್ಯಕ್ಷರಾಗಿ ಸರ್ವರಿಗೂ ಸಮಪಾಲು, ಸಮಬಾಳು ತತ್ವವನ್ನು ಮಠದ ಭಕ್ತಾಧಿಗಳು ಹಾಗೂ ಎಲ್ಲಾ ಜನರಿಗೂ ಮನವರಿಕೆ ಮಾಡಿದವರು. ಮಠದಲ್ಲಿ ತ್ರಿವಿದ ದಾಸೋಹ ಆರಂಭಿಸಿ "ಅನ್ನ, ಅಕ್ಷರ, ಆಶ್ರಯದ" ಮೂಲಕ ಸಾವಿರಾರು ವಿದ್ಯಾರ್ಥಿಗಳ ಜೀವನ ರೂಪಿಸುವುದರಲ್ಲಿ ಶ್ರೀಗಳ ಪಾತ್ರ ತುಂಬಾ ದೊಡ್ಡದು. ಆಯುಷ್ಯ ತೀರಲು ಮರಣ ಎನ್ನುವುದು ನಮ್ಮಂತಹ ಸಾಮಾನ್ಯ ಮನುಷ್ಯರಿಗೆ. ಶ್ರೀಗಳು ದೇಗುಲ ಮಠದ ಮೂಲಕ ಸಮಾಜಕ್ಕೆ ಹಲವಾರು ಕೊಡುಗೆ ನೀಡಿದ್ದಾರೆ. ಆ ಮೂಲಕ ಎಲ್ಲರ ಮನದಲ್ಲಿ ಚಿರಸ್ಥಾಯಿಯಾಗಿದ್ದಾರೆ ಎಂದು ಸಿಎಂ ಅವರು ಸ್ಮರಿಸಿದ್ದಾರೆ.

ಬೆಂಗಳೂರು ದಕ್ಷಿಣ ಜಿಲ್ಲೆಯ ಬಹುದೊಡ್ಡ ಆಧ್ಯಾತ್ಮಿಕ ಕೊಂಡಿ ಕಳಚಿ ಹೋಗಿದೆ. ಕ್ಷೇತ್ರದ ಅಭಿವೃದ್ಧಿಯ ವಿಚಾರದಲ್ಲಿ ಶ್ರೀಗಳು ನೀಡುತ್ತಿದ್ದ ಅನೇಕ ಸಲಹೆಗಳು ನಮ್ಮ ಅರಿವನ್ನು ಜಾಗೃತಗೊಳಿಸಿದ್ದವು. ಇಂತಹ ಹಿರಿಯರ ಅಗಲಿಕೆ ದೊಡ್ಡ ನಿರ್ವಾತವನ್ನು ಸೃಷ್ಟಿಸಿದೆ. ಪರಮಪೂಜ್ಯರ ಅಗಲಿಕೆಯಿಂದ ಉಂಟಾದ ದುಃಖವನ್ನು ಭರಿಸುವ ಶಕ್ತಿಯನ್ನು ಮಠದ ಭಕ್ತಾದಿಗಳಿಗೆ ಆ ದೇವರು ನೀಡಲಿ. ಶ್ರೀಗಳ ಆತ್ಮಕ್ಕೆ ಶಾಂತಿ ಲಭಿಸಲಿ ಎಂದು ಪ್ರಾರ್ಥಿಸುತ್ತೇನೆ ಎಂದು ಸಿಎಂ ಅವರು ಶೋಕ ಸಂದೇಶದಲ್ಲಿ ತಿಳಿಸಿದ್ದಾರೆ.

## ಎಸ್‌ಐಆರ್: ಪ.ಬಂಗಾಳದಲ್ಲಿ ಬಳಸಿದ ತಂತ್ರಾಂಶ ಬಳಸದಂತೆ ಆಗ್ರಹ ಸಾಹಿತಿ–ಕಲಾವಿದರಿಂದ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್‌ಗೆ ಪತ್ರ

**ಬೆಂಗಳೂರು, ಜೂ.22:** ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ವಿರೋಧಿಸಿ ನಡೆಯಲಿರುವ ಎಲ್ಲ ಶಾಂತಿಯುತ, ನ್ಯಾಯಬದ್ಧ ಪ್ರತಿಭಟನೆಗಳಿಗೆ ಬೆಂಬಲ ಸೂಚಿಸಿ ಮತ್ತು ಪಶ್ಚಿಮ ಬಂಗಾಳದಲ್ಲಿ ಬಳಸಿದ ತಾರ್ಕಿಕ ವ್ಯತ್ಯಾಸ ಸಾಫ್ಟ್‌ವೇರ್ ಕರ್ನಾಟಕದಲ್ಲಿ ಯಾವುದೇ ಕಾರಣಕ್ಕೂ ಬಳಸಬಾರದು ಎಂದು ಆಗ್ರಹಿಸಿ ಸಾಹಿತಿ–ಕಲಾವಿದರು, ಮುಖ್ಯಮಂತ್ರಿ ಡಿ. ಕೆ.ಶಿವಕುಮಾರ್‌ಗೆ ಪತ್ರ ಬರೆದಿದ್ದಾರೆ.

ಸಿಎಂಗೆ ಸೋಮವಾರ ಬರೆದಿರುವ ಸಾಹಿತಿ, ಕಲಾವಿದರ ಪತ್ರವನ್ನು ಬಿಡುಗಡೆ ಮಾಡಿರುವ ಲೇಖಕ ರಘುನಂದನ್, ಡಾ.ಅಂಬೇಡ್ಕರ್ ಸಂವಿಧಾನವನ್ನು ದೇಶಕ್ಕೆ ಅರ್ಪಿಸುವ ವೇಳೆ ಸಮಾನ ಮತದಾನದ ಹಕ್ಕನ್ನು ನಾವು ಪಡೆದು ಕೊಂಡಿರುವ ರಾಜಕೀಯ ಸ್ವಾತಂತ್ರ್ಯ ಎಂದು ಹೇಳಿದ್ದರು. ಎಲ್ಲರಿಗೂ ಒಂದು ಮತ, ಒಂದು ಮತ ಒಂದು ಮೌಲ್ಯ ಎನ್ನುವುದನ್ನು ಇಲ್ಲಿಯವರೆಗೂ ಚುನಾವಣಾ ಆಯೋಗ ಪಾಲಿಸಿಕೊಂಡು ಬಂದಿದ್ದವು. ಆದರೆ ಈಗ ಭಾರತ ಚುನಾವಣಾ ಆಯೋಗದ ಮೂಲಕ ಜಾರಿ ಮಾಡಲಾಗುತ್ತಿರುವ ಎಸ್‌ಐಆರ್ ಪ್ರಕ್ರಿಯೆಯು ಜನಸಾಮಾನ್ಯರನ್ನು ಇಕ್ಕಟ್ಟಿಗೆ ಸಿಲುಕಿಸಿ, ಎಲ್ಲ ಜಾತಿಯ ಬಡವರು ದೊಡ್ಡಸಂಖ್ಯೆಯಲ್ಲಿ ಮತದಾನದ ಹಕ್ಕನ್ನು ಕಳೆದುಕೊಳ್ಳುವಂತೆ ಮಾಡುತ್ತಿದೆ ಎಂದು ದೂರಿದ್ದಾರೆ.

ಇಲ್ಲಿಯವರೆಗೂ ಇಲ್ಲದ ಹೊಸ ದಾಖಲೆಗಳ ಕಾರಣ ನೀಡಿ ಅರ್ಹ ಪ್ರಜೆಗಳ ಮತದಾನದ ಹಕ್ಕನ್ನು ಅವರ ಜೀವಿತ ಕಾಲದಲ್ಲಿಯೇ ನಿರಾಕರಿಸುತ್ತಿರುವುದು ಪ್ರಜಾತಂತ್ರದ ಕಗ್ಗೊಲೆಯಾಗಿದೆ. ಅಷ್ಟೇ ಅಲ್ಲದೇ ಈ ಹಿಂದೆ ಬಿಜೆಪಿ ಸರಕಾರ ಪ್ರಯತ್ನಿಸಿ ವಿಫಲಗೊಂಡ ಸಿಎಎ, ಎನ್‌ಆರ್‌ಸಿಯನ್ನು ಜಾರಿಗೊಳಿಸುವ ಪೌರತ್ವ ಪರೀಕ್ಷೆಯ ಪರೋಕ್ಷ ಕಾರ್ಯಚರಣೆಯಂತಾಗಿದೆ. ಈಗಾಗಲೇ ಎಸ್‌ಐಆರ್‌ನಿಂದಾಗಿ 5.18 ಕೋಟಿಗೂ ಹೆಚ್ಚು ಅರ್ಹ ಮತದಾರರನ್ನು ಮತಪಟ್ಟಿಯಿಂದ ಹೊರಗಿಡಲಾಗಿದೆ ಎಂದು ತಿಳಿಸಿದ್ದಾರೆ.

ನುಸುಳುಕೋರರನ್ನು ಪತ್ತೆ ಹಚ್ಚುವುದರ ಬದಲಿಗೆ ದೊಡ್ಡ ಸಂಖ್ಯೆಯಲ್ಲಿ ಪೌರತ್ವದ ಹಕ್ಕು ಇಲ್ಲದ ಎರಡನೇ ದರ್ಜೆಯ ಜನರನ್ನು ಸೃಷ್ಟಿಸುವ ಅಜೆಂಡಾ ಆಗಿದೆಯೇ ಎನ್ನುವ ಆತಂಕ ಕಾಡುತ್ತಿದೆ. ಚುನಾವಣಾ ಆಯೋಗವು ಕರಡು ಪಟ್ಟಿ ತಯಾರಾದ ನಂತರ ಗ್ರಾಮ ಸಭೆಗಳನ್ನು ಕರೆದು ಸಾರ್ವಜನಿಕ ಪರಿಶೀಲನೆ ನಡೆಸಿ ಪಟ್ಟಿಯನ್ನು ಅಂತಿಮಗೊಳಿಸಬೇಕು. ಮತದಾರರ ಪಟ್ಟಿಯನ್ನು ಮಷೀನ್ ರೀಡಬಲ್ ಫಾರ್ಮ್ಯಾಟ್ ಮೂಲಕ ಪಾರದರ್ಶಕತೆ ಪಾಲಿಸಬೇಕು. ಮನವಿ, ಆಕ್ಷೇಪಣೆ ಸಲ್ಲಿಸಲು–ಅಗತ್ಯ ದಾಖಲೆ ಒದಗಿಸಲು ಕನಿಷ್ಠ ಆರು ತಿಂಗಳ ಸಮಯಾವಕಾಶ ನೀಡಬೇಕು ಎಂದು ರಘುನಂದನ್ ಒತ್ತಾಯಿಸಿದ್ದಾರೆ. ರಾಜ್ಯದ ಯಾವ ಅರ್ಹ ಮತದಾರರು ಹೊರಗೆ ಉಳಿಯದಂತೆ ನೋಡಿಕೊಳ್ಳುವ ಜವಾಬ್ದಾರಿಯನ್ನು ಸರಕಾರ ಹೊರಬೇಕು ಎಂದಿದ್ದಾರೆ.

ಸಾಹಿತಿ–ಕಲಾವಿದರಾದ ನಾಗೇಶ ಹೆಗಡೆ, ಚಂದ್ರಶೇಖರ ತಾಳ್ಯ, ಡಾ.ರಾಜೇಂದ್ರ ಚೆನ್ನಿ, ವಿವೇಕ ಶಾನಭಾಗ್, ಪ್ರೊ.ಕೆ.ಫಣಿರಾಜ್, ಡಾ.ಅರುಣ್‌ಜೋಳದ ಕೂಡ್ಲಿಗಿ, ನಾ. ದಿವಾಕರ, ಓ.ಎಲ್.ನಾಗಭೂಷಣಸ್ವಾಮಿ, ಎನ್.ಕೆ. ಮೋಹನ್‌ರಾಮ್, ಜಿ.ಪಿ.ಬಸವರಾಜು, ಎನ್. ಮನುಚಕ್ರವರ್ತಿ ಸೇರಿದಂತೆ 50 ಮಂದಿ ಪತ್ರಕ್ಕೆ ಸಹಿ ಹಾಕಿದ್ದಾರೆ.

## ರಾಮನ ಹೆಸರಲ್ಲಿ ಲೂಟಿ ಹೊಡೆದವರು ಮಂಜುನಾಥನ ಹೆಸರಲ್ಲಿ ಸತ್ಯ ಹೇಳಲು ಸಾಧ್ಯವೇ?

**ಬೆಂಗಳೂರು, ಜೂ.22:** ಅಯೋಧ್ಯೆಯಲ್ಲಿ ಶ್ರೀರಾಮನ ಹೆಸರಿನಲ್ಲೇ ಸಾವಿರಾರು ಕೋಟಿ ರೂಪಾಯಿ ಲೂಟಿ ಮಾಡಿದ ಇತಿಹಾಸ ಹೊಂದಿರುವ ಬಿಜೆಪಿಯವರು, ಈಗ ಧರ್ಮಸ್ಥಳದ ಮಂಜುನಾಥ ಸ್ವಾಮಿ ಹೆಸರಿನಲ್ಲಿ ಸತ್ಯ ಹೇಳಲು ಸಾಧ್ಯವೇ ಎಂದು ಗೃಹಸಚಿವ ಪ್ರಿಯಾಂಕ್ ಖರ್ಗೆ ಪ್ರಶ್ನಿಸಿದ್ದಾರೆ.



ಕಾಂಗ್ರೆಸ್ ಪಕ್ಷದ ಆಂತರಿಕ ವಿಚಾರಗಳ ಬಗ್ಗೆ ಮಾತನಾಡುವ ಬಿಜೆಪಿಯವರು ಪಕ್ಷದೊಳಗಿನ ಒಳಜಗಳವನ್ನು ಮೊದಲು ಬಗೆಹರಿಸಿಕೊಳ್ಳಲಿ. ನಮ್ಮ ಪಕ್ಷ ನೂರು ಭಾಗವೇ ಆಗಲಿ, ಅದರಿಂದ ಅವರಿಗೇನು ಸಮಸ್ಯೆ, ಮೊದಲು ಬಿಜೆಪಿ ನಾಯಕರು ತಮ್ಮ ಸ್ವಂತ ಪಕ್ಷವನ್ನು ಸರಿಯಾಗಿ ನೋಡಿಕೊಳ್ಳಲಿ ಎಂದು ಟೀಕಿಸಿದರು.

ಬಿಜೆಪಿಯಲ್ಲಿ ಈಗ ಶಿಸ್ತು ಎಂಬುದು ಸಂಪೂರ್ಣವಾಗಿ ಮಾಯವಾಗಿದೆ. ಅದಕ್ಕಾಗಿಯೇ ಅವರ ಪಕ್ಷದ ಶಾಸಕರೇ ಇತ್ತೀಚೆಗೆ ಅಡ್ಡ ಮತದಾನ ಮಾಡಿದ್ದಾರೆ. ತಪ್ಪುಗಳನ್ನೆಲ್ಲಾ ತಾವೇ ಮಾಡಿಕೊಂಡು, ಈಗ ತಪ್ಪಿಸಿಕೊಳ್ಳಲು ಧರ್ಮಸ್ಥಳದ ಮಂಜುನಾಥ ಸ್ವಾಮಿ ಹತ್ತಿರ ಹೋಗುತ್ತಿದ್ದೇವೆ ಎನ್ನುತ್ತಿದ್ದಾರೆ ಎಂದು ವ್ಯಂಗ್ಯವಾಡಿದರು.

ಬಿಜೆಪಿ ರಾಜ್ಯಾಧ್ಯಕ್ಷರ ನಡೆಯನ್ನು ಟೀಕಿಸಿದ ಪ್ರಿಯಾಂಕ್ ಖರ್ಗೆ, ಬಿಜೆಪಿ ಅಧ್ಯಕ್ಷರು ಮಂಜುನಾಥ ಸ್ವಾಮಿ ಹತ್ತಿರ ಹೋಗಿ ಆಣೆ–ಪ್ರಮಾಣ ಮಾಡೋಣ ಎನ್ನುತ್ತಿದ್ದಾರೆ. ಆದರೆ ಪಾಪ, ಅವರದ್ದೇ ಪಕ್ಷದ ಬೇರೆ ನಾಯಕರು ಅದಕ್ಕೆ ಒಪ್ಪುತ್ತಿಲ್ಲ, ಇವರ ಜೊತೆ ಹೋಗುವುದು ಬೇಡ ಎನ್ನುತ್ತಿದ್ದಾರೆ. ಇಷ್ಟಕ್ಕೂ ಬಿಜೆಪಿಯಲ್ಲಿ ಈಗ ಎಷ್ಟು ಬಣಗಳಿವೆ, ಅವರು ಎಷ್ಟು ಭಾಗಗಳಾಗಿದ್ದಾರೆ ಎಂಬುದನ್ನು ಅವರೇ ಮೊದಲು ಲೆಕ್ಕ ಹಾಕಿಕೊಳ್ಳಲಿ. ಅವರ ಪಕ್ಷದಲ್ಲಿ ಯಾರು ಅಡ್ಡ ಮತದಾನ ಮಾಡಿದ್ದಾರೆ ಎಂಬುದನ್ನು ಮೊದಲು ಪರಿಶೀಲನೆ ನಡೆಸಿ, ಆತ್ಮಾವಲೋಕನ ಮಾಡಿಕೊಳ್ಳಲಿ ಎಂದು ಸವಾಲು ಹಾಕಿದರು.

- ಬಿಜೆಪಿಯವರ ಆಣೆ ಪ್ರಮಾಣಕ್ಕೆ ಸಚಿವ ಪ್ರಿಯಾಂಕ್ ಖರ್ಗೆ ಪ್ರಶ್ನೆ
- ಪಕ್ಷದೊಳಗಿನ ಜಗಳವನ್ನು ಮೊದಲು ಬಗೆಹರಿಸಿಕೊಳ್ಳುವಂತೆ ಸಲಹೆ

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ಕುರಿತಾದ ಹೇಳಿಕೆಗಳಿಗೆ ಉತ್ತರಿಸಿದ ಪ್ರಿಯಾಂಕ್ ಖರ್ಗೆ, "ಖರ್ಗೆ ಸಾಹೇಬರು ರಾಜಕಾರಣದಲ್ಲಿ ಅತ್ಯಂತ ಹಿರಿಯರು. ಅವರಿಗೆ ದಶಕಗಳ ರಾಜಕೀಯ ಅನುಭವವೂ ಇದೆ, ವಯಸ್ಸೂ ಇದೆ. ಪಕ್ಷದಲ್ಲಿ ಯಾರನ್ನೇ ಆದರೂ ಶಿಸ್ತಿನ ಹಾದಿಯಲ್ಲಿ ನಡೆಸುವ ಸಂಪೂರ್ಣ ಅಧಿಕಾರ ಮತ್ತು ಅರ್ಹತೆ ಅವರಿಗಿದೆ. ಅದನ್ನು ಪ್ರಶ್ನಿಸುವ ಯೋಗ್ಯತೆ ಬಿಜೆಪಿಯವರಿಗಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

### ಕನಕಪುರ, ರಾಮನಗರ, ಚನ್ನಪಟ್ಟಣ, ಮಾಗಡಿ, ಚಿಕ್ಕಬಳ್ಳಾಪುರ ಪ್ರಯಾಣಿಕರಿಗೆ ಅನುಕೂಲ

## ಜಿಬಿಎ ವ್ಯಾಪ್ತಿಯಿಂದ 65–70 ಕಿ.ಮೀ.ವರೆಗೆ ಬಿಎಂಟಿಸಿ ಸೇವೆ ವಿಸ್ತರಣೆ

**ಬೆಂಗಳೂರು, ಜೂ.22:** ಮಹಾನಗರ ಸಾರಿಗೆ ಸಂಸ್ಥೆ (ಬಿಎಂಟಿಸಿ)ಯ ಕಾರ್ಯಾಚರಣೆ ವ್ಯಾಪ್ತಿಯನ್ನು ಸರ್ಕಾರವು ಕಾಲಕಾಲಕ್ಕೆ ಸಾರ್ವಜನಿಕರ ಅಗತ್ಯಗಳಿಗೆ ಅನುಗುಣವಾಗಿ ವಿಸ್ತರಿಸುತ್ತ ಬಂದಿದೆ. ಹಿಂದಿನ ಅಧಿಸೂಚನೆಯಂತೆ ಬೆಂಗಳೂರು ನಗರ ಪಾಲಿಕೆ ವ್ಯಾಪ್ತಿಯಿಂದ 12 ಮೈಲಿ (20 ಕಿ.ಮೀ.)ವರೆಗೆ ಇದ್ದ "ಬಿಟಿಎಸ್ ಯೋಜನೆ"ಯ ಕಾರ್ಯಾಚರಣೆ ವ್ಯಾಪ್ತಿಯನ್ನು ನಂತರ 25 ಕಿ.ಮೀ.ವರೆಗೆ ವಿಸ್ತರಿಸಲಾಗಿತ್ತು. ಇದಾದ ಬಳಿಕ, ಇದೀಗ ಗ್ರೇಟರ್ ಬೆಂಗಳೂರು ಪ್ರಾಧಿಕಾರ ವ್ಯಾಪ್ತಿಯಿಂದ 40 ಕಿ.ಮೀ.ವರೆಗೆ ವಿಸ್ತರಿಸಲಾಗಿದೆ. ಈ ನಿರ್ಧಾರದ ಫಲವಾಗಿ, ನಗರದ ಕೇಂದ್ರ ಭಾಗದಿಂದ ಈವರೆಗೆ 40ರಿಂದ 42 ಕಿ.ಮೀ. ವರೆಗೆ ಕಾರ್ಯಾಚರಣೆಗೊಳಿಸಲಾಗುತ್ತಿದ್ದ ಬಸ್ ಸೇವೆಗಳನ್ನು ಸುಮಾರು 65ರಿಂದ 70 ಕಿ.ಮೀ.ವರೆಗೆ ವಿಸ್ತರಿಸಲು ಅವಕಾಶ ದೊರೆತಿದೆ.



ಈ ವಿಸ್ತರಣೆ ಹಿನ್ನೆಲೆಯಲ್ಲಿ ಕನಕಪುರ, ರಾಮನಗರ, ಚನ್ನಪಟ್ಟಣ, ಮಾಗಡಿ, ಚಿಕ್ಕಬಳ್ಳಾಪುರ, ಮಾಲೂರು ಸೇರಿದಂತೆ ಬೆಂಗಳೂರು ನಗರದ ಸುತ್ತಮುತ್ತಲಿನ ಪ್ರಮುಖ ಜಿಲ್ಲಾ ಹಾಗೂ ತಾಲ್ಲೂಕು ಕೇಂದ್ರಗಳಿಗೆ ಬಿಎಂಟಿಸಿ ಸೇವೆಯನ್ನು ಯಶಸ್ವಿಯಾಗಿ ವಿಸ್ತರಿಸಿದೆ. ಇದರಿಂದ ಸಾವಿರಾರು ಪ್ರಯಾಣಿಕರಿಗೆ ಅನುಕೂಲವಾಗಿದ್ದು, ನಗರ ಹಾಗೂ ನಗರ ಹೊರವಲಯಗಳ ನಡುವಿನ ಸಂಪರ್ಕ ಮತ್ತಷ್ಟು ಸುಗಮವಾಗಿದೆ.

ಹೊಸ ಕಾರ್ಯಾಚರಣೆ ವ್ಯಾಪ್ತಿಯನ್ನು ಪರಿಣಾಮಕಾರಿಯಾಗಿ ನಿರ್ವಹಿಸುವ ಉದ್ದೇಶದಿಂದ ನಗರದ ಕೇಂದ್ರ ಭಾಗದಿಂದ ಸುಮಾರು 40 ಕಿ.ಮೀ.ವರೆಗಿನ ಪ್ರದೇಶವನ್ನು "ಸೀಮಿತ ವ್ಯಾಪ್ತಿ" ಹಾಗೂ ಅದರಾಚೆಗಿನ ಪ್ರದೇಶವನ್ನು "ವಿಸ್ತಾರ ವ್ಯಾಪ್ತಿ" ಎಂದು ವರ್ಗೀಕರಿಸಲಾಗಿದೆ. ಸಾರ್ವಜನಿಕರ ಹಿತದೃಷ್ಟಿಯಿಂದ ಈಗಾಗಲೇ ಜಾರಿಯಲ್ಲಿರುವ ವಿವಿಧ ಪಾಸುಗಳನ್ನು ಸೀಮಿತ ವ್ಯಾಪ್ತಿಯವರೆಗೆ ಯಾವುದೇ ಬದಲಾವಣೆ ಇಲ್ಲದೆ ಮುಂದುವರಿಸಲಾಗಿದೆ.

ಹೊಸದಾಗಿ ವಿಸ್ತರಿಸಿರುವ ಮಾರ್ಗಗಳಲ್ಲಿ ಪ್ರಯಾಣಿಸುವ ಪ್ರಯಾಣಿಕರ ಅನುಕೂಲಕ್ಕಾಗಿ ಮಾತ್ರ 2026ರ ಜೂನ್ 2ರಿಂದ "ಸಾಮಾನ್ಯ ವಿಸ್ತಾರ" ದೈನಿಕ, ಸಾಪ್ತಾಹಿಕ ಹಾಗೂ ಮಾಸಿಕ ಪಾಸುಗಳನ್ನು ಪರಿಚಯಿಸಲಾಗಿದೆ. ಪ್ರಸ್ತುತ ಬಿಎಂಟಿಸಿ ಒಟ್ಟು 1,819 ಮಾರ್ಗಗಳಲ್ಲಿ 6,295 ಅನುಸೂಚಿಗಳನ್ನು ಕಾರ್ಯಾಚರಣೆಗೊಳಿಸುತ್ತಿದ್ದು, ಅವುಗಳಲ್ಲಿ 96 ಮಾರ್ಗಗಳ 216 ಅನುಸೂಚಿಗಳು ವಿಸ್ತಾರ ವ್ಯಾಪ್ತಿಯಲ್ಲಿ ಸಂಚರಿಸುತ್ತಿವೆ. 2026ರ ಜೂನ್ 2ರಿಂದ ಜೂನ್ 21ರವರೆಗೆ ಸಾಮಾನ್ಯ ವಿಸ್ತಾರ ಪಾಸುಗಳ ಮಾರಾಟದ ವಿವರಗಳು ಈ ಕೆಳಗಿನಂತಿವೆ:– ಸಾಮಾನ್ಯ ವಿಸ್ತಾರ ದೈನಿಕ ಪಾಸು (120 ರೂ.) – 29 ಸಾಮಾನ್ಯ ವಿಸ್ತಾರ ಸಾಪ್ತಾಹಿಕ ಪಾಸು (ರೂ.550), ಸಾಮಾನ್ಯ ಮಾಸಿಕ ಪಾಸು (ರೂ.1,200) – 60,400 – ಸಾಮಾನ್ಯ ವಿಸ್ತಾರ ಮಾಸಿಕ ಪಾಸು (ರೂ.1,500) – 160 ಮೇಲಿನ ಅಂಕಿ–ಅಂಶಗಳಿಂದ ಸ್ಪಷ್ಟವಾಗುವಂತೆ, ಸಾಮಾನ್ಯ ಮಾಸಿಕ ಪಾಸನ್ನು ಹೆಚ್ಚಿನ ಸಂಖ್ಯೆಯ ಪ್ರಯಾಣಿಕರು ಎಂದಿನಂತೆ ಬಳಸುತ್ತಿದ್ದು, ಅದರ ದರದಲ್ಲಿ ಯಾವುದೇ ಹೆಚ್ಚಳ ಮಾಡಲಾಗಿಲ್ಲ. ಹೊಸದಾಗಿ ಪರಿಚಯಿಸಿರುವ 'ಸಾಮಾನ್ಯ ವಿಸ್ತಾರ' ಪಾಸುಗಳು ಕೇವಲ ವಿಸ್ತಾರ ವ್ಯಾಪ್ತಿಯ ಮಾರ್ಗಗಳಲ್ಲಿ ಸಂಚರಿಸುವ ಪ್ರಯಾಣಿಕರಿಗಾಗಿ ಮಾತ್ರ ಜಾರಿಗೊಳಿಸಲಾಗಿದೆ. ಆದ್ದರಿಂದ, ಸಾಮಾನ್ಯ ಮಾಸಿಕ ಪಾಸಿನ ದರವನ್ನು ಹೆಚ್ಚಿಸಲಾಗಿದೆ ಎಂಬ ರೀತಿಯ ಯಾವುದೇ ಮಾಹಿತಿ ವಾಸ್ತವಕ್ಕೆ ದೂರವಾಗಿದೆ. ಪ್ರತಿನಿತ್ಯ ಸೀಮಿತ ವ್ಯಾಪ್ತಿಯಲ್ಲಿ ಸಂಚರಿಸುವ ಲಕ್ಷಾಂತರ ಪ್ರಯಾಣಿಕರಿಗೆ ಯಾವುದೇ ಹೆಚ್ಚುವರಿ ಆರ್ಥಿಕ ಹೊರೆಯಾಗದಂತೆ ಬಿಎಂಟಿಸಿ ಕ್ರಮ ಕೈಗೊಂಡಿದ್ದು, ಹೊಸ ವಿಸ್ತಾರ ಪ್ರದೇಶದ ಪ್ರಯಾಣಿಕರ ಅನುಕೂಲಕ್ಕಾಗಿ ಮಾತ್ರ ಪ್ರತ್ಯೇಕ ಪಾಸು ವ್ಯವಸ್ಥೆಯನ್ನು ಜಾರಿಗೊಳಿಸಲಾಗಿದೆ.ಈ ಕುರಿತು ಸಾರ್ವಜನಿಕರು ಹಾಗೂ ಪ್ರಯಾಣಿಕರು ವಾಸ್ತವ ಮಾಹಿತಿಯನ್ನು ಅರಿತು ಸಹಕರಿಸುವಂತೆ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ ಮನವಿ ಮಾಡುತ್ತದೆ.

## ರಾಜಕೀಯ ವಿವಾದ: ಧರ್ಮಸ್ಥಳದ ಪಾವಿತ್ರ್ಯಕ್ಕೆ ಧಕ್ಕೆ ತರಬೇಡಿ ಸುರೇಶ್‌ಕುಮಾರ್ ಮನವಿ

**ಬೆಂಗಳೂರು, ಜೂ.22:** ವಿಧಾನ ಪರಿಷತ್ ಚುನಾವಣೆಯಲ್ಲಿ ನಡೆದಿದೆ ಎನ್ನಲಾದ ಅಡ್ಡಮತದಾನದ ವಿವಾದ ಮತ್ತು ದ್ರೋಹಿಗಳನ್ನು ಪತ್ತೆಹಚ್ಚಲು ಬಿಜೆಪಿ ಶಾಸಕರನ್ನು ಧರ್ಮಸ್ಥಳಕ್ಕೆ ಕರೆದೊಯ್ದು ಅಣೆ–ಪ್ರಮಾಣ ಮಾಡಿಸುವ ಚರ್ಚೆಗಳ ಕುರಿತು ಬಿಜೆಪಿ ಹಿರಿಯ ನಾಯಕ ಹಾಗೂ ಶಾಸಕ ಎಸ್.ಸುರೇಶ್ ಕುಮಾರ್ ಆಕ್ಷೇಪ ವ್ಯಕ್ತಪಡಿಸಿದ್ದಾರೆ.



ಈ ಬಗ್ಗೆ ಮಾಧ್ಯಮಗಳ ಜತೆ ಮಾತನಾಡಿದ ಅವರು, ಯಾರೋ ಕೆಲವರು ತಾಯಿ ಸಮಾನವಾದ ಪಕ್ಷಕ್ಕೆ ಅಡ್ಡಮತದಾನದ ಮೂಲಕ ದ್ರೋಹ ಮಾಡಿದ್ದಾರೆ ಎಂಬ ಭಾರಿ ನೋವು ನಮ್ಮ ರಾಜ್ಯಾಧ್ಯಕ್ಷರಿಗೆ ಇದೆ. ಆ ದ್ರೋಹಿಗಳನ್ನು ಪತ್ತೆ ಹಚ್ಚಲು ಧರ್ಮಸ್ಥಳದಲ್ಲಿ ಶಾಸಕಾಂಗ ಸಭೆ ನಡೆಸಿ ಪ್ರಮಾಣ ಮಾಡಿಸುವ ಆಲೋಚನೆ ನಡೆದಿರುವುದು ನಿಜ. ಪಕ್ಷಕ್ಕೆ ದ್ರೋಹ ಮಾಡಿದವರು ಮಂಜುನಾಥನ ಸನ್ನಿಧಿಯಲ್ಲೂ ಸುಳ್ಳು ಪ್ರಮಾಣ ಮಾಡಿದರೆ ಏನು ಮಾಡುವುದು. ರಾಜಕೀಯ ವಿವಾದಗಳಿಗೆ ಧರ್ಮ ಕ್ಷೇತ್ರಗಳನ್ನು ಎಳೆದು ತಂದು ಧರ್ಮಸ್ಥಳದ ಪವಿತ್ರತೆಗೆ ಧಕ್ಕೆ ತರಬೇಡಿ. ನನ್ನ ರಾಜಕೀಯ ನಿಷ್ಠೆ ಏನಿದ್ದರೂ ಪಕ್ಷಕ್ಕೆ ಮಾತ್ರ. ಪಕ್ಷ ನಮಗೆ ತಾಯಿ ಸಮಾನ. ಧರ್ಮಸ್ಥಳಕ್ಕೆ ತನ್ನದೇ ಆದ ಪವಿತ್ರತೆ ಹಾಗೂ ಸುದೀರ್ಘ ಇತಿಹಾಸವಿದೆ. ಒಂದು ರಾಜಕೀಯ ಪಕ್ಷವಾಗಿ ಧರ್ಮಸ್ಥಳ ಕ್ಷೇತ್ರವನ್ನು ಇಂತಹ ರಾಜಕೀಯ ವಿಚಾರಗಳಿಗೆ ಬಳಸಿಕೊಳ್ಳಬಾರದು ಎಂದು ಅಭಿಪ್ರಾಯಪಟ್ಟಿದ್ದಾರೆ.

ನನ್ನ ಪ್ರಾಮಾಣಿಕ ಅನಿಸಿಕೆಯನ್ನು ಈಗಾಗಲೇ ಪಕ್ಷದ ಆಂತರಿಕ ವೇದಿಕೆಯಲ್ಲೂ ಮುಕ್ತವಾಗಿ ಹೇಳಿದ್ದೇನೆ. ಆದರೆ, ಒಂದು ವೇಳೆ ಪಕ್ಷವೇ ಧರ್ಮಸ್ಥಳದಲ್ಲಿ ಶಾಸಕರ ಸಭೆ ಮಾಡಲು ಅಧಿಕೃತವಾಗಿ ತೀರ್ಮಾನಿಸಿದರೆ, ನಾನು ಬೆಂಗಳೂರಿನಿಂದ ಧರ್ಮಸ್ಥಳದವರೆಗೆ ಪಾದಯಾತ್ರೆ ಮಾಡಲು ಸಿದ್ಧನಿದ್ದೇನೆ ಎಂದಿದ್ದಾರೆ.

## ಡಿನೋಟಿಫಿಕೇಷನ್ ಬಗ್ಗೆ ತಪ್ಪು ಮಾಹಿತಿ ನೀಡಬೇಡಿ: ಸಿಎಂ ವಿರುದ್ಧ ಯತ್ನಾಳ್ ಕಿಡಿ

**ಬೆಂಗಳೂರು, ಜೂ.22:** ಈ ಹಿಂದೆ ದೇವನಹಳ್ಳಿಯ ರೈತರು ಭೂ ಸ್ವಾದೀನದ ವಿರುದ್ಧ ಹೋರಾಟ ಮಾಡಿದಾಗ ಸರ್ಕಾರ ಭೂ ಸ್ವಾಧೀನವನ್ನು ಕೈಬಿಟ್ಟಿತ್ತು. ಎರಡನೆಯದಾಗಿ, ಡಿನೋಟಿಫಿಕೇಷನ್ ಮಾಡಿದರೆ ಜೈಲಿಗೆ ಹೋಗುತ್ತಾರೆ ಎಂದು ತಪ್ಪು ಮಾಹಿತಿ ನೀಡಬೇಡಿ ಎಂದು ಸಿಎಂ ಡಿಕೆ ಶಿವಕುಮಾರ್ ವಿರುದ್ಧ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಕಿಡಿಕಾರಿದ್ದಾರೆ.

ಮುಖ್ಯಮಂತ್ರಿಗಳೇ, ಪರಿಸರ ನಾಶ, ರೈತರಿಗೆ ಸಂಕಷ್ಟವಾಗುವ ಯೋಜನೆಗಳನ್ನು ಸಚಿವ ಸಂಪುಟದಲ್ಲಿ ಚರ್ಚೆ ಮಾಡಿ ಭೂ ಸ್ವಾಧೀನವನ್ನು ಕೈಬಿಟ್ಟು, ಡಿನೋಟಿಫೈ ಮಾಡಬಹುದು. ಡಿನೋಟಿಫಿಕೇಷನ್ ಮಾಡುವುದರಿಂದ ಖಾಸಗಿ ವ್ಯಕ್ತಿಗಳಿಗೆ, ಸಂಸ್ಥೆಗಳಿಗೆ, ಕೈಗಾರಿಕೆಗಳಿಗೆ, ರಿಯಲ್ ಎಸ್ಟೇಟ್ ಮಾಫಿಯಾ ಅನುಕೂಲವಾಗುವ ಸಂದರ್ಭದಲ್ಲಿ ಮಾತ್ರ ನಿಮ್ಮ ತರ್ಕಾನುಸಾರ ಡಿನೋಟಿಫಿಕೇಷನ್ ಮಾಡುವುದು ತಪ್ಪಾಗಿದ್ದರೆ ದೇವನಹಳ್ಳಿ ರೈತರ ಭೂ ಸ್ವಾಧೀನವನ್ನು ಹಿಂದಿನ ಮುಖ್ಯಮಂತ್ರಿ ಕೈಬಿಟ್ಟಾಗ ಏಕೆ ಮಾತನಾಡಲಿಲ್ಲ? ಬಿಡದಿಯ ಫಲವತ್ತಾದ ಜಮೀನಿನಲ್ಲಿ ವಿವಿಧ ಬಗೆ ಬೆಳೆಗಳನ್ನು ಬೆಳೆಯಬಹುದು. ಅಲ್ಲದೆ, ಇಲ್ಲಿಂದ ನಿತ್ಯ ಬೆಂಗಳೂರಿಗೆ ಲಕ್ಷಗಟ್ಟಲೆ ಹಾಲು ಸರಬರಾಜು ಆಗುತ್ತೆ. ಸಪೋಟ, ಹಲಸು, ಪೇರಳೆ, ರಾಗಿ, ಬಾಳೆ ಬೆಳೆದು ರೈತರು ಸಮೃದ್ಧರಾಗಿದ್ದರೆ. ರೇಷ್ಮೆ ಕೃಷಿ ರೈತರ ಆದಾಯವನ್ನು ಹೆಚ್ಚಿಸಿದೆ ಎಂದು ಯತ್ನಾಳ್ ತಿರುಗೇಟು ನೀಡಿದ್ದಾರೆ. ರೈತರು ಆರ್ಥಿಕವಾಗಿ ಸಧೃಡರಾಗಿದ್ದರೆ. ಭೂತಾಯಿ ಬಿಡದಿಯ ಮಣ್ಣಿನ ಮಕ್ಕಳನ್ನು ಹರಸಿದ್ದಾಳೆ. ಕೃಷಿ ಆದಾಯದಿಂದ ಮಕ್ಕಳ ವಿದ್ಯಾಭ್ಯಾಸ ಆಗಿದೆ. ತಾಲೂಕಿನ ಆರ್ಥಿಕತೆ ಕೃಷಿಯ ಮೇಲೆ ಅವಲಂಬಿತವಾಗಿದೆ. ಮುಖ್ಯಮಂತ್ರಿಗಳು ಮೊಸಳೆ ಕಣ್ಣೀರು ಹಾಕುವುದನ್ನು ಬಿಟ್ಟು ವಾಸ್ತವಿಕವಾಗಿ ಮಾತನಾಡಬೇಕೆ ಹೊರತು ಮಾಧ್ಯಮಗಳ ಮುಂದೆ ಸುಳ್ಳನ್ನು ಹೇಳಬಾರದು ಎಂದು ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ತಿವಿದಿದ್ದಾರೆ.

## ವಿಶ್ರಾಂತಿ,ಚಿಕಿತ್ಸೆಗೆ ಮೊರೆಹೋದ ಮಾಜಿ ಸಿಎಂ ಸಿದ್ದರಾಮಯ್ಯ



**ಬೆಂಗಳೂರು,ಜೂ.22:** ರಾಜ್ಯದಲ್ಲಿ ಹೊಸ ಸರ್ಕಾರ ರಚನೆಯ ಕಸರತ್ತು, ರಾಜಕೀಯ ಓಡಾಟ ಮತ್ತು ಜಂಜಾಟಗಳು ಮುಗಿಯುತ್ತಿದ್ದಂತೆಯೇ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ರಿಲ್ಯಾಕ್ಸ್ ಮೂಡ್‌ಗೆ ಜಾರಿದ್ದಾರೆ. ಸತತ ರಾಜಕೀಯ ಚಟುವಟಿಕೆಗಳಿಂದ ದೂರವಿದ್ದು, ಐದು ದಿನ ಪ್ರಕೃತಿ ಚಿಕಿತ್ಸೆ ಪಡೆಯಲು ಭಾನುವಾರ ರಾತ್ರಿಯೇ ಆಪ್ತರೊಂದಿಗೆ ಕೇರಳಕ್ಕೆ ಪ್ರಯಾಣ ಬೆಳೆಸಿದ್ದಾರೆ. ಸಿದ್ದರಾಮಯ್ಯ ಜೊತೆಯಲ್ಲಿ ಎಚ್.ಸಿ. ಮಹದೇವಪ್ಪ, ಸಚಿವ ಕೆ.ಜೆ. ಜಾರ್ಜ್, ಶಾಸಕ ಎ.ಎಸ್. ಪೊನ್ನಣ್ಣ, ಹಂಪನಗೌಡ ಬಾದರ್ಲಿ ಹಾಗೂ ವೆಂಕಟೇಶ್ ಕೂಡ ತೆರಳಿದ್ದಾರೆ. ಜೂನ್ ಕೊನೆಯ ವಾರದಲ್ಲಿ ಮರಳಿ ರಾಜಧಾನಿ ಬೆಂಗಳೂರಿಗೆ ಆಗಮಿಸಲಿದ್ದಾರೆ.

## ಬಸ್ ಟಿಕೆಟ್ ದರ ಏರಿಕೆ: ಸಾರಿಗೆ ಸಂಸ್ಥೆಗಳಿಂದ ಸರ್ಕಾರಕ್ಕೆ ಪ್ರಸ್ತಾವನೆ

- ಕೆಎಸ್‌ಆರ್‌ಟಿಸಿಯಿಂದ ಶೇ.33, ಬಿಎಂಟಿಸಿಯಿಂದ ಶೇ.44ರಷ್ಟು ಹೆಚ್ಚಳಕ್ಕೆ ಕೋರಿಕೆ


**ಬೆಂಗಳೂರು, ಜೂ.22:** ಅಗತ್ಯ ವಸ್ತುಗಳ ದರ ಏರಿಕೆಯಿಂದ ಬಸವಳಿದಿರುವ ಶ್ರೀಸಾಮಾನ್ಯನಿಗೆ ಶೀಘ್ರದಲ್ಲೇ ಕೆಎಸ್‌ಆರ್‌ಟಿಸಿ ಮತ್ತು ಬಿಎಂಟಿಸಿ ಪ್ರಯಾಣದರ ಏರಿಕೆ ಬಿಸಿ ತಟ್ಟಲಿದೆ. ಡೀಸೆಲ್ ದರ ಏರಿಕೆಯಾಗಿರುವ ಹಿನ್ನೆಲೆಯಲ್ಲಿ ಕೆಎಸ್‌ಆರ್‌ಟಿಸಿ ಶೇ.33ರಷ್ಟು ಹಾಗೂ ಬಿಎಂಟಿಸಿ ಶೇ.44ರಷ್ಟು ಟಿಕೆಟ್ ದರ ಏರಿಕೆ ಮಾಡುವಂತೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿವೆ. ತೀವ್ರ ಆರ್ಥಿಕ ನಷ್ಟ ಹಾಗೂ ಡೀಸೆಲ್ ದರ ಏರಿಕೆಯಿಂದ ರಾಜ್ಯ ಸಾರಿಗೆ ಸಂಸ್ಥೆ ನಷ್ಟ ಅನುಭವಿಸುತ್ತಿದೆ. ಈ ಹಿನ್ನೆಲೆಯಲ್ಲಿ ಕೆಎಸ್‌ಆರ್‌ಟಿಸಿಯಿಂದ ನಾಲ್ಕು ನಿಗಮಗಳು ಹಾಗೂ ಬಿಎಂಟಿಸಿ ಟಿಕೆಟ್ ದರ ಏರಿಕೆ ಮಾಡುವಂತೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಪ್ರಸ್ತಾವನೆ ಸಲ್ಲಿಸಿದೆ.

ಇತ್ತೀಚೆಗಷ್ಟೇ ನಡೆದ ಸಚಿವ ಸಂಪುಟ ಸಭೆಯಲ್ಲಿ ಕೆಎಸ್‌ಆರ್‌ಟಿಸಿ ಮತ್ತು ಬಿಎಂಟಿಸಿ ಬಸ್ ಟಿಕೆಟ್ ದರ ಏರಿಕೆ ಮಾಡುವ ಕುರಿತು ಶೀಘ್ರದಲ್ಲೇ ನಿರ್ಧಾರ ಕೈಗೊಳ್ಳುವುದಾಗಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದ್ದರು. ಇದರ ಬೆನ್ನಲ್ಲೇ ಕೆಎಸ್ ಆರ್ ಟಿಸಿ ಮತ್ತು ಬಿಎಂಟಿಸಿ ಟಿಕೆಟ್ ದರ ಏರಿಕೆಗೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಸರ್ಕಾರ ದರ ಏರಿಕೆಗೆ ಒಪ್ಪಿಗೆ ಸೂಚಿಸಿದರೆ, ಬಸ್ ಪ್ರಯಾಣದರ ಏರಿಕೆಯಾಗುವುದು ನಿಶ್ಚಿತವಾಗಲಿದೆ. ರಾಜ್ಯ ಸರ್ಕಾರ ಈ ಹಿಂದೆ 2025ರ ಜನವರಿ 5ರಿಂದ ಜಾರಿಗೆ ಬರುವಂತೆ ಸರ್ಕಾರಿ ಬಸ್‌ಗಳ ಟಿಕೆಟ್ ದರವನ್ನು ಶೇ. 15ರಷ್ಟು ಹೆಚ್ಚಳ ಮಾಡಿ ಆದೇಶ ಹೊರಡಿಸಿತ್ತು. ಈಗ ಸಾರಿಗೆ ಸಂಸ್ಥೆಗಳು ಮತ್ತೊಮ್ಮೆ ದರ ಪರಿಷ್ಕರಣೆಗಾಗಿ ಸರ್ಕಾರಕ್ಕೆ ಹೊಸ ಪ್ರಸ್ತಾವನೆಯನ್ನು ಸಲ್ಲಿಸಿವೆ. ಸಾರಿಗೆ ನಿಗಮಗಳು ದರ ಏರಿಕೆಯನ್ನು ಸಮರ್ಥಿಸಿಕೊಳ್ಳುತ್ತಿದ್ದು, ತಕ್ಷಣವೇ ಈ ಕ್ರಮ ಕೈಗೊಳ್ಳದಿದ್ದರೆ ಸಂಸ್ಥೆಗಳು ಸಂಪೂರ್ಣ ಆರ್ಥಿಕ ಸಂಕಷ್ಟಕ್ಕೆ ಸಿಲುಕಲಿವೆ ಎಂದು ಸಿಎಂಗೆ ಮನವರಿಕೆ ಮಾಡಿಕೊಟ್ಟಿವೆ.

**ದರ ಏರಿಕೆಗೆ ಕಾರಣಗಳೇನು?**

ಇಂಧನ ದರ ಏರಿಕೆಯಿಂದಾಗಿರುವ ಹೊರೆ ಕಡಿಮೆಗೊಳಿಸಲು ಕ್ರಮ. ಕೇವಲ ಹತ್ತು ದಿನಗಳ ಅವಧಿಯಲ್ಲಿ ನಾಲ್ಕು ಬಾರಿ ಡೀಸೆಲ್ ದರ ಏರಿಕೆಯಾಗಿದೆ. ಪ್ರತಿ ಲೀಟರ್ ಡೀಸೆಲ್ ಬೆಲೆಯಲ್ಲಿ ಬರೋಬ್ಬರಿ 7.81 ರೂ. ಏರಿಕೆ. ಪ್ರತಿ ನಿತ್ಯ ನಾಲ್ಕೂ ನಿಗಮಗಳ ಬಸ್‌ಗಳಿಗೆ 13 ಲಕ್ಷ ಲೀಟರ್‌ಗೂ ಹೆಚ್ಚು ಡೀಸೆಲ್ ಬಳಕೆಯಾಗುತ್ತಿದೆ. ಈ ಇಂಧನ ದರ ಏರಿಕೆಯಿಂದಾಗಿ ಸಾರಿಗೆ ನಿಗಮಗಳಿಗೆ ತಿಂಗಳಿಗೆ 40 ಕೋಟಿ ರೂ. ಹಾಗೂ ವರ್ಷಕ್ಕೆ ಬರೋಬ್ಬರಿ 480 ಕೋಟಿ ರೂ. ಹೆಚ್ಚುವರಿ ಆರ್ಥಿಕ ಹೊರೆ ಬೀಳುತ್ತಿದೆ. ಸರ್ಕಾರದ ಮಹತ್ವಾಕಾಂಕ್ಷಿ ಶಕ್ತಿ ಉಚಿತ ಬಸ್ ಪ್ರಯಾಣ ಯೋಜನೆ, ಗಗನಕ್ಕೇರುತ್ತಿರುವ ನಿರ್ವಹಣಾ ವೆಚ್ಚ ಹಾಗೂ ಸಾರಿಗೆ ನೌಕರರ ವೇತನ ಪರಿಷ್ಕರಣೆಯಿಂದ ಸಾರಿಗೆ ನಿಗಮಗಳ ಮೇಲಿನ ಆರ್ಥಿಕ ಹೊರೆ. ಇವೆಲ್ಲದರ ನಡುವೆ ನಷ್ಟದ ಸುಳಿಗೆ ಸಿಲುಕಿರುವ ಸಾರಿಗೆ ಸಂಸ್ಥೆಗಳನ್ನು ಉಳಿಸಿಕೊಳ್ಳಲು ಟಿಕೆಟ್ ದರ ಏರಿಕೆ ಅನಿವಾರ್ಯ ಎಂಬುದು ಅಧಿಕಾರಿಗಳ ವಾದ.

# ಬೀದರ್ ಜಿಲ್ಲೆಯಲ್ಲಿ ರಸಗೊಬ್ಬರ ಕೊರತೆ: ರೈತರ ಪರದಾಟ



**ಬೀದರ್, ಜೂ. 22:** ಜಿಲ್ಲೆಯಾದ್ಯಂತ ರಸಗೊಬ್ಬರಕ್ಕೆ ಭಾರಿ ಕೊರತೆ ಎದುರಾಗಿದೆ. ಲ್ಲೆಯಲ್ಲಿ ಒಟ್ಟು 4.12 ಲಕ್ಷ ಹೆಕ್ಟೇರ್ ಬಿತ್ತನೆ ಪ್ರದೇಶ ಗುರುತಿಸಲಾಗಿದೆ. ಜೂನ್‌ನಲ್ಲಿ ಶೇ 51ರಷ್ಟು ಕೊರತೆ ಮಳೆಯಾಗಿದ್ದು, ಈಗಾಗಲೇ ಬಿತ್ತನೆಗೆ ಹಿನ್ನಡೆಯಾಗಿದೆ. ಜಿಲ್ಲೆಯಾದ್ಯಂತ ಶೇ 5ರಷ್ಟು ಪ್ರದೇಶದಲ್ಲಷ್ಟೇ ಬಿತ್ತನೆಯಾಗಿದೆ. ಮಳೆಯಾಗದ ಕಾರಣ ಬಿತ್ತನೆಯಾಗಿರುವ ಸ್ಥಳಗಳಲ್ಲೂ ಸಸಿಗಳು ಮೇಲೇಳುತ್ತಿಲ್ಲ.

ನೆಲ ಹದ ಮಾಡಿಕೊಂಡು ಬಿತ್ತನೆಗೆ ಸಿದ್ಧತೆ ಮಾಡಿಕೊಂಡಿದ್ದ ರೈತರಿಗೆ ರಸಗೊಬ್ಬರವೇ ಸಿಗುತ್ತಿಲ್ಲ. ಒಂದೆರೆಡು ಮಳೆಯಾದ ನಂತರ ಬಿತ್ತನೆ ಮಾಡಿದರಾಯಿತು ಎಂದು ರೈತರು ರಸಗೊಬ್ಬರ ಖರೀದಿಗೆ ಮುಂದಾಗಿದ್ದಾರೆ. ಆದರೆ, ಅದು ಕೂಡ ಸಿಗುತ್ತಿಲ್ಲ. ಅದರಲ್ಲೂ ಡಿಎಪಿ ಗೊಬ್ಬರಕ್ಕೆ ಪರದಾಡುವಂಥ ಪರಿಸ್ಥಿತಿ ಇದೆ. ಒಂದೆಡೆ ಮಳೆಯಿಲ್ಲದೆ ರೈತರು ಚಿಂತಕ್ರಾಂತರಾಗಿದ್ದಾರೆ. ಇನ್ನೊಂದೆಡೆ ರಸಗೊಬ್ಬರ ಸಿಗದೇ ಪೇಚಿಗೆ ಸಿಲುಕಿದ್ದಾರೆ.

ಮುಂಗಾರಿನಲ್ಲಿ ಬೀದರ್ ಜಿಲ್ಲೆಗೆ 21,559 ಮೆಟ್ರಿಕ್ ಟನ್ ರಸಗೊಬ್ಬರದ ಅಗತ್ಯವಿದೆ. ಆದರೆ, ಇದುವರೆಗೆ 10,183 ಮೆಟ್ರಿಕ್ ಟನ್ ಗೊಬ್ಬರವಷ್ಟೇ ಪೂರೈಕೆಯಾಗಿದೆ.

ಪ್ರತಿ ವರ್ಷದಂತೆ ಈ ವರ್ಷವೂ ಶೇ 75ರಷ್ಟು ರಸಗೊಬ್ಬರ ಖಾಸಗಿ ಮಳಿಗೆಗಳ ಮೂಲಕ ಮಾರಾಟ ಮಾಡಿದರೆ, ಶೇ 25ರಷ್ಟು ಪಿಕೆಪಿಎಸ್‌ಗಳ ಮೂಲಕ ವಿತರಿಸಲು ಉದ್ದೇಶಿಸಲಾಗಿದೆ. ಆದರೆ, ಕೇಂದ್ರದಿಂದ ರಸಗೊಬ್ಬರ ಪೂರೈಕೆಯಾಗದ ಕಾರಣ ಬಹುತೇಕ ಪಿಕೆಪಿಎಸ್‌ಗಳಲ್ಲಿ ರಸಗೊಬ್ಬರವೇ ಇಲ್ಲ. ಇದೇ ಕಾರಣಕ್ಕಾಗಿ ಇತ್ತೀಚೆಗೆ ಬೀದರ್ ತಾಲ್ಲೂಕಿನ ಜನವಾಡ, ಔರಾದ್ ತಾಲ್ಲೂಕಿನ ಕೌಠಾದಲ್ಲಿ ರೈತರು ಪ್ರತಿಭಟನೆ ನಡೆಸಿದ್ದರು. ಆದರೂ, ಪರಿಸ್ಥಿತಿ ಸುಧಾರಿಸಿಲ್ಲ.

ಖಾಸಗಿ ಮಳಿಗೆಗಳಲ್ಲಿ ರಸಗೊಬ್ಬರದ ದಾಸ್ತಾನು ಹೆಚ್ಚಿಗೆ ಇಲ್ಲ. ಇದನ್ನೇ ಬಂಡವಾಳ ಮಾಡಿಕೊಂಡು ಕೆಲವರು ಹೆಚ್ಚಿನ ಬೆಲೆಗೆ ಮಾರಾಟ ಮಾಡುತ್ತಿದ್ದಾರೆ ಎಂದು ಆರೋಪಿಸಿರುವ ರೈತರು, '50 ಕೆಜಿ ಡಿಎಪಿ ಗೊಬ್ಬರಕ್ಕೆ ಸರ್ಕಾರ ?1,350 ಬೆಲೆ ನಿಗದಿಪಡಿಸಿದೆ. ಆದರೆ, ?1,800 ರಿಂದ ?2,000ಕ್ಕೆ ಮಾರಾಟ ಮಾಡಲಾಗುತ್ತಿದೆ. ಇದನ್ನು ಯಾರೂ ತಡೆಯುವವರೇ ಇಲ್ಲದಂತಾಗಿದೆ' ಎಂದು ಅಳಲು ತೋಡಿಕೊಂಡರು.

ಸೊಸೈಟಿಗಳಲ್ಲಿ ಗೊಬ್ಬರ ಸಿಗುತ್ತಿಲ್ಲ. ಗಾಂಧಿ ಗಂಜ್‌ನಲ್ಲಿ ಖಾಸಗಿ ಮಳಿಗೆಗಳಲ್ಲೂ ಗೊಬ್ಬರ ಸಿಗುತ್ತಿಲ್ಲ. ಗೊಬ್ಬರಕ್ಕಾಗಿ ಬಹಳ ಸಮಸ್ಯೆಯಾಗುತ್ತಿದೆ. ಜಿಲ್ಲಾಡಳಿತ ಗೊಬ್ಬರ ಒದಗಿಸಿಕೊಡಬೇಕು. ಏಕೆಂದರೆ ಯಾವುದೇ ಸಂದರ್ಭದಲ್ಲಿ ಮಳೆಯಾಗಬಹುದು ಎಂದು ರೈತ ರಮೇಶ್ ಹೇಳಿದರು.

ಈ ಕುರಿತು ಜಂಟಿ ಕೃಷಿ ಅಧಿಕಾರಿ ದೇವಿಕಾ ಆರ್. ಅವರನ್ನು ಕೇಳಿದರೆ, ಮಧ್ಯ ಪ್ರಾಚ್ಯದಲ್ಲಿ ನಡೆಯುತ್ತಿರುವ ಯುದ್ಧದ ಪರಿಣಾಮ ಗೊಬ್ಬರವೂ ಬರುತ್ತಿಲ್ಲ. ಗೊಬ್ಬರ ತಯಾರಿಕೆಗೆ ಬೇಕಾದ ಕಚ್ಚಾವಸ್ತುಗಳು ಬರುತ್ತಿಲ್ಲ ಎನ್ನುತ್ತಿದ್ದಾರೆ.

ಈ ಗೊಂದಲಗಳ ನಡುವೆ ಒಂದುವೇಳೆ ಜಿಲ್ಲೆಯಾದ್ಯಂತ ಮಳೆ ಚುರುಕುಗೊಂಡರೆ ರಸಗೊಬ್ಬರಕ್ಕೆ ಮತ್ತಷ್ಟು ಬೇಡಿಕೆ ಸೃಷ್ಟಿಯಾಗುತ್ತದೆ. ಇದೇ ಪರಿಸ್ಥಿತಿ ಇದ್ದರೆ ಸಮಸ್ಯೆ ಬಿಗಡಾಯಿಸುವ ಸಾಧ್ಯತೆಯೂ ಹೆಚ್ಚಿದೆ.

### ಕೃಷಿ ಅಧಿಕಾರಿ ಏನಂತಾರೆ?

**ಕೊಲ್ಲಿಯಲ್ಲಿ ನಡೆಯುತ್ತಿರುವ ಯುದ್ಧದ ಪರಿಣಾಮ ಡಿಎಪಿ ಗೊಬ್ಬರ ನಿಧಾನವಾಗಿ ಪೂರೈಸಲಾಗುತ್ತಿದೆ. ರೈತರು ಸಂಯುಕ್ತ ರಸಗೊಬ್ಬರ ಬಳಸುವುದರ ಬಗ್ಗೆ ಯೋಚಿಸಬೇಕು' ಎಂದು ಜಂಟಿ ಕೃಷಿ ನಿರ್ದೇಶಕಿ ದೇವಿಕಾ ಆರ್. ತಿಳಿಸಿದ್ದಾರೆ.**

**ಡಿಎಪಿ ತಯಾರಿಸಲು ಕಚ್ಚಾ ವಸ್ತುಗಳು ಕೂಡ ಬರುತ್ತಿಲ್ಲ. ಸಂಯುಕ್ತ ಗೊಬ್ಬರಗಳಾದ 12.32.16, 20.03.13, 15.15.15, 17.17.17 ಇವುಗಳನ್ನು ಬಳಸಬಹುದು. ಇವುಗಳ ಬಳಕೆಯಿಂದಲೂ ಇಳುವರಿ ಹೆಚ್ಚಿಗೆ ಬರುತ್ತದೆ. ರಸಗೊಬ್ಬರದ ಕೊರತೆ ಬಗ್ಗೆ ಈಗಾಗಲೇ ಸರ್ಕಾರದ ಗಮನಕ್ಕೂ ತರಲಾಗಿದೆ ಎಂದು ಮಾಹಿತಿ ನೀಡಿದರು. ರಫೀಕ್, ರೈತ ಚಾಂಬೋಳಬೇಕಾದಷ್ಟು ರಸಗೊಬ್ಬರ ಸಿಗುತ್ತಿಲ್ಲ. ರಸಗೊಬ್ಬರ ಮಳಿಗೆಗಳಲ್ಲಿ ಹೆಚ್ಚಿನ ಬೆಲೆಗೆ ಮಾರಾಟ ಮಾಡುತ್ತಿದ್ದಾರೆ. ಇದರಿಂದ ರೈತರಿಗೆ ತೊಂದರೆಯಾಗುತ್ತಿದೆ.**

# ವಿವಿಧ ಬೇಡಿಕೆಗಳಿಗೆ ಆಗ್ರಹಿಸಿ ಬಿಜೆಪಿ ನೇತೃತ್ವದಲ್ಲಿ ರಸ್ತೆತಡೆ ಪ್ರತಿಭಟನೆ

**ಕಲಬುರಗಿ, ಜೂ. 22:** ರಾಜ್ಯ ಸರ್ಕಾರ, ಶಾಸಕ ಅಲ್ಲಮಪ್ರಭು ಪಾಟೀಲರ ವಿರುದ್ಧ ಹಾಗೂ ಕ್ಷೇತ್ರದ ಮಾಜಿ ಶಾಸಕ ದತ್ತಾತ್ರೇಯ ಪಾಟೀಲ್ ರೇವೂರ್ (ಅಪ್ಪುಗೌಡ) ಮೇಲಿನ ಸುಳ್ಳು ಎಫ್‌ಐಆರ್ ಖಂಡಿಸಿ ಹಾಗೂ ಅವರ ಮೇಲಿನ ಎಫ್‌ಐಆರ್ ರದ್ದುಪಡಿಸುವಂತೆ ಆಗ್ರಹಿಸಿ ಕಲಬುರಗಿ ದಕ್ಷಿಣ ಮಂಡಲ ಬಿಜೆಪಿ ಕಾರ್ಯಕರ್ತರು, ವಿವಿಧ ವಾರ್ಡ್‌ಗಳ ನಾಗರಿಕರು ನಗರದ ರಾಮಮಂದಿರ ವೃತ್ತದ ಬಳಿ ನಡೆಸುತ್ತಿದ್ದ ಪ್ರತಿಭಟನೆ ಸಂದರ್ಭದಲ್ಲಿ ಪೊಲೀಸರೊಂದಿಗೆ ಮಾತಿನ ಚಕಮಕಿ, ತಿಕ್ಕಾಟ, ನೂಕಾಟ ನಡೆದು ಕೆಲಕಾಲ ಪರಿಸ್ಥಿತಿ ಉದ್ವಿಗ್ನವಾಗಿತ್ತು.

ಕಾಂಗ್ರೆಸ್ ಆಡಳಿತದಲ್ಲಿ ನಗರದ ದಕ್ಷಿಣ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಅಭಿವೃದ್ಧಿ ಕುಂಠಿತವಾಗಿದೆ. ವಿಶೇಷವಾಗಿ ಪಾಲಿಕೆ ವ್ಯಾಪ್ತಿಗೆ ಒಳಪಡುವ ವಿವಿಧ ಬಡಾವಣೆಗಳಲ್ಲಿ ರಸ್ತೆ, ಚರಂಡಿ, ಉದ್ಯಾನವನ, ಬೀದಿ ದೀಪ ಸೇರಿ ಯಾವುದೇ ಮೂಲಸೌಲಭ್ಯ ಕಲ್ಪಿಸಲು ಸಾಧ್ಯವಾಗಿಲ್ಲ ಎಂದು ದೂರಿ ಬಿಜೆಪಿ ಕಾರ್ಯಕರ್ತರು, ವಿವಿಧ ಬಡಾವಣೆಗಳ ಜನರು ರಾಮಮಂದಿರ ಬಳಿ ನಡೆಸಿದ ಪ್ರತಿಭಟನೆ ವೇಳೆ ಆರೋಪಿಸಿದರು.

ಪೊಲೀಸರು ಮತ್ತು ಪ್ರತಿಭಟನಾ ನಿರತ ಕಾರ್ಯಕರ್ತರ ಮಧ್ಯೆ ನಡೆದ ತಿಕ್ಕಾಟ, ನೂಕಾಟದಿಂದಾಗಿ ಕೆಲಹೊತ್ತು ಉದ್ವಿಗ್ನ ಪರಿಸ್ಥಿತಿ ನಿರ್ಮಾಣವಾಗಿತ್ತು. ವಿವಿಧ ತಾಲೂಕುಗಳಿಂದ ನಗರಕ್ಕೆ ಸೇರುವ ಪ್ರಮುಖ ರಸ್ತೆಗಳ ವೃತ್ತದಲ್ಲಿ ಗುಂಡಿ ಮುಚ್ಚುವುದು, ಸ್ವಚ್ಛತೆ ಕಾಪಾಡುವುದು, ಶರಣಬಸವೇಶ್ವರ ದೇವಸ್ಥಾನದ ಬಳಿಯ ಲಾಲಗೇರಿ ಕ್ರಾಸ್‌ನಲ್ಲಿನ ರಸ್ತೆ ಡಾಂಬರೀಕರಣ ಮಾಡುವುದು, ಚರಂಡಿ ದುರಸ್ತಿ ಕಾರ್ಯ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಪ್ರತಿಭಟನಾ ನಿರತರು ಕಾಂಗ್ರೆಸ್ ಶಾಸಕ ಅಲ್ಲಮಪ್ರಭು ಪಾಟೀಲರ ಭಾವಚಿತ್ರದ ಬ್ಯಾನರ್ ಹಿಡಿದು ಅವರ ವಿರುದ್ಧ ಘೋಷಣೆ ಕೂಗಿ, ದಕ್ಷಿಣ ಕ್ಷೇತ್ರದ ಶಾಸಕರು ಯಾವುದೇ ಅಭಿವೃದ್ಧಿ ಕೆಲಸ ಮಾಡದೆ ಕೇವಲ ಇನ್ನೊಬ್ಬರನ್ನು ನಿಂದಿಸುವುದು, ತಮ್ಮ ಪಕ್ಷದ ನಾಯಕರನ್ನು ಓಲೈಸುವ ಕೆಲಸದಲ್ಲಿ ನಿರತರಾಗಿದ್ದಾರೆ. ಕ್ಷೇತ್ರದ ಜನ ಅದರಲ್ಲೂ ಕಲಬುರಗಿ ಮಹಾನಗರದ ಜನ ಬೇಸತ್ತು ಹೋಗಿದ್ದಾರೆ ಎಂದು ದೂರಿದರು.ಬೇಡಿಕೆಗಳೇನು : ಮಾಜಿ ಶಾಸಕ ದತ್ತಾತ್ರೇಯ ಪಾಟೀಲ್ ರೇವೂರ್ ಮೇಲೆ ವೈಯಕ್ತಿಕ ನಿಂದನೆ ಮಾಡಿದ ಕಿಡಿಗೇಡಿಗಳ ವಿರುದ್ಧ ಎಫ್‌ಐಆರ್ ದಾಖಲಿಸಬೇಕು, ಕೇಂದ್ರ ಬಸ್ ನಿಲ್ದಾಣದ ಎದುರಿನ ರಸ್ತೆ ಕಾಮಗಾರಿ ಪೂರ್ಣಗೊಳಿಸಬೇಕು, ವಾರ್ಡ್ 53, 54 ರಾಮಮಂದಿರ ದಿ.ಚಂದ್ರಶೇಖರ ಪಾಟೀಲ್ ರೇವೂರ್ ಮಾರ್ಗದ ರಸ್ತೆಯಿಂದ ಮೋಹನ್ ಲಾಡ್ಜ್ ವರೆಗಿನ ರಸ್ತೆಗುಂಡಿ ಮುಚ್ಚಬೇಕು, ರಸ್ತೆ ಪಕ್ಕದಲ್ಲಿರುವ ಚರಂಡಿ ದುರಸ್ತಿಗೊಳಿಸಿ, ಮಳೆ ನೀರು ಸುಗಮವಾಗಿ ಹರಿಯುವಂತೆ ಮಾಡಬೇಕು. ವಾರ್ಡ್ 54ರ ಧರಿಯಾಪುರ ಜಿಡಿಎ ಬಡಾವಣೆ ವ್ಯಾಪ್ತಿಯ ಎಲ್ಲ ಒಳರಸ್ತೆಗಳ ಡಾಂಬರೀಕರಣ ಮಾಡಬೇಕು ಎಂದು ಆಗ್ರಹಿಸಿದರು.ವಾರ್ಡ್ 52 ಅಕ್ಕಮಹಾದೇವಿ ಬಡಾವಣೆಯ ಹೊಸ ಜೇವರ್ಗಿ ರಸ್ತೆಗೆ ಸಂಪರ್ಕಿಸುವ ಮಾರ್ಗ ಡಾಂಬರೀಕರಣ ಮಾಡಬೇಕು, ಭಾಗ್ಯವಂತಿ ನಗರದಲ್ಲಿ ಮಳೆಗಾಲ ಬಂದರೆ ಮನೆಗಳಿಗೆ ನೀರು ನುಗ್ಗಿ ತೊಂದರೆಯಾಗುತ್ತಿದೆ. ತಕ್ಷಣ ಈ ಸಮಸ್ಯೆಗೆ ಪರಿಹಾರ ಒದಗಿಸಬೇಕು. ನಿರಂತರ ನೀರು ಯೋಜನೆ ಕಾಮಗಾರಿ ಕೈಗೆತ್ತಿಕೊಂಡು ಪೂರ್ಣಗೊಳಿಸಬೇಕು. ನಾಗರಿಕರಿಗೆ ಕುಡಿಯುವ ನೀರು 8–15 ದಿನಗಳಿಗೊಮ್ಮೆ ಸರಬರಾಜು ಮಾಡಲಾಗುತ್ತಿದೆ. ಪ್ರತಿ ಎರಡು ದಿನಕ್ಕೊಂದು ಬಾರಿ ಮಾಡಲು ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನಾ ಸ್ಥಳಕ್ಕೆ ಆಗಮಿಸಿದ ಪಾಲಿಕೆ ಅಧಿಕಾರಿಗಳಿಗೆ ಮನವಿಪತ್ರ ಸಲ್ಲಿಸಿದರು. ಪಾಲಿಕೆ ಸದಸ್ಯರಾದ ಮಲ್ಲು ಉದನೂರು, ರಾಜು ದೇವದುರ್ಗ, ದಕ್ಷಿಣ ಮಂಡಲ ಅಧ್ಯಕ್ಷ ಶ್ರೀನಿವಾಸ ದೇಸಾಯಿ, ಬಿಜೆಪಿ ಯುವ ಮುಖಂಡರಾದ ಮಹಾದೇವ ಬೆಳಮಗಿ, ವಿಶ್ವನಾಥ ಸಾಲೀಮಠ, ಸುಂದರ ಕುಲಕರ್ಣಿ, ರಾಜು ವಾಡೇಕರ್, ಶಿವರಾಜ ಪಾಟೀಲ ರದ್ದೆವಾಡಗಿ, ಸಿದ್ರಾಜ ಪಾಟೀಲ, ಶಿವಯೋಗಿ ನಾಗನಹಳ್ಳಿ, ಮಾಜಿ ಮೇಯರ್ ವಿಶಾಲ ದರ್ಗಿ, ಬಸವರಾಜ ಪಾಟೀಲ ಬೆಲೂರ, ಪ್ರಶಾಂತ ಪಾಟೀಲ, ಹಣಮಂತ ಪಾಟೀಲ, ಮಂಜುರೆಡ್ಡಿ, ರಾಮಚಂದ್ರ ಜಾಧವ, ಮಲ್ಲು ಜನಕೇರಿ, ರಮೇಶ ವಾಡೇಕರ, ನಾಗಲಿಂಗಯ್ಯಾ ಮಠಪತಿ, ಗಿರೀಶ ಮಾವೂರ, ಹಣಮಂತ ಪೂಜಾರಿ, ಶಿವು ಸ್ವಾಮಿ, ಕೋಟ್ನಾ ಪಾಟೀಲ, ಜ್ಯೋತಿ ಪಾಟೀಲ, ವಿಜಯಲಕ್ಷ್ಮಿ ಗೊಬ್ಬೂರ, ಸಂಜೀವ ರೆಡ್ಡಿ, ಅರವಿಂದ ನಾಯಕ, ವಿರೇಶ ನಂದಿಕೂರ, ಆನಂದ ಚವ್ಹಾಣ, ಭೀಮು ತೆಗನೂರ, ಅಭಿಷೇಕ ಸೇರಿದಂತೆ ನೂರಾರು ಮುಖಂಡರು, ಕಾರ್ಯಕರ್ತರು, ನಾಗರಿಕರು ಪಾಲ್ಗೊಂಡಿದ್ದರು.




ಕಲಬುರಗಿ ನಗರದ ರಾಮಮಂದಿರ ವೃತ್ತದಲ್ಲಿ ಬಿಜೆಪಿ ಕಾರ್ಯಕರ್ತರು ಮತ್ತು ವಿವಿಧ ವಾರ್ಡ್‌ಗಳ ನಾಗರಿಕರು ವಿವಿಧ ಬೇಡಿಕೆಗಳಿಗೆ ಆಗ್ರಹಿಸಿ ರಸ್ತೆ ತಡೆ ನಡೆಸಿ ಸುಮಾರು ನಾಲ್ಕು ಗಂಟೆಗಳ ಕಾಲ ಪ್ರತಿಭಟನೆ ನಡೆಸಿದರು.

> **ದಕ್ಷಿಣ ಮತಕ್ಷೇತ್ರದ ಶಾಸಕ ಅಲ್ಲಮಪ್ರಭು ಪಾಟೀಲರು ಮಾಜಿ ಶಾಸಕ ದತ್ತಾತ್ರೇಯ ಪಾಟೀಲರ ವಿರುದ್ಧ ಷಡ್ಯಂತ್ರ ನಡೆಸಿದ್ದಾರೆ. ಇದ್ಯಾವುದಕ್ಕೂ ನಾವು ಬಗ್ಗುವುದಿಲ್ಲ. ಪಕ್ಷದ ಅಪಾರ ಸಂಖ್ಯೆಯ ಮುಖಂಡರು, ಕಾರ್ಯಕರ್ತರು, ಅಭಿಮಾನಿಗಳು ಅಪ್ಪುಗೌಡರೊಂದಿಗಿದ್ದೇವೆ. ಇದನ್ನು ಅಲ್ಲಮಪ್ರಭು ಗೌಡರು ಅರಿತುಕೊಳ್ಳಬೇಕು.**
> **– ರಾಜು ವಾಡೇಕರ್**
> ಬಿಜೆಪಿ ಮುಖಂಡ.

### ತಿರುಪತಿಯಲ್ಲಿ ಭವ್ಯ -ಕಣ್ಮನ ಸೆಳೆಯುವ ಕಾರ್ಯಕ್ರಮ

# ಗೋವಿಂದರಾಜಸ್ವಾಮಿ ದೇವಸ್ಥಾನಕ್ಕೆ ಮೂರು ಟನ್ 12 ತರಹದ ಹೂವುಗಳಿಂದ ಆಕರ್ಷಕ ಅಲಂಕಾರ





**ತಿರುಪತಿ, ಜೂ 22.** ತಿರುಪತಿಯ ಶ್ರೀ ಗೋವಿಂದರಾಜ ಸ್ವಾಮಿ ದೇವಸ್ಥಾನದಲ್ಲಿ ಸೋಮವಾರ ನಡೆದ ಭವ್ಯ ಮತ್ತು ಕಣ್ಮನ ಸೆಳೆಯುವ ಕಾರ್ಯಕ್ರಮವು ಅತ್ಯಂತ ವೈಭವ ಮತ್ತು ಭಕ್ತಿಯ ನಡುವೆ ನಡೆಯಿತು. ಪರಿಮಳಯುಕ್ತ ಹೂವುಗಳಿಂದ ಅಲಂಕರಿಸಲ್ಪಟ್ಟ ದೇವಾಲಯದ ಆವರಣವು ಆಧ್ಯಾತ್ಮಿಕ ಪ್ರಭಾವವನ್ನು ಹೊರಸೂಸಿತು ಮತ್ತು ಭಕ್ತರು ಭಕ್ತಿಯಲ್ಲಿ ಮುಳುಗಿದ್ದರು.

ಸೋಮವಾರ ಬೆಳಿಗ್ಗೆ ಶ್ರೀ ದೇವಿ ಮತ್ತು ಭೂ ದೇವಿಯರೊಂದಿಗೆ ಶ್ರೀ ಗೋವಿಂದರಾಜ ಸ್ವಾಮಿಯ ವಿಧ್ಯುಕ್ತ ವಿಗ್ರಹಗಳನ್ನು ಸ್ನಪ ತಿರುಮಂಜನಂನ ಪವಿತ್ರ ವಿಧಿಗಳೊಂದಿಗೆ ಪೂಜಿಸಲಾಯಿತು. ಹಾಲು, ಮೊಸರು, ಜೇನುತುಪ್ಪ, ತೆಂಗಿನ ಹಾಲು, ಅರಿಶಿನ ಮತ್ತು ಶ್ರೀಗಂಧದೊಂದಿಗೆ ವಿಶೇಷ ಪೂಜೆಗಳನ್ನು ಮಾಡಲಾಯಿತು.

ನಂತರ, ಮಧ್ಯಾಹ್ನ 1 ರಿಂದ ಸಂಜೆ 4 ರವರೆಗೆ, ವೇದ ಮಂತ್ರಗಳು ಮತ್ತು ಶುಭ ವಾದ್ಯಗಳ ಪಠಣದ ನಡುವೆ ಭವ್ಯವಾಗಿ ಹೂವಿನ ಅರ್ಪಣೆಯನ್ನು ಮಾಡಲಾಯಿತು. ಹಿಂದಿನ ಬ್ರಹ್ಮೋತ್ಸವಗಳು ಮತ್ತು ನಿತ್ಯಕೈಂಕರ್ಯಗಳಲ್ಲಿ ತಿಳಿದೋ ತಿಳಿಯದೆಯೋ ಮಾಡಿದ ತಪ್ಪುಗಳಿಗೆ ಪ್ರಾಯಶ್ಚಿತ್ತವಾಗಿ ಈ ಹೂವಿನ ಅರ್ಪಣೆಯನ್ನು ನಡೆಸುವುದು ದೇವಾಲಯದ ಸಂಪ್ರದಾಯವಾಗಿದೆ.

ಈ ಸಂದರ್ಭದಲ್ಲಿ, ತುಳಸಿ, ಚಾಮಂತಿ, ಗನ್ನೇರು, ಮೊಗಲಿ, ಸಂಪಂಗಿ, ರೋಜ, ಕಲುವಾಲು ಮುಂತಾದ 12 ಬಗೆಯ ಹೂವುಗಳು ಮತ್ತು ತುಳಸಿ, ಮರುವಂದಮನಮು, ಬಿಲ್ವ, ಪನ್ನಿರಕು ಮುಂತಾದ 6 ಬಗೆಯ ಪವಿತ್ರ ಎಲೆಗಳು ಸೇರಿದಂತೆ ಒಟ್ಟು ಮೂರು ಟನ್ ಹೂವುಗಳನ್ನು ಭಗವಂತನಿಗೆ ಅರ್ಪಿಸಲಾಯಿತು. ಆಂಧ್ರಪ್ರದೇಶ, ತಮಿಳುನಾಡು ಮತ್ತು ಕರ್ನಾಟಕದ ದಾನಿಗಳು ಈ ಹೂವುಗಳನ್ನು ದಾನ ಮಾಡಿದರು.

ಸಂಜೆ, ಭಗವಂತನು ಮತ್ತು ದೇವತೆಯು ದೇವಾಲಯದ ನಾಲ್ಕು ಮಾಡವೀದಿಗಳ ಮೂಲಕ ಮೆರವಣಿಗೆ ನಡೆಸಿ ಭಕ್ತರಿಗೆ ದಿವ್ಯ ಮಂಗಲ ದರ್ಶನ ನೀಡಿದರು.

ಟಿಟಿಡಿ ಉಪ ಇಒ ಶ್ರೀಮತಿ ವಿ.ಆರ್. ಶಾಂತಿ ಮತ್ತು ಉದ್ಯಾನವನ ಇಲಾಖೆಯ ಉಪ ನಿರ್ದೇಶಕಿ ಎಸ್. ಶ್ರೀನಿವಾಸುಲು, ಎಇಒ ಎ.ಬಿ. ನಾರಾಯಣ ಚೌಧರಿ, ಸೂಪರಿಂಟೆಂಡೆಂಟ್ ಶೇಷಗಿರಿ, ದೇವಾಲಯ ನಿರೀಕ್ಷಕ ರಂಜಿತ್, ದೇವಾಲಯದ ಅರ್ಚಕರು, ಅಧಿಕಾರಿಗಳು, ಶ್ರೀವಾರಿ ಸೇವಕರು ಮತ್ತು ಹೆಚ್ಚಿನ ಸಂಖ್ಯೆಯ ಭಕ್ತರು ಭಾಗವಹಿಸಿದ್ದರು.

# ಗ್ರಾಮೀಣ ಪ್ರದೇಶಗಳಲ್ಲಿ ಫ್ರಾಂಚೈಸಿಗಳಿಗೆ ಆಹ್ವಾನ

**ಬಳ್ಳಾರಿ, ಜೂ 22:** ಕೇಂದ್ರ ಸರ್ಕಾರವು ಡಿಜಿಟಲ್ ಭಾರತ್ ನಿಧಿ ಹೆಸರಿನಲ್ಲಿ ಗ್ರಾಮ ಪಂಚಾಯಿತಿಗಳು ಮತ್ತು ಹಳ್ಳಿಗಳಲ್ಲಿ ಎಫ್ಟಿಟಿಹೆಚ್ ಹೈಸ್ಪೀಡ್ ಬ್ರಾಡ್‌ಬ್ಯಾಂಡ್ ಸಂಪರ್ಕಗಳನ್ನು ಒದಗಿಸುವ ಯೋಜನೆಯನ್ನು ರೂಪಿಸಿದೆ. ಗ್ರಾಮೀಣ ಮತ್ತು ನಗರ ಪ್ರದೇಶಗಳ ನಡುವಿನ ಡಿಜಿಟಲ್ ಅಂತರವನ್ನು ಕಡಿಮೆ ಮಾಡಲು ಮತ್ತು ಸಮಗ್ರ ಸಾಮಾಜಿಕ–ಆರ್ಥಿಕ ಅಭಿವೃದ್ಧಿಯನ್ನು ಉತ್ತೇಜಿಸಲು ಈ ಯೋಜನೆಯನ್ನು ಜಾರಿಗೆ ತರಲಾಗಿದೆ.

ಬಳ್ಳಾರಿ, ವಿಜಯನಗರ ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯಿತಿಗಳು ಮತ್ತು ಹಳ್ಳಿಗಳು ಈ ಯೋಜನೆಯ ಲಾಭ ಪಡೆಯಬಹುದು.

ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಯ ಗ್ರಾಮೀಣ ನಿರುದ್ಯೋಗಿ ಯುವಕರು ಗ್ರಾಮ ಪಂಚಾಯಿತಿಗಳು ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಹೈಸ್ಪೀಡ್ ಇಂಟರ್ನೆಟ್ ಸಂಪರ್ಕಗಳನ್ನು ಒದಗಿಸುವ ಮೂಲಕ ಬಿಎಸ್‌ಎನ್‌ಎಲ್‌ನಲ್ಲಿ ಫ್ರಾಂಚೈಸಿ ಆಗಲು ಮತ್ತು ರೂ.3200 – ರೂ.6400 ಮುಂಗಡ ಪ್ರೋತ್ಸಾಹದ ಜೊತೆಗೆ ಕಮಿಷನ್ ರೂಪದಲ್ಲಿ ಉತ್ತಮ ಮಾಸಿಕ ಆದಾಯವನ್ನು ಗಳಿಸಲು ಇದು ಒಂದು ಸುವರ್ಣ ಅವಕಾಶವಾಗಿದೆ.

ಹೆಚ್ಚಿನ ವಿವರಗಳಿಗಾಗಿ ದಯವಿಟ್ಟು ಎಸ್ಡಿಇ ಎಫ್‌ಟಿಟಿಎಚ್ 9482073020 ಅನ್ನು ಸಂಪರ್ಕಿಸಲು ಪ್ರಕಟಣೆಯಲ್ಲಿ ಕೋರಿದ್ದಾರೆ.

# 381 ರೌಡಿಶೀಟರ್ ಮನೆಗಳ ಮೇಲೆ ಏಕಕಾಲಕ್ಕೆ ಪೊಲೀಸರ ದಾಳಿ: ಅನಧಿಕೃತ ದಾಖಲೆಗಳ ವಶ



**ಬಳ್ಳಾರಿ, ಜೂ.22:** ನಮ್ಮ ವಲಯದ ವಿಜಯನಗರ, ರಾಯಚೂರು, ಕೊಪ್ಪಳ ಹಾಗೂ ಬಳ್ಳಾರಿ ಜಿಲ್ಲೆಯಲ್ಲಿ ಇಂದು ಏಕಕಾಲಕ್ಕೆ 22 ರೌಡಿ ನಿಗ್ರಹ ತಂಡಗಳನ್ನು ರಚಿಸಿ. 381 ರೌಡಿಗಳ ಮನೆಗಳ ಮೇಲೆ ದಾಳಿ ನಡೆಸಿ ಪರಿಶೀಲನೆ ನಡೆಸಿದ್ದು, ನಗರದ ಎಪಿಎಂಸಿ ಠಾಣೆ ವ್ಯಾಪ್ತಿಯ ಅಂದ್ರಾಳ್ ಸಿತಾರಾಂ ಮನೆಯಲ್ಲಿ, ಏರ್‌ಗನ್, ಸ್ಟ್ಯಾಂಪ್‌ಪೇಪರ್, ಪ್ರಾಮಿಸರಿ ನೋಟುಗಳು, ಪರರ ಆಸ್ತಿಗಳ ದಾಖಲಾತಿಗಳು ದೊರೆತಿವೆ ಎಂದು ಬಳ್ಳಾರಿ ವಲಯದ ಐಜಿಪಿ ಡಾ. ಹರ್ಷ ತಿಳಿಸಿದ್ದಾರೆ.

ಅವರು ಸೋಮವಾರ ಎಸ್ಪಿ ಕಚೇರಿಯಲ್ಲಿ ಸುದ್ದಿಗೋಷ್ಠಿನಡೆಸಿ ಮಾತನಾಡುತ್ತಾ ನಿಗ್ರಹ ದಳ ರಚನೆ ಬಗ್ಗೆ ಸಿಎಂ ಅವರು ಹೇಳಿದ್ದು. ಅದರಂತೆ ಇಲಾಖೆಯ ಮೇಲಾಧಿಕಾರಿಗಳು ಅನೇಕ ನಿರ್ದೇಶನ ನೀಡಿದ್ದಾರೆ. ನಮ್ಮ ವಲಯದ ಪೊಲೀಸ್ ಎಸ್ ಎಚ್‌ಓ, ಸರ್ಕಲ್ ಇನ್ಸ್ಪೆಕ್ಟರ್ ನೇತೃತ್ವದಲ್ಲಿ ತಂಡ ರಚಿಸಿದೆ.

ಬಳ್ಳಾರಿ ಜಿಲ್ಲೆಯ 104, ವಿಜಯನಗರದ 106, ರಾಯಚೂರು103 ಮತ್ತು ಕೊಪ್ಪಳ ಜಿಲ್ಲೆಯ 68 ಸೇರಿ ಒಟ್ಟು 381 ರೌಡಿಗಳ ಮನೆ ಮೇಲೆ ಶೋಧ ಕಾರ್ಯ ನಡೆಸಿದೆ.

ಈ ವೇಳೆ ಅವರ ವಾಸ, ಸಹಚರರ ಬಗ್ಗೆ, ವಾಹನ ಯಾವುದು ಎಂಬ ಬಗ್ಗೆ, ಏನೇನು ಚಟುವಟಿಕೆಗಳು ಮಾಡುತ್ತಿದ್ದಾರೆ.

ಮನೆಯಲ್ಲಿ ಶಸ್ತ್ರಾಸ್ತ್ರ ಇವೆಯಾ ಎಂದು ಪರಿಶೀಲಿಸಿದೆ. 16 ಕಡೆ ಅವರ ಇರುವಿಕೆ ದೊರೆತಿಲ್ಲ, ಅವರಿಗೆ ನೋಟೀಸ್ ನೀಡಲಾಗಿದೆ. ಇವರಲ್ಲಿ 13 ಜನ ಮೃತಪಟ್ಟಿದ್ದಾರೆಂದು ತಿಳಿಸಿದರು. ರೌಡಿ ಚಟುವಟಿಕೆ ನಿಯಂತ್ರಣದಲ್ಲಿ ಡುವುದಾಗಿದೆ ಹಾಗಾಗಿ ವಲಯದ ನಾಲ್ಕು ಜಿಲ್ಲೆಗಳಲ್ಲಿ 3814 ಜನರ ಮೇಲೆ ನಿಗಾ ಇಟ್ಟಿದೆ. ಉಳಿದವರ ಮನೆ ಮೇಲೂ ತಪಾಸಣೆ ನಡೆಯಲಿದೆ ಎಂದರು.

ಬಳ್ಳಾರಿ ವಲಯದಲ್ಲಿ 53 ಜನರನ್ನು ಗಡಿ ಪಾರು ಮಾಡಲು ಪ್ರಸ್ತಾವನೆ ಬಂದಿದೆ. ಇದರಲ್ಲಿ 10 ಜನರನ್ನು ಗಡಿ ಪಾರುಮಾಡಿದೆ ಎಂದರು.

ಕೊಲೆ ಆರೋಪದ ರೌಡಿಶೀಟರ್‌ಗಳು ವಲಯದಲ್ಲಿ ಒಟ್ಟಾರೆ 377 ಜನರಿದ್ದು. ಬಳ್ಳಾರಿ ಜಿಲ್ಲೆಯಲ್ಲಿ 126, ವಿಜಯನಗರ 71, ರಾಯಚೂರಿನಲ್ಲಿ 100 ಮತ್ತು 80 ಕೊಪ್ಪಳ ಜಿಲ್ಲೆಯಲ್ಲಿದ್ದಾರೆ ಎಂದು ತಿಳಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಎಸ್ಪಿ ಡಾ.ಸುಮನ್ ಡಿ.ಪೆನ್ನೇಕರ್, ಎಎಸ್ಪಿ ನವೀನ್ ಕುಮಾರ್, ನಗರ ಡಿವೈಎಸ್ಪಿ ಗೋವಿಂದರಾಜುಲು ಮತ್ತಿತರರು ಉಪಸ್ಥಿತರಿದ್ದರು.

# ಹಿಂದೂ ಸಮಾವೇಶಕ್ಕೆ ಅವಕಾಶ ಬೇಡ ಡಾ.ಅಂಬೇಡ್ಕರ್ ಅರಿವು ಉತ್ಸವ ಸಮಿತಿ ಆಗ್ರಹ

**ಕಲಬುರಗಿ, ಜೂ.22:** ಇದೇ ತಿಂಗಳು 28ರಂದು ಬಸವ ಕಲ್ಯಾಣದಲ್ಲಿ ನಡೆಸಲು ಉದ್ದೇಶಿಸಿರುವ ಬಸವಾದಿ ಶರಣರ ಹಿಂದೂ ಸಮಾವೇಶಕ್ಕೆ ರಾಜ್ಯ ಸರ್ಕಾರ ಮತ್ತು ಜಿಲ್ಲಾ ಆಡಳಿತ ಯಾವುದೇ ಕಾರಣಕ್ಕೂ ಅವಕಾಶ ನೀಡಬಾರದು ಮತ್ತು ಈ ಸಮಾವೇಶವನ್ನು ರದ್ದು ಪಡಿಸಬೇಕು ಎಂದು ಡಾ.ಅಂಬೇಡ್ಕರ್ ಅರಿವು ಉತ್ಸವ ಸಮಿತಿ ಅಧ್ಯಕ್ಷ ಹಣಮಂತ ಇಟಗಿ ಆಗ್ರಹಿಸಿದ್ದಾರೆ.

ಈ ಸಂಬಂಧ ಹೇಳಿಕೆ ನೀಡಿ,ಇತ್ತೀಚಿಗೆ ದೇಶದಲ್ಲಿ ಸಾಮಾಜಿಕ ಪರಿವರ್ತನ ಚಳುವಳಿಗಾರರನ್ನು ಹಾಗೂ ಅವರ ವಿಚಾರಗಳನ್ನು ಕಲುಷಿತಗೊಳಿಸುವ ಮತ್ತು ಹತ್ತಿಕ್ಕುವ ಪ್ರಯತ್ನಗಳು ವ್ಯವಸ್ಥಿತವಾಗಿ ನಡೆಯುತ್ತಿವೆ. ಜಾತಿ ರಹಿತ, ವರ್ಗ ರಹಿತ ಸಮ ಸಮಾಜದ, ನಿರ್ಮಾಣಕ್ಕಾಗಿ ಪ್ರಜಾಪ್ರಭುತ್ವದ ತಳಹದಿಯ ಮೇಲೆ ಪರಿವರ್ತನಾ ಚಳುವಳಿಯನ್ನ ಕಟ್ಟಿದ, ಬುದ್ಧ, ಬಸವ, ಜ್ಯೋತಿಬಾ ಪುಲೆ, ಕನಕ ನಾಯಕರು, ಛತ್ರಪತಿ ಶಾಹು ಮಹಾರಾಜ್, ಬಾಬಾ ಸಾಹೇಬ್ ಡಾ. ಬಿ.ಆರ್ ಅಂಬೇಡ್ಕರ್, ನಾಲ್ವಡಿ ಕೃಷ್ಣರಾಜ ಒಡೆಯರ್, ಸ್ವಾಮಿ ವಿವೇಕಾನಂದ, ವಿಶ್ವ ಮಾನವ ಸಂದೇಶ ಸಾರಿದ, ರಾಷ್ಟ್ರಕವಿ ಕುವೆಂಪು ಹಾಗೂ ಈ ದೇಶದ ಸರ್ವ ಜನಾಂಗದ ವಿಮೋಚನೆ ಮಾಡಿದ, ಈ ದೇಶದ ರಾಷ್ಟ್ರೀಯ ಗ್ರಂಥವಾದ ನಮ್ಮ ಸಂವಿಧಾನದ ವಿಚಾರಧಾರೆಗಳ ವಿರೋಧಿಗಳು ಗುಂಪುಗಳನ್ನು ಕಟ್ಟಿಕೊಂಡು, ಇತಿಹಾಸವನ್ನು ತಿರುಚುವ ಮೂಲಕ, ಪೊಳ್ಳು ಕತೆಗಳನ್ನು ಸಾಮಾನ್ಯ ಜನರಲ್ಲಿ ಬಿತ್ತಿ, ಸೌಹಾರ್ದತೆ, ಭಾವೈಕ್ಯದಿಂದ ಬದುಕನ್ನು ಕಟ್ಟಿಕೊಂಡ, ಶಾಂತಿ ಸಮೃದ್ಧಿಯ ನಾಡನ್ನು, ಕೋಮು ಅಗ್ನಿಕುಂಡಕ್ಕೆ ತಳ್ಳುವ ಚಟುವಟಿಕೆಗಳು ನಡೆಯುತ್ತಿವೆ. ಈ ಭಾಗದ ಸರ್ವ ಸಮುದಾಯದ ಜನ, ವೈಚಾರಿಕವಾಗಿ ಮತ್ತು ಸಾಂವಿಧಾನಿಕವಾಗಿ ಇದನ್ನು ವಿರೋಧಿಸಬೇಕಾಗಿದೆ ಎಂದು ತಿಳಿಸಿದ್ದಾರೆ.

ಯಾವ ಧರ್ಮ ಜಾತಿಯನ್ನು ಘೋಷಿಸುತ್ತಿತ್ತೋ, ಯಾವ ಧರ್ಮ ಪುರುಷ ಮತ್ತು ಮಹಿಳೆ ಎಂಬ ತಾರತಮ್ಯ ಮಾಡುತ್ತಿತ್ತು, ಯಾವ ಧರ್ಮ ನಾವು ಶ್ರೇಷ್ಠ, ನೀವು ಕನಿಷ್ಠ ಎಂದು ನಡೆದುಕೊಳ್ಳುತ್ತಿತ್ತೋ, ಯಾವ ಧರ್ಮ ಜಾತಿಗಳನ್ನ ಪೋಷಿಸುತಿತ್ತೋ, ಯಾವ ಧರ್ಮ ಶ್ರೇಣಿಕೃತ ಸಮಾಜವನ್ನು ನಿರ್ಮಿಸಿತ್ತೋ, ಯಾವ ಧರ್ಮ ಜನರಿಗೆ ಮೌಢ್ಯತೆಗಳನ್ನು ಬಿತ್ತಿ, ಮಾನಸಿಕ ಗುಲಾಮರನ್ನಾಗಿ ಮಾಡಿತ್ತೋ, ಅಂತಹ ಧರ್ಮದ ವಿರುದ್ಧ ಕ್ರಾಂತಿಯನ್ನು ಮಾಡುವ ಮೂಲಕ, ನಿಸರ್ಗ ಸತ್ಯವನ್ನು ಸಾರಿ, ಸಮ ಸಮಾಜದ ನಿರ್ಮಾಣಕ್ಕಾಗಿ ಹೋರಾಡಿದ ಸಾಮಾಜಿಕ ಪರಿವರ್ತನಾ ಶರಣ ಪರಂಪರೆಯ ಹೆಸರಿನಲ್ಲಿ ಇಂದು ಸಮಾವೇಶ ಮಾಡುತ್ತಿರುವುದು ಖಂಡನೀಯವಾಗಿದೆ ಎಂದು ತಿಳಿಸಿದ್ದಾರೆ.

ರಾಜ್ಯ ಸರ್ಕಾರ ಕ್ರಾಂತಿಕಾರಿ ಅಣ್ಣ ಬಸವಣ್ಣನವರನ್ನು, ನಾಡಿನ ಸಾಂಸ್ಕೃತಿಕ ನಾಯಕ ಎಂದು ಘೋಷಿಸುವ ಮೂಲಕ ಗೌರವವನ್ನು ನೀಡಿದೆ. ಸರ್ಕಾರವೇ ಸಾಂಸ್ಕೃತಿಕ ನಾಯಕ ಎಂದು ಗೌರವಿಸಿದ ಅಣ್ಣ ಬಸವಣ್ಣನವರ ವಿಚಾರಗಳಿಗೆ, ಮಸಿ ಬಳಿಯುವಂತಹ ಕುತಂತ್ರ ನಡೆಸುವ ಯಾವುದೇ ಸಂಘ,ಸಂಸ್ಥೆ, ಹಾಗೂ ವ್ಯಕ್ತಿಗಳಾಗಲಿ ಅವರಿಗೆ, ಸಾಂವಿಧಾನಿಕವಾಗಿ ಶಿಕ್ಷಿಸುವ ಮೂಲಕ, ಸರ್ಕಾರವೇ ನೇರವಾಗಿ ಕ್ರಮವನ್ನು ಕೈಗೊಂಡು, ಸಾಮಾಜಿಕ ಸುಧಾರಣೆಯ ಸುಧಾರಕರ ಚಿಂತನೆಗಳನ್ನು ರಕ್ಷಿಸುವ, ಅವರಿಗೆ ಗೌರವ ನೀಡುವಂತಹ, ಪವಿತ್ರ ಕೆಲಸ ಮಾಡಬೇಕಾಗಿದೆ. ಮುಂದೆಯೂ ಕೂಡ, ಸಮಾಜ ಸುಧಾರಣೆಯ ಯಾವ ನಾಯಕರಿಗೂ ಮತ್ತು ಅವರ ವಿಚಾರಗಳಿಗೂ, ಧಕ್ಕೆ ತರುವಂತಹ ತಂತ್ರ, ಕುತಂತ್ರದ ಸಮಾವೇಶಗಳಿಗೆ, ಸರ್ಕಾರ ಪರವಾನಿಗೆಯನ್ನು ನೀಡಬಾರದು ಎಂದು ಅವರು ಒತ್ತಾಯಿಸಿದ್ದಾರೆ.

ಬಸವ ಕಲ್ಯಾಣದಲ್ಲಿ ಜೂನ್ 28ಕ್ಕೆ ನಡೆಯುವ ಸಮಾವೇಶಕ್ಕೆ ಜಿಲ್ಲಾಡಳಿತ ಮತ್ತು ರಾಜ್ಯ ಸರ್ಕಾರ ಯಾವುದೇ ಕಾರಣಕ್ಕೂ ಅವಕಾಶ ನೀಡಬಾರದು

# ಎಸ್‌ಐಆರ್ ವಿರೋಧಿಸಿ ಕಾಂಗ್ರೆಸ್‌ನಿಂದ ಬೈಕ್ ರ್ಯಾಲಿ



**ರಾಯಚೂರು, ಜೂ. 22 :** ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆ ವಿರೋಧಿಸಿ ಎದ್ದೇಳು ಕರ್ನಾಟಕ, ಎಸ್‌ಐಆರ್ ವಿರೋಧಿ ಸಂಘಟನೆ, ದಲಿತಪರ ಹಾಗೂ ಕಾಂಗ್ರೆಸ್ ಪಕ್ಷದಿಂದ ನಗರದಲ್ಲಿ ಬೈಕ್ ರ್ಯಾಲಿ ನಡೆಯಿತು.

ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ನಡೆಯಲಿರುವ ಬೃಹತ್ ಸಮಾವೇಶದ ಹಿನ್ನೆಲೆಯಾಗಿ, ಕಲ್ಯಾಣ ಕರ್ನಾಟಕ ಭಾಗದಿಂದ ಹೊರಡಲಿರುವ ಎಸ್‌ಐಆರ್ ವಿರೋಧಿ ಜನಜಾಗೃತಿ ಜಾಥಾಕ್ಕೆ ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಚಾಲನೆ ನೀಡಲಾಯಿತು.

ಡಾ.ಬಿ.ಆರ್.ಅಂಬೇಡ್ಕರ್ ವೃತ್ತದಿಂದ ಜಿಲ್ಲಾ ಕ್ರೀಡಾಂಗಣ ಬಳಿಯ ಗಾಂಧಿ ಪುತ್ಥಳಿಯಿಂದ ಆರಂಭವಾದ ಜನಜಾಗೃತಿ ಜಾಥಾ ಹಾಗೂ ಬೈಕ್ ರ್ಯಾಲಿ ಕೇಂದ್ರ ಬಸ್ ನಿಲ್ದಾಣದ ಮಾರ್ಗವಾಗಿ ತೀನ್ ಖಂದಿಲ್ ನಲ್ಲಿ ಸಂಚರಿಸಿ ಮುಕ್ತಾಯಗೊಂಡಿತು.

ದಲಿತಪರ ಹೋರಾಟಗಾರ ಎಂ.ಆರ್.ಭೇರಿ, ಅಂಬಣ್ಣ ಅರೋಲಿ ಮಾತನಾಡಿ, ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಹೆಸರಿನಲ್ಲಿ ದೇಶಾದ್ಯಂತ ಲಕ್ಷಾಂತರ ಅರ್ಹ ಮತದಾರರ ಸಾಂವಿಧಾನಿಕ ಮತದಾನದ ಹಕ್ಕನ್ನು ಕಸಿದುಕೊಳ್ಳುವ ಪ್ರಯತ್ನ ನಡೆಯುತ್ತಿದೆ. ಪಶ್ಚಿಮ ಬಂಗಾಳದಲ್ಲಿ ಎಸ್‌ಐಆರ್ ಮೂಲಕ ಮುಸ್ಲಿಮರ, ದಲಿತ, ಆದಿವಾಸಿಗಳ ಮತದಾನದ ಹಕ್ಕು ಕಸಿದುಕೊಂಡಿದ್ದಾರೆ. ಆ ಮೂಲಕ ಬಿಜೆಪಿ ಗೆಲ್ಲಲು ಕುತಂತ್ರ ಮಾಡಲಾಗಿದೆ. ಕರ್ನಾಟಕ ರಾಜ್ಯದಲ್ಲಿಯೂ ಬಿಜೆಪಿ ಗೆಲ್ಲಲು ಎಲ್ಲಾ ಕಸರತ್ತು ನಡೆಸುತ್ತಿದ್ದು, ಇದನ್ನು ಯಶಸ್ವಿಯಾಗಲು ನಾವು ಬಿಡುವುದಿಲ್ಲ. ಸಂವಿಧಾನದ ಮೂಲಕ ನೀಡಿದ ಹಕ್ಕು ಕಸಿದುಕೊಳ್ಳುವ ಹಕ್ಕು ಯಾರಿಗೂ ಇಲ್ಲ, ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ರಾಜ್ಯಾದ್ಯಂತ ಜಾಥಾದ ಮೂಲಕ ಸಂಚರಿಸುತ್ತಿದ್ದೇವೆ. ಎಲ್ಲರೂ ಜಾಗೃತರಾಗಿ ಒಗ್ಗಟ್ಟಿನ ಹೋರಾಟ ಮಾಡಿದಾಗ ಮಾತ್ರ ಅವರ ಕುತಂತ್ರ ವಿಫಲಗೊಳಿಸಬಹುದು ಎಂದು ಹೇಳಿದರು.

ಈ ಸಂದರ್ಭದಲ್ಲಿ ಎದ್ದೇಳು ಕರ್ನಾಟಕದ ಜಿಲ್ಲಾಧ್ಯಕ್ಷ ಶರಣಕುಮಾರ ಎಂ, ಮಾರೆಪ್ಪ ಹರವಿ, ಕಾಂಗ್ರೆಸ್ ಮುಖಂಡ ಮಹಮ್ಮದ್ ಶಾಲಂ, ಶ್ರೀನಿವಾಸ ರೆಡ್ಡಿ, ಫೈಸಲ್ ಖಾನ್, ಆಂಜನೇಯ ಕುರುಬದೊಡ್ಡಿ, ಜಮಾತೆ ಇಸ್ಲಾಂ ಜಿಲ್ಲಾಧ್ಯಕ್ಷ ಅಸಿಮುದ್ದೀನ್ ಅಖ್ತರ್, ಸಮದ್ ಪಾಶ, ಎಸ್ ಮಾರೆಪ್ಪ, ಮತ್ತಿತರರು ಇದ್ದರು.

# ಹೆಣ್ಣು ಭ್ರೂಣಹತ್ಯೆ ತಡೆಗಟ್ಟುವಲ್ಲಿ ವೈದ್ಯರ ಪಾತ್ರ ಪ್ರಮುಖ: ನ್ಯಾ.ಉಪಾಧ್ಯಾಯ




**ಬೀದರ್, ಜೂ. 22:** ಹೆಣ್ಣಿಗೆ ಭಾರತೀಯ ಸಂಸ್ಕೃತಿಯಲ್ಲಿ ವಿಶಿಷ್ಟ ಸ್ಥಾನಮಾನಗಳಿದ್ದು, ಹೆಣ್ಣುಭ್ರೂಣ ಹತ್ಯೆ ತಡೆಗಟ್ಟುವಲ್ಲಿ ವೈದ್ಯರ ಪಾತ್ರ ಬಹಳ ಪ್ರಮುಖ್ಯವಾಗಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶ ರಾಘವೇಂದ್ರ ಉಪಾಧ್ಯಾಯ ಹೇಳಿದರು.

ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಭಾಂಗಣದಲ್ಲಿ ಬುಧವಾರ ನಡೆದ ಪಿಸಿ ಮತ್ತು ಪಿಎನ್‌ಡಿಟಿ ಕಾಯ್ದೆಯ ಸಮರ್ಪಕ ಅನುಷ್ಠಾನ ಕಾರ್ಯಾಗಾರ ಕಾರ್ಯಕ್ರಮದಲ್ಲಿ ಅವರು ಮಾತನಾಡಿ, ಪಿಸಿ ಮತ್ತು ಪಿಎನ್‌ಡಿಟಿ ಕಾಯ್ದೆಯ ಅನುಸಾರ ಸ್ಕ್ಯಾನಿಂಗ್ ಕೇಂದ್ರಗಳನ್ನು ನಡೆಸಿಕೊಂಡು ಹೋಗಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಬೀದರ್ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಧ್ಯಾನೇಶ್ವರ ನಿರಗುಡೆ, ಜಿಲ್ಲಾ ಪಿಸಿ ಮತ್ತು ಪಿಎನ್‌ಡಿಟಿ ನೋಡಲ್ ಅಧಿಕಾರಿ ಡಾ.ದೀಲಿಪ್ ಡೋಂಗ್ರೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಜಿಲ್ಲಾ ಶಸ್ತ್ರ ಚಿಕಿತ್ಸ ಡಾ.ಅಹೆಮದುದ್ದಿನ್, ಬೀದರ್ ಬ್ರಿಮ್ಸ್ ಬೋಧಕ ಆಸ್ಪತ್ರೆ ವಿಭಾಗ ಸ್ತ್ರೀರೋಗ ತಜ್ಞರ ಮುಖ್ಯಸ್ಥೆ ಡಾ.ಉಮಾ ದೇಶಮುಖ, ರೇಡಿಯೋಲಾಜಿ ವಿಭಾಗದ ಮುಖ್ಯಸ್ಥ ಡಾ.ಅಶೋಕ ಕಟ್ಟಿಮನಿ, ಡಾ.ಮಹೇಶ ತೊಂಡಾರೆ, ಡಾ.ಆರತಿ ಆರ್. ಕೃಷ್ಣಮೂರ್ತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಿಬ್ಬಂದಿ ಮಹೇಶ್ವರ ರೆಡ್ಡಿ ಮುದಾಸಿರ, ಶಿವಾನಂದ ಸೇರಿದಂತೆ ಇತರರು ಇದ್ದರು.

# ಕತಾರ್ ಅನಿಲ ಘಟಕದಲ್ಲಿ ಸ್ಫೋಟ: ಭಾರತೀಯರು ಸೇರಿ 18 ಮಂದಿ ಸಾವು



**ದೋಹಾ, ಜೂನ್ 22:** ಕತಾರ್‌ನ ರಾಸ್ ಲಫಾನ್ ಕೈಗಾರಿಕಾ ನಗರದ ಬರ್ಜಾನ್ ಅನಿಲ ಸರಬರಾಜು ಘಟಕದಲ್ಲಿ ಸಂಭವಿಸಿದ ಭಾರಿ ಸ್ಫೋಟ ಮತ್ತು ಬೆಂಕಿ ಅವಘಡದಲ್ಲಿ 13 ಭಾರತೀಯರು ಸೇರಿ 18 ಜನರು ಸಾವಿಗೀಡಾಗಿದ್ದಾರೆ. ಭಾನುವಾರ ರಾತ್ರಿ ನಡೆದ ಘಟನೆಯಲ್ಲಿ ಭಾರತೀಯರು ಸೇರಿದಂತೆ ಇತರ ಅರವತ್ತಾರು ಜನರು ಗಾಯಗೊಂಡಿದ್ದಾರೆ. ಭಾರತೀಯ ಪ್ರಜೆಗಳ ಸಾವನ್ನು ದೃಢಪಡಿಸಿದ ದೋಹಾದಲ್ಲಿರುವ ಭಾರತೀಯ ರಾಯಭಾರ ಕಚೇರಿ, ಭಾರತೀಯ ಪ್ರಜೆಗಳಿಗೆ ಎಲ್ಲಾ ಸಹಾಯವನ್ನು ಒದಗಿಸಲು ಕತಾರಿ ಅಧಿಕಾರಿಗಳೊಂದಿಗೆ ಕೆಲಸ ಮಾಡುತ್ತಿದೆ ಎಂದು ತಿಳಿಸಿದೆ. ರಾತ್ರಿ ರಾಸ್ ಲಫಾನ್ ಘಟನೆಯಲ್ಲಿ ದುರದೃಷ್ಟವಶಾತ್ 13 ಭಾರತೀಯ ಪ್ರಜೆಗಳು ಸಾವನ್ನಪ್ಪಿದ್ದಾರೆ ಎಂದು ಕತಾರಿ ಅಧಿಕಾರಿಗಳು ದೃಢಪಡಿಸಿದ್ದಾರೆ. ಮೃತರ ಕುಟುಂಬಗಳಿಗೆ ನಮ್ಮ ಆಳವಾದ ಸಂತಾಪವನ್ನು ವ್ಯಕ್ತಪಡಿಸುತ್ತೇವೆ ಮತ್ತು ಅಗಲಿದ ಆತ್ಮಗಳಿಗಾಗಿ ಪ್ರಾರ್ಥಿಸುತ್ತೇವೆ. "ಘಟನೆಯಲ್ಲಿ ಗಾಯಗೊಂಡವರೆಲ್ಲರೂ ಸ್ಥಿರ ಸ್ಥಿತಿಯಲ್ಲಿದ್ದಾರೆ ಮತ್ತು ಸೂಕ್ತ ವೈದ್ಯಕೀಯ ಚಿಕಿತ್ಸೆ ಪಡೆಯುತ್ತಿದ್ದಾರೆ ಎಂದು ಕತಾರಿ ಅಧಿಕಾರಿಗಳು ದೃಢಪಡಿಸಿದ್ದಾರೆ.

"ಈ ಘಟನೆಯಿಂದ ಬಾಧಿತರಾದ ಭಾರತೀಯ ಪ್ರಜೆಗಳು ಮತ್ತು ಅವರ ಕುಟುಂಬಗಳಿಗೆ ಸಾಧ್ಯವಿರುವ ಎಲ್ಲ ಸಹಾಯವನ್ನು ನೀಡಲು ನಮ್ಮ ರಾಯಭಾರ ಕಚೇರಿಯು ಕತಾರ್ ಅಧಿಕಾರಿಗಳೊಂದಿಗೆ ನಿಕಟ ಸಂಪರ್ಕದಲ್ಲಿ ಕಾರ್ಯನಿರ್ವಹಿಸುತ್ತಿದೆ, ಮೃತರ ಮೃತದೇಹಗಳನ್ನು ಆದಷ್ಟು ಬೇಗ ಭಾರತಕ್ಕೆ ಕಳುಹಿಸುವುದನ್ನು ಖಚಿತಪಡಿಸಿಕೊಳ್ಳುವುದು ಸೇರಿದಂತೆ" ಎಂದು ಅದು ಎಕ್ಸ್ ನಲ್ಲಿ ಪೋಸ್ಟ್ ಮಾಡಿದೆ. ಇದಕ್ಕೂ ಮೊದಲು, ಕತಾರ್‌ನ ಇಂಧನ ಸಚಿವ ಸಾದ್ ಬಿನ್ ಶೆರಿಡಾ ಅಲ್-ಕಾಬಿ ಪತ್ರಿಕಾಗೋಷ್ಠಿಯಲ್ಲಿ ಈ ಘಟನೆಯನ್ನು ದುರಂತ ಜೀವಹಾನಿ ಎಂದು ಬಣ್ಣಿಸಿದರು.

ಕತಾರ್ ಎನರ್ಜಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯಾಗಿಯೂ ಸೇವೆ ಸಲ್ಲಿಸುತ್ತಿರುವ ಅಲ್-ಕಾಬಿ ಹೀಗೆ ಹೇಳಿದರು: "ಎಂದಿಗೂ ಸಂಭವಿಸಬಾರದು ಎಂದು ನಾನು ಯಾವಾಗಲೂ ಆಶಿಸುತ್ತಿದ್ದ ಕೆಲಸವನ್ನು ಇಂದು ನಾನು ಮಾಡಬೇಕಾಗಿದೆ, ಅಂದರೆ ಭಾರತೀಯ ಮತ್ತು ಪಾಕಿಸ್ತಾನಿ ಪ್ರಜೆಗಳನ್ನು ಹೊಂದಿರುವ ನಮ್ಮ ಜನರ 13 ಜೀವಗಳ ದುರಂತ ನಷ್ಟವನ್ನು ಘೋಷಿಸುವುದು." ಬರ್ಜಾನ್ ಸ್ಥಳೀಯ ಅನಿಲ ಪೂರೈಕೆ ಸೌಲಭ್ಯದಲ್ಲಿ ಭಾನುವಾರ ಸಂಜೆ ಕಾರ್ಯಾಚರಣೆ ಪುನರಾರಂಭದ ಸಮಯದಲ್ಲಿ ಸ್ಫೋಟ ಸಂಭವಿಸಿದೆ. 66 ಜನರು ಗಾಯಗೊಂಡಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ, ಆದರೆ ಯಾರೂ ಮಾರಣಾಂತಿಕ ಸ್ಥಿತಿಯಲ್ಲಿಲ್ಲ.

"66 ಜನರು ಗಾಯಗೊಂಡಿದ್ದಾರೆ ಮತ್ತು ವೈದ್ಯಕೀಯ ಚಿಕಿತ್ಸೆ ಪಡೆಯುತ್ತಿದ್ದಾರೆ, ಅವರಲ್ಲಿ ಯಾರೂ ಮಾರಣಾಂತಿಕ ಸ್ಥಿತಿಯಲ್ಲಿಲ್ಲ" ಎಂದು ಅಲ್-ಕಾಬಿ ಹೇಳಿದರು. ಗಾಯಗೊಂಡ 66 ಮಂದಿ ಕತಾರಿ, ಭಾರತೀಯ, ಪಾಕಿಸ್ತಾನಿ, ಬಾಂಗ್ಲಾದೇಶ, ಕೀನ್ಯಾ, ಇರಾನಿಯನ್, ತಾಂಜೇನಿಯಾ, ನೈಜೀರಿಯನ್ ಮತ್ತು ನೇಪಾಳಿ ರಾಷ್ಟ್ರೀಯತೆಗಳಿಗೆ ಸೇರಿದವರು ಎಂದು ಅವರು ಹೇಳಿದರು. ರಾಸ್ ಲಫಾನ್ ಕೈಗಾರಿಕಾ ನಗರದಲ್ಲಿ ಕಾರ್ಯಾಚರಣೆ ಆರಂಭದ ಸಮಯದಲ್ಲಿ ಸ್ಫೋಟ ಮತ್ತು ನಂತರದ ಬೆಂಕಿ ಕಾಣಿಸಿಕೊಂಡಿದೆ ಎಂದು ಕತಾರ್ ಎನರ್ಜಿ ತಿಳಿಸಿದೆ.

ತುರ್ತು ಪ್ರತಿಕ್ರಿಯೆ ತಂಡಗಳನ್ನು ನಿಯೋಜಿಸಲಾಯಿತು ಮತ್ತು ನಂತರ ಬೆಂಕಿಯನ್ನು ನಿಯಂತ್ರಣಕ್ಕೆ ತರಲಾಯಿತು. ಸ್ಫೋಟದ ಕಾರಣದ ಬಗ್ಗೆ ಅಧಿಕಾರಿಗಳು ತನಿಖೆಯನ್ನು ಪ್ರಾರಂಭಿಸಿದ್ದಾರೆ, ಇದು ಅಪಘಾತ ಮತ್ತು ವಿಧ್ವಂಸಕ ಅಥವಾ ಪ್ರತಿಕೂಲ ಕ್ರಮದ ಪರಿಣಾಮವಲ್ಲ ಎಂದು ಅಲ್-ಕಾಬಿ ಒತ್ತಿ ಹೇಳಿದರು. "ಇದು ಅಪಘಾತ ಮತ್ತು ವಿಧ್ವಂಸಕ ಅಥವಾ ಪ್ರತಿಕೂಲ ಸ್ವಭಾವವಲ್ಲ" ಎಂದು ಅವರು ಹೇಳಿದರು, ಯಾವುದೇ ಪರಿಸರ ಅಪಾಯವಿಲ್ಲ ಮತ್ತು ಕತಾರ್‌ನ ಅನಿಲ ರಫ್ತಿನ ಮೇಲೆ ಯಾವುದೇ ಪರಿಣಾಮ ಬೀರುವುದಿಲ್ಲ ಎಂದು ಅವರು ಹೇಳಿದರು. "ಇದು ಜಗತ್ತಿಗೆ ನಮ್ಮ ರಫ್ತುಗಳ ಮೇಲೆ ಯಾವುದೇ ರೀತಿಯಲ್ಲಿ ಪರಿಣಾಮ ಬೀರುವುದಿಲ್ಲ" ಎಂದು ಅವರು ಹೇಳಿದರು. ಬಾರ್ಜನ್ ಸೌಲಭ್ಯವು ಕತಾರ್‌ನ ದೇಶೀಯ ಇಂಧನ ಪೂರೈಕೆಯಲ್ಲಿ ನಿರ್ಣಾಯಕ ಪಾತ್ರವನ್ನು ವಹಿಸುತ್ತದೆ, ವಿದ್ಯುತ್ ಉತ್ಪಾದನೆ, ನೀರಿನ ಉಪ್ಪು ತೆಗೆಯುವ ಘಟಕಗಳು ಮತ್ತು ಸ್ಥಳೀಯ ಕೈಗಾರಿಕೆಗಳಿಗೆ ದಿನಕ್ಕೆ ಸುಮಾರು 1.4 ಬಿಲಿಯನ್ ಪ್ರಮಾಣಿತ ಘನ ಅಡಿ ಮಾರಾಟ ಅನಿಲವನ್ನು ಒದಗಿಸುವ ಸಾಮರ್ಥ್ಯವನ್ನು ಹೊಂದಿದೆ. ಇದು ದೇಶೀಯ ಬಳಕೆ ಮತ್ತು ರಫ್ತಿಗಾಗಿ ಈಥೇನ್, ಕಂಡೆನ್ಸೇಟ್, ದ್ರವೀಕೃತ ಪೆಟ್ರೋಲಿಯಂ ಅನಿಲ ಮತ್ತು ಸಲ್ಫರ್‌ನ್ನು ಸಹ ಉತ್ಪಾದಿಸುತ್ತದೆ.

ವಿಶ್ವದ ಅತಿದೊಡ್ಡ ದ್ರವೀಕೃತ ನೈಸರ್ಗಿಕ ಅನಿಲ ರಫ್ತು ಸೌಲಭ್ಯ ಮತ್ತು ಜಾಗತಿಕವಾಗಿ ಅತಿದೊಡ್ಡ ಕೃತಕ ಬಂದರನ್ನು ಹೊಂದಿರುವ ರಾಸ್ ಲಫಾನ್, ಗಲ್ಫ್ ಇಂಧನ ಮೂಲಸೌಕರ್ಯವನ್ನು ಗುರಿಯಾಗಿಸಿಕೊಂಡು ಇರಾನ್ ದಾಳಿ ಮಾಡಿದ ನಂತರ ಅಮೇರಿಕ-ಇರಾನ್ ಸಂಘರ್ಷದ ಸಮಯದಲ್ಲಿ ಹಾನಿಗೊಳಗಾಗಿತ್ತು. ಪ್ರಮುಖ ಸೌಲಭ್ಯಗಳ ಮೇಲಿನ ದಾಳಿಯ ನಂತರ ಕತಾರ್ ಮಾರ್ಚ್‌ನಲ್ಲಿ ಎಲ್‌ಎನ್‌ಜಿ ಉತ್ಪಾದನೆಯನ್ನು ಸ್ಥಗಿತಗೊಳಿಸಿತು. ಆ ಸಮಯದಲ್ಲಿ, ಮೂಲಸೌಕರ್ಯಕ್ಕೆ ಹಾನಿಯು ಎಲ್‌ಎನ್‌ಜಿ ರಫ್ತು ಸಾಮರ್ಥ್ಯವನ್ನು ಕಡಿಮೆ ಮಾಡುತ್ತದೆ ಮತ್ತು ವರ್ಷಗಳ ದುರಸ್ತಿ ಅಗತ್ಯವಿರುತ್ತದೆ ಎಂದು ಅಧಿಕಾರಿಗಳು ಎಚ್ಚರಿಸಿದರು.

ಅಮೇರಿಕ, ಆಸ್ಟ್ರೇಲಿಯಾ ಮತ್ತು ರಷ್ಯಾ ಜೊತೆಗೆ ಕತಾರ್ ವಿಶ್ವದ ಪ್ರಮುಖ ಎಲ್‌ಎನ್‌ಜಿ ಉತ್ಪಾದಕರಲ್ಲಿ ಒಂದಾಗಿದೆ. ಸ್ಫೋಟದ ಕಿಟಕಿಗಳು ಸದ್ದು ಮಾಡಿವೆ ಮತ್ತು ಕೈಗಾರಿಕಾ ಸಂಕೀರ್ಣದಿಂದ 70 ಕಿ.ಮೀ.ಗಿಂತ ಹೆಚ್ಚು ದೂರದಲ್ಲಿರುವ ಮಧ್ಯ ದೋಹಾದಾದ್ಯಂತ ಅದು ಅನುಭವಿಸಿದೆ ಎಂದು ವರದಿಯಾಗಿದೆ.

1ಸೌಲಭ್ಯದಲ್ಲಿ ಕಾರ್ಯಾಚರಣೆಗಳು ಯಾವಾಗ ಪುನರಾರಂಭಗೊಳ್ಳುತ್ತವೆ ಎಂಬುದನ್ನು ನಿರ್ಧರಿಸಲು ಇದು ತುಂಬಾ ಮುಂಚೆಯೇ ಎಂದು ಅಲ್-ಕಾಬಿ ಹೇಳಿದರು.


ತುರ್ತು ನಿರ್ವಹಣೆಗಾಗಿ ಡಿಸೆಂಬರ್ 2025 ರಿಂದ ಸ್ಥಾವರದಲ್ಲಿ ಉತ್ಪಾದನೆಯನ್ನು ಸ್ಥಗಿತಗೊಳಿಸಲಾಗಿದೆ ಮತ್ತು ಸ್ಫೋಟಕ್ಕೆ ಎರಡು ದಿನಗಳ ಮೊದಲು ಮಾತ್ರ ಪುನರಾರಂಭಿಸಲಾಗಿದೆ ಎಂದು ಅವರು ಗಮನಿಸಿದರು.

## ಅಮೇರಿಕದ ವಸ್ತುಗಳ ಖರೀದಿಗೆ ಅವಕಾಶ: ಇರಾನಿನ ಸ್ವತ್ತುಗಳ ಬಿಡುಗಡೆಗೆ ಅಮೇರಿಕ ಸರ್ಕಾರ ಪರಿಗಣನೆ- ಉಪಾಧ್ಯಕ್ಷ ಜೆಡಿ ವ್ಯಾನ್ಸ್ ಸೂಚನೆ



**ಬರ್ಗೆನ್‌ಸ್ಟಾಕ್, (ಸ್ವಿಜರ್ಲೆಂಡ್) ಜೂನ್ 22:** ಭಯೋತ್ಪಾದನೆಗೆ ಸಂಬಂಧಿಸಿದ ಚಟುವಟಿಕೆಗಳಿಗಿಂತ ಇರಾನಿನ ಜನರಿಗೆ ಪ್ರಯೋಜನಕಾರಿ ಖರೀದಿಗಳ ಕಡೆಗೆ ಹಣವನ್ನು ನಿರ್ದೇಶಿಸುವ ಬಿಗಿಯಾಗಿ ನಿಯಂತ್ರಿತ ಕಾರ್ಯವಿಧಾನದ ಅಡಿಯಲ್ಲಿ ಇರಾನಿನ ಸ್ವತ್ತುಗಳನ್ನು ಘನೀಕರಿಸುವಿಕೆಯನ್ನು ವಾಷಿಂಗ್ಟನ್ ಪರಿಗಣಿಸಬಹುದು ಎಂದು ಅಮೇರಿಕದ ಉಪಾಧ್ಯಕ್ಷ ಜೆಡಿ ವ್ಯಾನ್ಸ್ ಸೂಚಿಸಿದ್ದಾರೆ. ಅಂತರರಾಷ್ಟ್ರೀಯ ಪರಮಾಣು ಶಕ್ತಿ ಸಂಸ್ಥೆ (ಐಎಇಎ) ತನಿಖಾಧಿಕಾರಿಗಳನ್ನು ದೇಶಕ್ಕೆ ಮರಳಿ ಅನುಮತಿಸಲು ಇರಾನ್ ಒಪ್ಪಿಕೊಂಡಿರುವುದು ಒಂದು ಪ್ರಮುಖ ಮೈಲಿಗಲ್ಲು ಸಾಧಿಸಿದೆ ಎಂದು ವ್ಯಾನ್ಸ್ ಹೇಳಿದರು. ಈ ಕ್ರಮವು ಅಂತರರಾಷ್ಟ್ರೀಯ ಮೇಲ್ವಿಚಾರಣೆಯನ್ನು ಖಚಿತಪಡಿಸುವುದರ ಜೊತೆಗೆ ಇರಾನ್‌ನ ಪರಮಾಣು ಶಸ್ತ್ರಾಸ್ತ್ರ ಕಾರ್ಯಕ್ರಮವನ್ನು ಕೊನೆಗೊಳಿಸುತ್ತದೆ ಎಂದು ವ್ಯಾನ್ಸ್ ಹೇಳಿದರು. ಯುಎಸ್-ಇರಾನ್ ಮಾತುಕತೆಗಳ ಇತ್ತೀಚಿನ ಸುತ್ತಿನ ನಂತರ ಸ್ವಿಟ್ಜರ್‌ಲ್ಯಾಂಡ್‌ನ ಬರ್ಗೆನ್‌ಸ್ಟಾಕ್‌ನಲ್ಲಿ ವರದಿಗಾರರೊಂದಿಗೆ ಮಾತನಾಡಿದ ವ್ಯಾನ್ಸ್, ಮಾತುಕತೆಗಳನ್ನು ಉತ್ಪಾದಕ ಎಂದು ಬಣ್ಣಿಸಿದರು ಮತ್ತು ಅವರು ಪ್ರಮುಖ ಪ್ರಗತಿ ಎಂದು ಕರೆದದ್ದನ್ನು ಎತ್ತಿ ತೋರಿಸಿದರು. "ನಿನ್ನೆ ತುಂಬಾ ಒಳ್ಳೆಯ ದಿನವಾಗಿತ್ತು. ನಾವು ಬಹಳಷ್ಟು ಉತ್ತಮ ಪ್ರಗತಿಯನ್ನು ಸಾಧಿಸಿದ್ದೇವೆ" ಎಂದು ವ್ಯಾನ್ಸ್ ಹೇಳಿದರು. ಉಪಾಧ್ಯಕ್ಷರ ಪ್ರಕಾರ, ಅಂತರರಾಷ್ಟ್ರೀಯ ಪರಮಾಣು ಇಂಧನ ಸಂಸ್ಥೆ (ಐಎಇಎ)ಯ ತನಿಖಾಧಿಕಾರಿಗಳನ್ನು ದೇಶಕ್ಕೆ ಮರಳಿ ಅನುಮತಿಸಲು ಇರಾನ್ ಒಪ್ಪಿಕೊಂಡಿದೆ, ಈ ಕ್ರಮವನ್ನು ಅವರು "ಅಮೇರಿಕದ ಜನರಿಗೆ ಒಂದು ಪ್ರಮುಖ ಮೈಲಿಗಲ್ಲು ಮತ್ತು ಇರಾನ್‌ನಲ್ಲಿ ಪರಮಾಣು ಶಸ್ತ್ರಾಸ್ತ್ರಗಳ ಕಾರ್ಯಕ್ರಮವನ್ನು ಶಾಶ್ವತವಾಗಿ ಕೊನೆಗೊಳಿಸುವಲ್ಲಿ ಮೊದಲ ಹೆಜ್ಜೆ" ಎಂದು ಬಣ್ಣಿಸಿದರು. ವ್ಯಾನ್ಸ್ ಇರಾನ್‌ನ ಹೆಪ್ಪುಗಟ್ಟಿದ ವಿದೇಶಿ ಆಸ್ತಿಗಳ ಸಮಸ್ಯೆಯನ್ನು ಸಹ ಉಲ್ಲೇಖಿಸಿದರು, ಯಾವುದೇ ಹಣವನ್ನು ಬಿಡುಗಡೆ ಮಾಡುವ ಮೊದಲು ಅಮೇರಿಕವು ಸುರಕ್ಷತಾ ಕ್ರಮಗಳನ್ನು ಬಯಸುತ್ತದೆ ಎಂದು ಹೇಳಿದರು. "ನಾವು ಎಂದಾದರೂ ಇರಾನಿನ ಸ್ವತ್ತುಗಳನ್ನು ಸ್ಥಗಿತಗೊಳಿಸಿದರೆ, ಇರಾನಿನ ಹಣವು ಇರಾನ್ ಜನರಿಗೆ ಸಹಾಯ ಮಾಡಲು ಹೋಗುತ್ತದೆ ಮತ್ತು ಭಯೋತ್ಪಾದನೆಗೆ ಹಣಕಾಸು ಒದಗಿಸುವುದಿಲ್ಲ ಎಂದು ಖಚಿತಪಡಿಸಿಕೊಳ್ಳಲು ನಾವು ಒಂದು ಪ್ರಕ್ರಿಯೆಯನ್ನು ಸ್ಥಾಪಿಸಲು ಬಯಸಿದ್ದೇವೆ" ಎಂದು ಅವರು ಹೇಳಿದರು. ಟ್ರಂಪ್ ಅವರ ಅಳಿಯ ಜೇರೆಡ್ ಕುಶ್ನರ್ ಭವಿಷ್ಯದಲ್ಲಿ ಇರಾನಿನ ನಿಧಿಗಳ ಯಾವುದೇ ಬಿಡುಗಡೆಯನ್ನು ಮೇಲ್ವಿಚಾರಣೆ ಮಾಡಲು ಕತಾರ್ ಅನ್ನು ಒಳಗೊಂಡ ಕಾರ್ಯವಿಧಾನವನ್ನು ಪ್ರಸ್ತಾಪಿಸಿದ್ದಾರೆ ಎಂದು ಅವರು ಬಹಿರಂಗಪಡಿಸಿದರು. "ಮೂಲತಃ, ಯಾವುದೇ ಸ್ಥಗಿತಗೊಂಡಿರುವ ಇರಾನಿನ ಸ್ವತ್ತುಗಳನ್ನು ಸ್ಥಗಿತಗೊಳಿಸಿದರೆ, ಆ ಪ್ರಕ್ರಿಯೆಯ ಮೇಲೆ ನಮಗೆ ಅನುಮೋದನೆ ಇರುತ್ತದೆ, ಕತಾರ್ ಆ ಪ್ರಕ್ರಿಯೆಯ ಮೇಲೆ ಅನುಮೋದನೆ ಹೊಂದಿದೆ ಮತ್ತು ಹಣವು ವಾಸ್ತವವಾಗಿ ಇರಾನಿನ ಜನರ ಪ್ರಯೋಜನಕ್ಕಾಗಿ ಅಮೇರಿಕನ್ ಕಾರ್ನ್ ಮತ್ತು ಅಮೇರಿಕನ್ ಗೋಧಿಯನ್ನು ಖರೀದಿಸಲು ಹೋಗುತ್ತದೆ" ಎಂದು ವ್ಯಾನ್ಸ್ ಹೇಳಿದರು. IAEA ತನಿಖಾಧಿಕಾರಿಗಳು ಇರಾನ್‌ಗೆ ಮರಳುವ ನಿರೀಕ್ಷೆಯನ್ನು ಉಪಾಧ್ಯಕ್ಷರು ಸ್ವಾಗತಿಸಿದರು, ಅವರು ಟೆಹ್ರಾನ್‌ನ ಪ್ರಾಥಮಿಕ ಒಪ್ಪಂದದ ಅನುಸರಣೆಯನ್ನು ಪರಿಶೀಲಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತಾರೆ ಎಂದು ಹೇಳಿದರು. "ನಾವು ಅಂತಿಮ ಒಪ್ಪಂದ ಮತ್ತು ಶಾಶ್ವತ ಇತ್ಯರ್ಥಕ್ಕೆ ಬರುತ್ತೇವೆ ಎಂಬುದು ನಮ್ಮ ಆಶಯ. ಆದರೆ ಇದೀಗ, ನಾವು ಹೆಚ್ಚಿನ ಪ್ರಗತಿಯನ್ನು ಸಾಧಿಸಿದ್ದೇವೆ ಎಂದು ನಾನು ಭಾವಿಸುತ್ತೇನೆ" ಎಂದು ವ್ಯಾನ್ಸ್ ಹೇಳಿದರು. ಗಖ ಪರಮಾಣು ತನಿಖಾಧಿಕಾರಿಗಳು ಮತ್ತು ಖಂಇಂ ಜೊತೆಗಿನ ಚರ್ಚೆಗಳು ತಕ್ಷಣವೇ ಪ್ರಾರಂಭವಾಗಬಹುದು, ಈ ವಾರ ತಪಾಸಣೆಗಳು ಪ್ರಾರಂಭವಾಗುವ ಸಾಧ್ಯತೆಯಿದೆ ಎಂದು ಅವರು ಹೇಳಿದರು. ಕೆಲವೊಮ್ಮೆ ಮಾತುಕತೆಗಳು ಉದ್ವಿಗ್ನವಾಗಿದ್ದವು ಎಂದು ವ್ಯಾನ್ಸ್ ಒಪ್ಪಿಕೊಂಡರು, ಇರಾನಿನ ನಿಯೋಗವು ಮಾತುಕತೆಯಿಂದ ಹೊರನಡೆಯುವುದಾಗಿ ಬೆದರಿಕೆ ಹಾಕಿದೆ ಎಂದು ಹೇಳಿದರು. ಆದಾಗ್ಯೂ, ಚರ್ಚೆಗಳು ಬೆಳಗಿನ ಜಾವ 1 ಗಂಟೆಯ ನಂತರವೂ ಮುಂದುವರೆದವು ಮತ್ತು ಎರಡೂ ಕಡೆಯವರು ತೊಡಗಿಸಿಕೊಂಡಿದ್ದರು ಎಂದು ಅವರು ಗಮನಿಸಿದರು. "ಸ್ವಲ್ಪ ಬೆದರಿಕೆ ಮತ್ತು ಕಿರುಚಾಟವಿತ್ತು, ಆದರೆ ದಿನದ ಕೊನೆಯಲ್ಲಿ, ಮಾತುಕತೆಗಳು ಮುಂದುವರೆದವು ಮತ್ತು ನಾವು ಹೆಚ್ಚಿನ ಪ್ರಗತಿಯನ್ನು ಸಾಧಿಸಿದ್ದೇವೆ" ಎಂದು ಅವರು ಹೇಳಿದರು. ಇತ್ತೀಚಿನ ಬೆಳವಣಿಗೆಗಳು ವಿಶಾಲವಾದ ಗಖ-ಇರಾನ್ ಒಪ್ಪಂದದತ್ತ ಆವೇಗವನ್ನು ಹೆಚ್ಚಿಸುತ್ತಿವೆ ಎಂದು ಸೂಚಿಸುತ್ತವೆ, ಪರಮಾಣು ತಪಾಸಣೆಗಳು ಮತ್ತು ಸ್ಥಗಿತಗೊಂಡಿರುವ ಇರಾನಿನ ಸ್ವತ್ತುಗಳ ಭವಿಷ್ಯದ ಬಿ1ಡುಗಡೆಯು ಮಾತುಕತೆಗಳ ಪ್ರಮುಖ ಅಂಶಗಳಾಗಿ ಹೊರಹೊಮ್ಮುತ್ತಿವೆ.

## ಹಾರ್ಮುಜ್ ಸ್ವಾಧೀನ ಬೆದರಿಕೆ: ಟ್ರಂಪ್‌ಗೆ ಇರಾನ್ ಎಚ್ಚರಿಕೆ



**ಇರಾನ್, ಜೂ.22:** ಅಮೇರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ "ಜಲಸಂಧಿಯನ್ನು ಸ್ವಾಧೀನಪಡಿಸಿಕೊಳ್ಳುವುದಾಗಿ" ಬೆದರಿಕೆ ಹಾಕಿದ ನಂತರ, ಇರಾನ್ ಸಂಸತ್ತಿನ ರಾಷ್ಟ್ರೀಯ ಭದ್ರತಾ ಸಮಿತಿಯ ಮುಖ್ಯಸ್ಥ ಇಬ್ರಾಹಿಂ ಅಜೀಜಿ ಸೋಮವಾರ ನಡೆಯುತ್ತಿರುವ ತಾಂತ್ರಿಕ ಮಾತುಕತೆಗಳ ನಡುವೆ ಯುಎಸ್‌ಗೆ ಎಚ್ಚರಿಕೆ ನೀಡಿದ್ದಾರೆ. ಇಬ್ರಾಹಿಂ ಅಜೀಜಿ ಹಾರ್ಮುಜ್ ಜಲಸಂಧಿಯ ಮೇಲೆ ಇರಾನ್ ಅಧಿಕಾರವನ್ನು ಪ್ರತಿಪಾದಿಸಿದ್ದಾರೆ. ಎಕ್ಸ್‌ನಲ್ಲಿನ ಪೋಸ್ಟ್‌ನಲ್ಲಿ, ಹಾರ್ಮುಜ್ ಜಲಸಂಧಿಗೆ ಸಂಬಂಧಿಸಿದಂತೆ ಬೆದರಿಕೆ ಹಾಕಿದ್ದಕ್ಕಾಗಿ ಟ್ರಂಪ್ ಅವರನ್ನು ಅಜೀಜಿ ಟೀಕಿಸಿದರು. ಇದು "ನಿಮ್ಮ ವೈಯಕ್ತಿಕ ಕ್ಯಾಸಿನೊವೂ ಅಲ್ಲ, ಆಧುನಿಕ ಕಾಲದ ಕಡಲ್ಗಳ್ಳರ ಹಿತ್ತಲೂ ಅಲ್ಲ" ಎಂದು ಅಜೀಜಿ ಹೇಳಿದ್ದಾರೆ ಮತ್ತು ರಾಜತಾಂತ್ರಿಕ ಚೋಕ್‌ಹೋಲ್ಡ್‌ಗೆ ಸಂಬಂಧಿಸಿದ ಅಂತಿಮ ನಿರ್ಧಾರ ಇರಾನ್ ಜನರು ಮತ್ತು ಪಡೆಗಳ ಮೇಲಿದೆ ಎಂದು ದೃಢಪಡಿಸಿದರು. "ನೀವು ಬೆದರಿಕೆಗಳನ್ನು ಹಾಕುತ್ತೀರಿ; ನಾವು ಕ್ರಮ ತೆಗೆದುಕೊಳ್ಳುತ್ತೇವೆ. ಹಾರ್ಮುಜ್ ಜಲಸಂಧಿಯು ನಿಮ್ಮ ವೈಯಕ್ತಿಕ ಕ್ಯಾಸಿನೊ ಅಲ್ಲ ಅಥವಾ ಆಧುನಿಕ ದರೋಡೆಕೋರರ ಹಿತ್ತಲಲ್ಲ. ಇವು ಇರಾನಿನ ಸಾರ್ವಭೌಮ ಜಲ ಮಾರ್ಗ, ಮತ್ತು ಅಂತಿಮ ನಿರ್ಧಾರವು ಇರಾನ್‌ನ ಉದಾತ್ತ ಜನರು ಮತ್ತು ಅದರ ಕೆಚ್ಚೆದೆಯ ಸಶಸ್ತ್ರ ಪಡೆಗಳ ಮೇಲಿದೆ" ಎಂದು ಅವರು ಬರೆದಿದ್ದಾರೆ. ಅಮೇರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಶನಿವಾರ ರಾತ್ರಿ ಇರಾನ್ ಅಧಿಕಾರಿಗಳೊಂದಿಗೆ ಮಾತುಕತೆ ನಡೆಸಿದ್ದಾರೆ ಎಂದು ಬಹಿರಂಗಪಡಿಸಿದ ನಂತರ ಅಜೀಜಿ ಅವರ ಹೇಳಿಕೆಗಳು ಬಂದಿವೆ.

ಆಯಕಟ್ಟಿನ ನಿರ್ಣಾಯಕವಾದ ಹಾರ್ಮುಜ್ ಜಲಸಂಧಿಯನ್ನು ತಡೆಯುವ ಯಾವುದೇ ಪ್ರಯತ್ನಗಳ ವಿರುದ್ಧ ಟೆಹ್ರಾನ್‌ಗೆ ಕಟ್ಟುನಿಟ್ಟಾದ ಎಚ್ಚರಿಕೆಯನ್ನು ನೀಡಿದರು ಮತ್ತು ಅಂತಹ ಕ್ರಮವನ್ನು ತೆಗೆದುಕೊಂಡರೆ ತೀವ್ರ ಪರಿಣಾಮಗಳನ್ನು ಎದುರಿಸಬೇಕಾಗುತ್ತದೆ. ಸಂಭಾವ್ಯ ಕಡಲ ಅಡೆತಡೆಗಳ ಬಗ್ಗೆ ನೇರ ಎಚ್ಚರಿಕೆಯಲ್ಲಿ, ಅಧ್ಯಕ್ಷರು ವಾಷಿಂಗ್ಟನ್ ಪ್ರಮುಖ ಹಡಗು ಮಾರ್ಗದ ಯಾವುದೇ ದಿಗ್ಬಂಧನಕ್ಕೆ ಅಗಾಧ ಶಕ್ತಿಯೊಂದಿಗೆ ಪ್ರತಿಕ್ರಿಯಿಸುತ್ತದೆ ಎಂದು ಸೂಚಿಸಿದರು. "ನೀವು ಅದನ್ನು ಮುಚ್ಚಿರಿ ಮತ್ತು ನಿಮಗೆ ದೇಶವೇ ಇರುವುದಿಲ್ಲ. ನೀವು ಅದನ್ನು ನಿಮ್ಮ ದೇಶಕ್ಕೆ ವಾಪಸ್ ಹಾರ್ಮೊಜ್ ನ್ನು ಪಡೆಯಲು ಸಾಧ್ಯವಾಗುವುದಿಲ್ಲ" ಎಂದು ಟ್ರಂಪ್ ಫಾಕ್ಸ್ ನ್ಯೂಸ್‌ಗೆ ತಿಳಿಸಿದರು. ಜಾಗತಿಕ ಶಿಪ್ಪಿಂಗ್ ಕಾರಿಡಾರ್ ನ್ನು ಸುರಕ್ಷಿತವಾಗಿರಿಸಲು ವಾಷಿಂಗ್ಟನ್ ನೇರ ಕಾರ್ಯಾಚರಣೆಯ ನಿಯಂತ್ರಣವನ್ನು ಪಡೆದುಕೊಳ್ಳಬಹುದು ಮತ್ತು ನೀರಿನಲ್ಲಿ ನ್ಯಾವಿಗೇಟ್ ಮಾಡುವ ತೈಲ ಸಾಗಣೆಯ ಮೇಲೆ ಸಂಭಾವ್ಯವಾಗಿ ಸಾರಿಗೆ ಶುಲ್ಕವನ್ನು ವಿಧಿಸಬಹುದು ಎಂದು ಗಖ ಅಧ್ಯಕ್ಷರು ಸೂಚಿಸಿದರು. ರಾಜತಾಂತ್ರಿಕ ಚರ್ಚೆಗಳು ಸ್ಥಗಿತಗೊಂಡರೆ ಆರ್ಥಿಕ ಕ್ರಮಗಳ ಎಚ್ಚರಿಕೆ ನೀಡಿರುವ ರಿಪಬ್ಲಿಕನ್ ನಾಯಕ, "ಅವರು ಒಪ್ಪಂದ ಮಾಡಿಕೊಳ್ಳದಿದ್ದರೆ, ನಾವು ಟೋಲ್ ಸಂಗ್ರಹಿಸುತ್ತೇವೆ ಎಂದು ಹೇಳಿದ್ದಾರೆ.

## ನಾನು ಯಾವುದೇ ಒತ್ತಡಕ್ಕೆ ಸಿಲುಕಿಲ್ಲ: ಲಂಕಾ ಬಗ್ಗುಬಡಿದು ವಿಶ್ವದಾಖಲೆ ಮಾಡಿದ್ದ ವೈಭವ್ ಅಚ್ಚರಿಯ ಹೇಳಿಕೆ



**ಶ್ರೀಲಂಕಾ, ಜೂ.22:** ಶ್ರೀಲಂಕಾದ ದಂಬುಲ್ಲಾದಲ್ಲಿ ನಡೆದ ಏಕದಿನ ತ್ರಿಕೋನ ಸರಣಿಯ ಫೈನಲ್ ಪಂದ್ಯದಲ್ಲಿ ಶ್ರೀಲಂಕಾ 'ಎ' ವಿರುದ್ಧ ಭಾರತ 'ಎ' ತಂಡ ಭರ್ಜರಿಯಾಗಿ ಗೆಲುವು ಸಾಧಿಸಿ ಟ್ರೋಫಿ ಮುಡಿಗೇರಿಸಿಕೊಂಡಿತು. ಇದರ ಬೆನ್ನಲ್ಲೇ ಈ ಗೆಲುವಿಗೆ ಪ್ರಮುಖ ಕಾರಣನಾದ ಟೀಮ್ ಇಂಡಿಯಾ ಯುವ ಸ್ಟಾರ್ ಬ್ಯಾಟರ್ ವೈಭವ್ ಸೂರ್ಯವಂಶಿ ಅವರು ಮಹತ್ವದ ಹೇಳಿಕೆ ನೀಡಿದ್ದಾರೆ. ಇದು ಇದೀಗ ಸಾಮಾಜಿಕ ಜಾಲತಾಣದಲ್ಲಿ ಸಖತ್ ಸದ್ದು ಮಾಡುತ್ತಿದೆ.

ಶ್ರೀಲಂಕಾ ವಿರುದ್ಧ ನಡೆದ ರೋಚಕ ಫೈನಲ್ ಪಂದ್ಯದಲ್ಲಿ ಭಾರತ ತಂಡ ಭರ್ಜರಿ ಜಯ ದಾಖಲಿಸಿತು. ಈ ಗೆಲುವಿನ ಬೆನ್ನಲ್ಲೇ ಟೀಮ್ ಇಂಡಿಯಾದ 15 ವರ್ಷದ ವೈಭವ್ ಸೂರ್ಯವಂಶಿ ಮಹತ್ವದ ಹೇಳಿಕೆಯೊಂದನ್ನು ನೀಡಿದ್ದಾರೆ. ಟೂರ್ನಿಯಲ್ಲಿ ಸಾಧಾರಣ ಪ್ರದರ್ಶನ ಹಾಗೂ ಹಿಂದಿನ ಪಂದ್ಯದಲ್ಲಿ ಎದುರಾಗಿದ್ದ ಸಣ್ಣ ವಿವಾದಗಳ ಹೊರತಾಗಿಯೂ ತಮ್ಮ ಮೇಲೆ ಯಾವುದೇ ಒತ್ತಡ ಇರಲಿಲ್ಲ ಎಂದು ಅವರು ಸ್ಪಷ್ಟಪಡಿಸಿದ್ದಾರೆ.

ಫೈನಲ್ ಪಂದ್ಯದಲ್ಲಿ ಅಬ್ಬರಿಸಿದ ಎಡಗೈ ಬ್ಯಾಟರ್ ವೈಭವ್ ಸೂರ್ಯವಂಶಿ ಕೇವಲ 29 ಎಸೆತಗಳಲ್ಲಿ 94 ರನ್ ಚಚ್ಚಿದರು. ಈ ಸ್ಫೋಟಕ ಇನ್ನಿಂಗ್ಸ್‌ನಲ್ಲಿ ಅವರು ಕೇವಲ 11 ಎಸೆತಗಳಲ್ಲಿ ಅರ್ಧಶತಕ ಪೂರೈಸುವ ಮೂಲಕ 'ಲಿಸ್ಟ್ ಎ' ಕ್ರಿಕೆಟ್ ಇತಿಹಾಸದಲ್ಲೇ ಅತ್ಯಂತ ವೇಗದ ಅರ್ಧಶತಕ ಸಿಡಿಸಿದ ದಾಖಲೆಯನ್ನು ತಮ್ಮ ಹೆಸರಿಗೆ ಬರೆದುಕೊಂಡರು. ಇವರ ಆಕ್ರಮಣ ಬ್ಯಾಟಿಂಗ್ ನೆರವಿನಿಂದ ಭಾರತ 'ಎ' ತಂಡ ಕೇವಲ 9 ಓವರ್‌ಗಳಲ್ಲಿ 132 ರನ್ ಕಲೆಹಾಕಿತು. ಅಂತಿಮವಾಗಿ ಭಾರತ ತಂಡವು 50 ಓವರ್‌ಗಳಲ್ಲಿ 9 ವಿಕೆಟ್ ನಷ್ಟಕ್ಕೆ 377 ರನ್‌ಗಳ ಬೃಹತ್ ಮೊತ್ತ ಪೇರಿಸಿತು. ಇದಕ್ಕೆ ಪ್ರತಿಯಾಗಿ ಶ್ರೀಲಂಕಾ 'ಎ' ತಂಡ 47.1 ಓವರ್‌ಗಳಲ್ಲಿ 311 ರನ್‌ಗಳಿಗೆ ಆಲೌಟ್ ಆಗುವ ಮೂಲಕ ಭಾರತ 66 ರನ್‌ಗಳ ಭರ್ಜರಿ ಜಯ ಸಾಧಿಸಿ ಪ್ರಶಸ್ತಿಯನ್ನು ಮುಡಿಗೇರಿಸಿಕೊಂಡಿತು. ಈ ಪಂದ್ಯದ ನಂತರ ವೈಭವ್ ಅವರು ಶ್ರೇಷ್ಠ ಪ್ರಶಸ್ತಿಯನ್ನು ತಮ್ಮದಾಗಿಸಿಕೊಂಡರು. ಪಂದ್ಯ ಶ್ರೇಷ್ಠ ಪ್ರಶಸ್ತಿ ಪಡೆದ ನಂತರ ಮಾತನಾಡಿದ ವಂಡರ್ ಕಿಡ್ ವೈಭವ್ ಸೂರ್ಯವಂಶಿ ಅವರು, 'ನಾನು ಯಾವುದೇ ಹೆಚ್ಚಿನ ಆಲೋಚನೆ ಮಾಡಿರಲಿಲ್ಲ. ಮೊದಲ 10 ಓವರ್‌ಗಳಲ್ಲಿ ನಾನು ಅಂದುಕೊಂಡಿದ್ದ ಯೋಜನೆಯನ್ನು ಕೇವಲ ಮೈದಾನದಲ್ಲಿ ಕಾರ್ಯಗತಗೊಳಿಸಲು ಬಯಸಿದ್ದೆ,' ಎಂದು ಹೇಳಿ ಗಮನ ಸೆಳೆದಿದ್ದಾರೆ. ಐಪಿಎಲ್‌ನಲ್ಲಿ ಬರೋಬ್ಬರಿ 72 ಸಿಕ್ಸರ್‌ಗಳನ್ನು ಸಿಡಿಸಿ ಟಿ20 ಕ್ರಿಕೆಟ್‌ನಲ್ಲಿ ಹೆಚ್ಚು ಹೆಸರುವಾಸಿಯಾಗಿದ್ದ ವೈಭವ್, ತಮಗೆ ಏಕದಿನ ಮಾದರಿಯೂ ತುಂಬಾ ಮುಖ್ಯ ಎಂದಿದ್ದಾರೆ. 'ನಾನು ಈಗಾಗಲೇ 50 ಓವರ್‌ಗಳ ಪಂದ್ಯಗಳನ್ನು ಆಡಿದ್ದೇನೆ. ಆದರೆ ಅದರ ಬಗ್ಗೆ ಜನರಿಗೆ ಹೆಚ್ಚು ತಿಳಿದಿಲ್ಲ ಅನಿಸುತ್ತದೆ. ವಿಭಿನ್ನ ಪರಿಸ್ಥಿತಿಗಳಿಗೆ ಹೊಂದಿಕೊಳ್ಳುವುದು ಒಂದು ಸವಾಲಾಗಿತ್ತು, ಅದನ್ನು ನಾನು ಆನಂದಿಸಿದೆ,' ಎಂದು ಅವರು ಹೇಳಿದ್ದಾರೆ. ಟೂರ್ನಿಯ ಆರಂಭಿಕ ಪಂದ್ಯಗಳಲ್ಲಿ ವೈಭವ್ ಸೂರ್ಯವಂಶಿ ದೊಡ್ಡ ಮೊತ್ತ ಕಲೆಹಾಕಲು ವಿಫಲರಾಗಿದ್ದರು. ಅಲ್ಲದೆ, ಶ್ರೀಲಂಕಾ ಆಟಗಾರರೊಂದಿಗೆ ಮೈದಾನದಲ್ಲಿ ಸಣ್ಣ ಮಾತಿನ ಚಕಮಕಿಗೂ ಇಳಿದಿದ್ದರು. ಈ ಬಗ್ಗೆ ಪ್ರತಿಕ್ರಿಯಿಸಿದ ಅವರು, 'ತರಬೇತುದಾರರೊಂದಿಗೆ ಚರ್ಚಿಸಿದ ನಂತರ ನಾನು ತಪ್ಪುಗಳನ್ನು ತಿದ್ದಿಕೊಂಡೆ. ಈ ಸರಣಿಯಿಂದ ಸಾಕಷ್ಟು ಕಲಿತಿದ್ದೇನೆ,' ಎಂದು ಹೇಳಿದರು. ಭಾರತ 'ಎ' ತಂಡದ ನಾಯಕ ತಿಲಕ್ ವರ್ಮಾ ತಂಡದ ಪ್ರದರ್ಶನವನ್ನು ಶ್ಲಾಘಿಸಿದ್ದಾರೆ. ಸತತ ಪಂದ್ಯಗಳ ಸೋಲಿನ ನಂತರವೂ ತಂಡವು ಫೈನಲ್‌ನಲ್ಲಿ ತೋರಿದ ದಿಟ್ಟತನ ಅದ್ಭುತವಾಗಿತ್ತು ಎಂದಿದ್ದಾರೆ. ಶ್ರೀಲಂಕಾ 'ಎ' ತಂಡದ ನಾಯಕ ಸಹನ್ ಅರಾಚ್ಚಿಗೆ ಕೂಡ ವೈಭವ್ ಅವರ ಸ್ಫೋಟಕ ಇನ್ನಿಂಗ್ಸ್ ತಮ್ಮ ತಂಡವನ್ನು ಆರಂಭದಲ್ಲೇ ಸಂಕಷ್ಟಕ್ಕೆ ತಳ್ಳಿತು ಎಂದು ಒಪ್ಪಿಕೊಂಡಿದ್ದಾರೆ. ಒಟ್ಟಿನಲ್ಲಿ ಇದೀಗ ವೈಭವ್ ಸೂರ್ಯವಂಶಿ ಅವರು ನೀಡಿರುವ ಈ ಹೇಳಿಕೆ ಇದೀಗ ಎಲ್ಲೆಡೆ ವೈರಲ್ ಆಗಿದೆ.


ಲಿಂಗೈಕ್ಯ ಪರಮಪೂಜ್ಯರಿಗೆ
ಭಾವಪೂರ್ಣ ಪ್ರಣಾಮಗಳು



ಲಿಂಗೈಕ್ಯರಾದ
ಕನಕಪುರ ದೇಗುಲ
ಮಠದ ನಿ.ಪ್ರ.ಸ್ವಶ್ರೀ
ಮುಮ್ಮಡಿ
ನಿರ್ವಾಣ ಸ್ವಾಮೀಜಿ ಅವರಿಗೆ
ಭಾವಪೂರ್ಣ
ನಮನಗಳು

ಬೆಂಗಳೂರು ದಕ್ಷಿಣ ಜಿಲ್ಲೆಯ ಬಹುದೊಡ್ಡ ಆಧ್ಯಾತ್ಮಿಕ ಕೊಂಡಿ ಕಳಚಿ ಹೋಗಿದೆ. ಕ್ಷೇತ್ರದ ಅಭಿವೃದ್ಧಿಯ ವಿಚಾರದಲ್ಲಿ ಶ್ರೀಗಳು ನೀಡುತ್ತಿದ್ದ ಅನೇಕ ಸಲಹೆಗಳು ನಮ್ಮ ಅರಿವನ್ನು ಜಾಗೃತಗೊಳಿಸಿದ್ದವು. ಇಂತಹ ಹಿರಿಯರ ಅಗಲಿಕೆ ದೊಡ್ಡ ನಿರ್ವಾತವನ್ನು ಸೃಷ್ಟಿಸಿದೆ. ಪರಮಪೂಜ್ಯರ ಅಗಲಿಕೆಯಿಂದ ಉಂಟಾದ ದುಃಖವನ್ನು ಭರಿಸುವ ಶಕ್ತಿಯನ್ನು ಮಠದ ಭಕ್ತಾದಿಗಳಿಗೆ ಆ ದೇವರು ನೀಡಲಿ. ಶ್ರೀಗಳ ಆತ್ಮಕ್ಕೆ ಶಾಂತಿ ಲಭಿಸಲಿ ಎಂದು ಪ್ರಾರ್ಥಿಸುತ್ತೇನೆ

ಸಂತಾಪ ಕೋರುವವರು
**ಪಿ.ಜಿ.ಆರ್.ಸಿಂಧ್ಯಾ**
**ಮಾಜಿ ಸಚಿವರು, ರಾಜ್ಯ ಮುಖ್ಯ ಆಯುಕ್ತರು**
**ಭಾರತ್ ಸ್ಕೌಟ್ಸ್ ಅಂಡ್ ಗೈಡ್ಸ್, ಕರ್ನಾಟಕ**